ಸಂಪುಟ: 06 ಸಂಚಿಕೆ: 93 ಪುಟಗಳು: 08 ಮಂಗಳವಾರ 16 ಜೂನ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಾರು ಏನೇನು ಮಾಡ್ತಾ ಇದ್ದಾರೆ, ಹೇಗೆ, ಯಾಕೆ ಇತ್ಯಾದಿ ಅನವಶ್ಯಕ ವಿವರಗಳಿಂದ ದೂರ ಇದ್ದಷ್ಟೂ ಒತ್ತಡ ಕಮ್ಮಿಯಾಗಿ ಸುಖ ಹೆಚ್ಚುತ್ತದೆ !

# ಇರಾನ್-ಅಮೆರಿಕಾ ಸಂಘರ್ಷ ಅಂತ್ಯ



## ಹೊರ್ಮುಜ್ ಜಲಸಂಧಿ ಮುಕ್ತಗೊಳಿಸಲು ಉಭಯದೇಶಗಳು ಒಪ್ಪಿಗೆ, ಜೂನ್.19ರಂದು ಸ್ವಿಟ್ಜರ್‌ಲೆಂಡ್‌ನಲ್ಲಿ ಶಾಂತಿ ಒಪ್ಪಂದಕ್ಕೆ ಔಪಚಾರಿಕ ಸಹಿ

**ಪರಮಾಣು ಯೋಜನೆ**

ಇರಾನ್‌ನ ಪರಮಾಣು ಕಾರ್ಯತಂತ್ರವು ಒಪ್ಪಂದವನ್ನು ಕಗ್ಗಂಟಾಗಿಸಿರುವ ವಿಚಾರಗಳಲ್ಲಿ ಮುಖ್ಯವಾದದ್ದು. ಅಮೆರಿಕ ಹಾಗೂ ಇಸ್ರೇಲ್ ಪಡೆಗಳು ಇರಾನ್‌ನ ಅಣ್ವಸ್ತ್ರ ಮೂಲಸೌಕರ್ಯಗಳನ್ನು ಗುರಿಯಾಗಿಸಿ 2025ರಲ್ಲೂ ದಾಳಿ ಮಾಡಿದ್ದವು. ಇರಾನ್ ಅಣ್ವಸ್ತ್ರ ಅಭಿವೃದ್ಧಿಪಡಿಸದಂತೆ ನೋಡಿಕೊಳ್ಳುವುದು ಅಮೆರಿಕದ ಬಯಕೆಯಾಗಿದೆ. ಅದರಂತೆ, ಸಮೃದ್ಧಿಕರಿಸಿದ ಯುರೇನಿಯಂ ಅನ್ನು ತ್ಯಜಿಸಬೇಕು.

• ಉದಯವಾಹಿನಿ, ವಾಷಿಂಗ್ಟನ್

108 ದಿನಗಳ ಇರಾನ್ ಮತ್ತು ಅಮೆರಿಕ ಸಂಘರ್ಷ ಕೊನೆಗೂ ಅಂತ್ಯಗೊಂಡಿದೆ. 14 ಅಂಶಗಳ ಅಡಿ ಉಭಯ ರಾಷ್ಟ್ರಗಳು ಶಾಂತಿ ಒಪ್ಪಂದ ಮಾಡಿಕೊಂಡಿವೆ. ಶಾಂತಿ, ಕದನ ವಿರಾಮ, ಹಾರ್ಮುಜ್ ಮುಕ್ತ, ಮಿಲಿಟರಿ ಪಡೆ ಹಿಂಪಡೆಯುವುದು, ಇರಾನ್ ಪುನರ್ ನಿರ್ಮಾಣ ವೆಚ್ಚ ಸೇರಿದಂತೆ 14 ಅಂಶಗಳಡಿ ಶಾಂತಿ ಒಪ್ಪಂದವಾಗಿದೆ.

ಇರಾನ್ ಜೊತೆ ಶಾಂತಿ ಒಪ್ಪಂದವನ್ನು ಅಂತಿಮಗೊಳಿಸಲಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲಾಗುವುದು, ಅಮೆರಿಕದ ನೌಕಾ ದಿಗ್ಬಂಧನವನ್ನು ತಕ್ಷಣವೇ ತೆಗೆದುಹಾಕಲಾಗುವುದು ಎಂದು ತಿಳಿಸಿದ್ದಾರೆ.

ಟ್ರೂತ್ ಸೋಶಿಯಲ್ ಪ್ಲಾಟ್‌ಫಾರ್ಮ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಟ್ರಂಪ್, ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನೊಂದಿಗಿನ ಒಪ್ಪಂದವು ಈಗ ಪೂರ್ಣಗೊಂಡಿದೆ. ಎಲ್ಲರಿಗೂ ಅಭಿನಂದನೆಗಳು ಹಾರ್ಮುಜ್ ಜಲಸಂಧಿಯನ್ನು ಟೋಲ್-ಫ್ರೀ ಆಗಿ ತೆರೆಯಲು ನಾನು ಈ ಮೂಲಕ ಸಂಪೂರ್ಣವಾಗಿ ಅಧಿಕಾರ ನೀಡುತ್ತೇನೆ. ಅದೇ ಸಮಯದಲ್ಲಿ ಯುನೈಟೆಡ್ ಸ್ಟೇಟ್ಸ್ ನೌಕಾ ದಿಗ್ಬಂಧನವನ್ನು ತಕ್ಷಣ ತೆಗೆದುಹಾಕಲು ಅಧಿಕಾರ ನೀಡುತ್ತೇನೆ.

ವಿಶ್ವದ ಹಡಗುಗಳೇ, ನಿಮ್ಮ ಇಂಜಿನ್‌ಗಳನ್ನು ಪ್ರಾರಂಭಿಸಿ. ತೈಲ ಹರಿಯಲಿ ಎಂದು ಟ್ರಂಪ್ ಬರೆದಿದ್ದಾರೆ. ಮಾತುಕತೆಗಳ ನಂತರ ಅಮೆರಿಕ ಮತ್ತು ಇರಾನ್ ನಡುವಿನ ಶಾಂತಿ ಒಪ್ಪಂದವನ್ನು ತಲುಪಲಾಗಿದೆ ಎಂದು ಘೋಷಿಸಲು ನಾವು ಸಂತೋಷಪಡುತ್ತೇವೆ. ಲೆಬನಾನ್ ಸೇರಿದಂತೆ ಎಲ್ಲಾ ಕಡೆ ಮಿಲಿಟರಿ ಕಾರ್ಯಾಚರಣೆಗಳನ್ನು ತಕ್ಷಣ ಮತ್ತು ಶಾಶ್ವತವಾಗಿ ಕೊನೆಗೊಳಿಸುವುದಾಗಿ ಎರಡೂ ರಾಷ್ಟ್ರಗಳು ಘೋಷಿಸಿವೆ ಎಂದು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ನಲ್ಲಿ ಬರೆದಿದ್ದಾರೆ. ಹಾರ್ಮುಜ್ ಜಲಸಂಧಿಯು ಮತ್ತೆ ಎಲ್ಲಾ ಹಡಗುಗಳಿಗೆ ಯಾವಾಗ ತೆರೆದಿರುತ್ತದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಹಾರ್ಮುಜ್ ಜಲಸಂಧಿಯು ವಿಶ್ವದ ಅತ್ಯಂತ ಜನನಿಬಿಡ ತೈಲ ಸಾಗಣೆ ಮಾರ್ಗಗಳಲ್ಲಿ ಒಂದಾಗಿದೆ. ವಿಶ್ವದ ತೈಲ ಮತ್ತು ನೈಸರ್ಗಿಕ ಅನಿಲ ಪೂರೈಕೆಯ ಸುಮಾರು ಐದನೇ ಒಂದು ಭಾಗದಷ್ಟು ಕೇಂದ್ರಬಿಂದುವಾಗಿದೆ. ಫೆ.28ರಂದು ಯುದ್ಧ ಪ್ರಾರಂಭವಾದಾಗ ಇರಾನ್ ಈ ಪ್ರಮುಖ ಜಲಮಾರ್ಗವನ್ನು ಇರಾನ್ ಮುಚ್ಚಿತು. ಇದರಿಂದ ಭಾರತದ ತೈಲ ಮತ್ತು ಅನಿಲ ಪೂರೈಕೆಯಲ್ಲೂ ಬಿಕ್ಕಟ್ಟು ಉಂಟಾಗಿತ್ತು. ಏಪ್ರಿಲ್‌ನಲ್ಲಿ ಪಾಕಿಸ್ತಾನದಲ್ಲಿ ಶಾಂತಿ ಮಾತುಕತೆಗಳು ಪ್ರಗತಿ ಸಾಧಿಸಲು ವಿಫಲವಾದ ನಂತರ ಅಮೆರಿಕವು ಇರಾನಿನ ಬಂದರುಗಳ ಮೇಲೆ ತನ್ನ ದಿಗ್ಬಂಧನವನ್ನು ಘೋಷಿಸಿತ್ತು.

ಲೆಬನಾನ್ ಸೇರಿದಂತೆ ಎಲ್ಲಾ ರಂಗಗಳಲ್ಲಿ ತಕ್ಷಣದ ಮತ್ತು ಶಾಶ್ವತ ಕದನ ವಿರಾಮ. ಇರಾನ್‌ನ ಆಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡದಿರಲು ಅಮೆರಿಕದ ಬದ್ಧತೆ. 30 ದಿನಗಳಲ್ಲಿ ಹಾರ್ಮುಜ್ ಜಲಸಂಧಿಯ ನೌಕಾ ದಿಗ್ಬಂಧನದ ಅಂತ್ಯ ಮತ್ತು ಪುನ ತೆರೆಯುವಿಕೆ. ಇರಾನ್ ಸುತ್ತಮುತ್ತಲಿನ ಪ್ರದೇಶಗಳಿಂದ ಅಮೆರಿಕದ ಮಿಲಿಟರಿ ಹಿಂತೆಗೆದುಕೊಳ್ಳುವಿಕೆ.

ತೈಲ ಸಂಬಂಧಿತ ನಿರ್ಬಂಧಗಳನ್ನು ಸ್ಥಗಿತಗೊಳಿಸುವುದು ಮತ್ತು ಇರಾನ್ ತನ್ನ ಆದಾಯಕ್ಕೆ ಪ್ರವೇಶವನ್ನು ಪುನಃಸ್ಥಾಪಿಸುವುದು. ಅಮೆರಿಕ ಮತ್ತು ಮಿತ್ರರಾಷ್ಟ್ರಗಳಿಂದ 300 ಬಿಲಿಯನ್ ಡಾಲರ್ ಪುನರ್ನಿರ್ಮಾಣ ನಿಧಿ. ಇರಾನ್‌ನ ಪರಮಾಣು ಕಾರ್ಯಕ್ರಮ ಮತ್ತು ವಿಶಾಲ ನಿರ್ಬಂಧಗಳ ಪರಿಹಾರದ ಮೇಲೆ ಕೇಂದ್ರೀಕರಿಸಿದ ಅಂತಿಮ ಒಪ್ಪಂದದ ಕಡೆಗೆ 60 ದಿನಗಳ ಮಾತುಕತೆಗಳು. ಎಮ್ಪಿಟಿ ಅಡಿಯಲ್ಲಿ ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸುವುದಿಲ್ಲ ಎಂದು ಇರಾನ್ ಪುನರುಚ್ಚರಿಸುತ್ತದೆ.


ಮಾತುಕತೆಗಳ ಸಮಯದಲ್ಲಿ ಯಾವುದೇ ಹೊಸ ಯುಎಸ್ ಪಡೆಗಳಿಗೆ ನಿರ್ಬಂಧಗಳಿಲ್ಲ. ಮಾತುಕತೆಯ ಅವಧಿಯಲ್ಲಿ ಇರಾನಿನ ಸ್ವತ್ತುಗಳಲ್ಲಿ 24 ಬಿಲಿಯನ್ ಡಾಲರ್ ಬಿಡುಗಡೆ. ಮೇಲ್ವಿಚಾರಣಾ ಕಾರ್ಯವಿಧಾನದ ರಚನೆ ಮತ್ತು ಅಂತಿಮ ಒಪ್ಪಂದಕ್ಕೆ ಯುಎನ್ ಭದ್ರತಾ ಮಂಡಳಿಯ ಅನುಮೋದನೆ. ಕ್ಷಿಪಣಿ ಕಾರ್ಯಕ್ರಮಗಳು ಮತ್ತು ಪ್ರಾದೇಶಿಕ ಮಿತ್ರ ಗುಂಪುಗಳಿಗೆ ಇರಾನ್‌ನ ಬೆಂಬಲವನ್ನು ಮಾತುಕತೆಯಿಂದ ಹೊರಗಿಡಲಾಗುತ್ತದೆ.

### ಎಲ್ಲಾ ಗುರಿಗಳಲ್ಲಿಯೂ ಸೋಲಿಸಿದ್ದೇವೆ

ಯುಎಸ್ ಜತೆಗೆ ಹೊಸದಾಗಿ ಘೋಷಿಸಲಾದ ಒಪ್ಪಂದದಿಂದ ಯುದ್ಧ ತಕ್ಷಣವೇ ಅಂತ್ಯವಾಗಿದೆ ಎಂದು ಇರಾನ್ ಕೂಡಾ ತಿಳಿಸಿದೆ. ಲೆಬನಾನ್ ಒಳಗೊಂಡಂತೆ ಯುದ್ಧಕ್ಕೆ ಶಾಶ್ವತ, ತಕ್ಷಣದ ಮುಕ್ತಾಯವನ್ನು ಘೋಷಿಸಲಾಗಿದೆ ಎಂದು ಅದು ಹೇಳಿದೆ. ಇರಾನ್‌ನ ಉಪ ವಿದೇಶಾಂಗ ಸಚಿವ ಕಜೆಮ್ ಘರಿಬಬಾದಿ ಸೋಮವಾರ ಪ್ರತಿಕ್ರಿಯಿಸಿ, ಅಮೆರಿಕ ವಿರುದ್ಧದ ಯುದ್ಧದಲ್ಲಿ ನಮ್ಮ ದೇಶವು ಮಹಾನ್ ವಿಜಯ ಸಾಧಿಸಿದೆ. ತನ್ನ ದುಷ್ಟ ಗುರಿಗಳನ್ನು ಸಾಧಿಸಲು ದಾಳಿ ಮಾಡಿದ ಶತ್ರುವನ್ನು ಅದರ ಎಲ್ಲಾ ಗುರಿಗಳಲ್ಲಿ ಸೋಲಿಸಿದ್ದೇವೆ.

ಇಸ್ಲಾಮಿಕ್ ಗಣರಾಜ್ಯ ಇರಾನ್‌ಗೆ ಯುದ್ಧದಲ್ಲಿ ದೊಡ್ಡ ಗೆಲುವಾಗಿದೆ ಎಂದು ಹೇಳಿದ್ದಾರೆ.ಒಪ್ಪಂದ ಅಂತಿಮಗೊಳ್ಳುವ ಕೆಲವೇ ಗಂಟೆಗಳ ಮುನ್ನ ಲೆಬನಾನ್‌ನ ಬೈರುತ್‌ನಲ್ಲಿರುವ ಹೆಜ್ಬೊಲ್ಲಾ ಉಗ್ರರ ಗುರಿಗಳ ಮೇಲೆ ಇಸ್ರೇಲ್ ವಾಯುದಾಳಿ ನಡೆಸಿತ್ತು. ಇದು ಉದ್ವಿಗ್ನತೆ ಹೆಚ್ಚಿಸಿತ್ತು. ಇದರಿಂದ ಕೆರಳಿದ ಟ್ರಂಪ್, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು ಎಂದು ವರದಿಯಾಗಿತ್ತು.

### ಪ್ರಧಾನಿ ಮೋದಿ ಮೆಚ್ಚುಗೆ



ಮಧ್ಯಪ್ರಾಚ್ಯದಲ್ಲಿ ಹಲವು ತಿಂಗಳುಗಳಿಂದ ಮುಂದುವರಿದಿದ್ದ ಉದ್ವಿಗ್ನತೆ ಅಂತ್ಯಗೊಳಿಸಲು ಅಮೆರಿಕ ಮತ್ತು ಇರಾನ್ ನಡುವೆ ನಡೆದಿರುವ ಒಪ್ಪಂದವನ್ನು ಪ್ರಧಾನಿ ನರೇಂದ್ರ ಮೋದಿಯವರು ಸೋಮವಾರ ಸ್ವಾಗತಿಸಿದ್ದಾರೆ. ಈ ಒಪ್ಪಂದದಿಂದ ಜಾಗತಿಕ ಆರ್ಥಿಕತೆಗೆ ಉಂಟಾಗಿದ್ದ ಅಡಚಣೆಗಳು ನಿವಾರಣೆಯಾಗುವ ಜೊತೆಗೆ, ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಮರುಸ್ಥಾಪನೆಯಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.ಯುರೋಪ್ ಪ್ರವಾಸದ ಅಂಗವಾಗಿ ಸ್ಲೋವಾಕಿಯಾದ ರಾಜಧಾನಿ ಬ್ರಾಟಿಸ್ಲಾವಾಹೆ ಭೇಟಿ ನೀಡಿರುವ ಪ್ರಧಾನಿ ಮೋದಿ, ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯೆ ನೀಡಿದ್ದು, ಮಧ್ಯಪ್ರಾಚ್ಯ ಸಂಘರ್ಷ ಅಂತ್ಯಗೊಳಿಸುವ ಕುರಿತು ಅಮೆರಿಕ ಮತ್ತು ಇರಾನ್ ನಡುವೆ ಮೂಡಿರುವ ಪರಸ್ಪರ ಒಪ್ಪಂದವನ್ನು ನಾನು ಸ್ವಾಗತಿಸುತ್ತೇನೆ. ಈ ಸಂಘರ್ಷದಿಂದ ವಿಶ್ವದಾದ್ಯಂತ ಆರ್ಥಿಕ ವ್ಯತ್ಯಯ ಉಂಟಾಗಿದ್ದು, ಹಲವು ದೇಶಗಳಲ್ಲಿ ಜೀವಹಾನಿಯೂ ಸಂಭವಿಸಿದೆ.ಈ ಒಪ್ಪಂದದ ಅನುಷ್ಠಾನದಿಂದ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಮರುಸ್ಥಾಪನೆಯಾಗಲಿ. ಜೊತೆಗೆ ಸಾಗರ ಮಾರ್ಗದ ಸಂಚಾರ ಹಾಗೂ ವ್ಯಾಪಾರದ ಸ್ವಾತಂತ್ರ್ಯ ಪುನಃ ಖಚಿತವಾಗಲಿ ಎಂಬುದು ಭಾರತದ ಆಶಯವಾಗಿದೆ.




### ಕಚ್ಚಾ ತೈಲ ಬೆಲೆ ಭಾರಿ ಇಳಿಕೆ

ಅಮೆರಿಕ ಮತ್ತು ಇರಾನ್ ಸಂಘರ್ಷ ಅಂತ್ಯಗೊಂಡು ಶಾಂತಿ ಒಪ್ಪಂದ ಘೋಷಣೆ ಬೆನ್ನಲ್ಲೇ ಕಚ್ಚಾ ತೈಲ ಬೆಲೆಗಳಲ್ಲಿ ಇಳಿಕೆಯಾಗಿದೆ. ಕಚ್ಚಾ ತೈಲ ಬ್ಯಾರಲ್‌ಗೆ ಸುಮಾರು 80 ಡಾಲರ್‌ಗೆ ಇಳಿದರೆ, ಬ್ರೆಂಟ್ ಕಚ್ಚಾ ತೈಲವು ಸುಮಾರು 4% ರಷ್ಟು ಕುಸಿದು ಪ್ರತಿ ಬ್ಯಾರಲ್‌ಗೆ 83.82 ಡಾಲರ್‌ಗೆ ತಲುಪಿದೆ. ಅಮೆರಿಕ ಮತ್ತು ಇರಾನ್ ಶಾಂತಿ ಒಪ್ಪಂದ ಘೋಷಿಸಿದ್ದು, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಒಪ್ಪಿಕೊಂಡಿವೆ. ಹೀಗಾಗಿ, ಕಚ್ಚಾ ತೈಲ ಬೆಲೆಯಲ್ಲಿ ಕುಸಿತ ಕಂಡುಬಂದಿದೆ. ಈ ಬೆಳವಣಿಗೆಯು ಜಾಗತಿಕ ಇಂಧನ ಪೂರೈಕೆಯಲ್ಲಿನ ಅಡಚಣೆಗಳ ಬಗೆಗಿದ್ದ ಕಳವಳ ನಿವಾರಣೆ ಮಾಡಿದೆ. ವಿಶ್ವಾದ್ಯಂತ ಇಂಧನ ಬೆಲೆಗಳು ಕಡಿಮೆಯಾಗುವ ಭರವಸೆಯನ್ನು ಹುಟ್ಟುಹಾಕಿದೆ.



### ಇರಾನ್ ಬೆಂಬಲಿತ ಪಡೆಗಳು

ಪಶ್ಚಿಮ ಏಷ್ಯಾದಾದ್ಯಂತ ಇರಾನ್ ಬೆಂಬಲಿತ ಸಂಘಟನೆಗಳ ಜಾಲ ಹರಡಿದೆ. ಇವು, ಹಲವು ಸಂಘರ್ಷಗಳಿಗೂ ಕಾರಣವಾಗಿವೆ. 2023ರ ಅಕ್ಟೋಬರ್ 7ರಂದು ಇಸ್ರೇಲ್ – ಹಮಾಸ್ ಯುದ್ಧವೂ ಇದರದ್ದೇ ಬಳುವಳಿ. ಯೆಮನ್‌ನಲ್ಲಿರುವ ಹುಥಿ, ಲೆಬನಾನ್‌ನಲ್ಲಿರುವ ಹಿಜ್ಬುಲ್ಲಾ ಸಂಘಟನೆಯ ಹಿಂದೆ ಇರಾನ್ ಇದೆ.

ಈ ಸಂಘಟನೆಗಳಿಗೆ ನೆರವು ನೀಡುವುದನ್ನು ಇರಾನ್ ನಿಲ್ಲಿಸಬೇಕು ಎಂಬ ಷರತ್ತು ಒಪ್ಪಂದದ ಕರಡಿನಲ್ಲಿ ಇದೆ ಎಂದು ಅಮೆರಿಕದ ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ಬಿಬಿಸಿ ವರದಿ ಮಾಡಿದೆ.

### ನಷ್ಟ ಪರಿಹಾರದ ಪ್ರಸ್ತಾಪ

ಶಾಂತಿ ಮಾತುಕತೆ ವೇಳೆ ನಷ್ಟ ಪರಿಹಾರಕ್ಕಾಗಿ ಬೇಡಿಕೆ ಇಟ್ಟಿರುವ ಇರಾನ್, ಅಮೆರಿಕ ಮತ್ತು ಇಸ್ರೇಲ್ ಪಡೆಗಳು ಫೆಬ್ರುವರಿ 28ರಂದು ದಾಳಿ ಆರಂಭಿಸಿದಾಗಿನಿಂದ, ನೇರವಾಗಿ ಮತ್ತು ಪರೋಕ್ಷವಾಗಿ ಸುಮಾರು 270 ಬಿಲಿಯನ್ ಡಾಲರ್ (ಅಂದಾಜು 25 ಲಕ್ಷ ಕೋಟಿ) ನಷ್ಟ ಅನುಭವಿಸಿರುವುದಾಗಿ ಹೇಳಿಕೊಂಡಿದೆ.

ಇಷ್ಟು ಪರಿಹಾರ ನೀಡಲು ಅಮೆರಿಕ ಒಪ್ಪದಿದ್ದರೂ, ಹಣಕಾಸಿನ ನೆರವಿನ ವಿಚಾರ ಒಪ್ಪಂದದ ಭಾಗವಾಗಿರಲಿದೆ ಎನ್ನಲಾಗಿದೆ. ಆದರೆ, ಈ ಬಗ್ಗೆ ಒಮ್ಮತ ಮೂಡದ ಹೊರತು, ಯಾವುದೇ ತೀರ್ಮಾನ ಅಸಾಧ್ಯ.

ಇರಾನ್ ತನ್ನ ಹೊಣೆಗಾರಿಕೆಯನ್ನು ನಿಭಾಯಿಸಿದರಷ್ಟೇ ಆರ್ಥಿಕ ಪ್ರಯೋಜನಗಳು ತಲುಪುತ್ತವೆ. ಶಾಶ್ವತ ಶಾಂತಿಯನ್ನು ಮರುಸ್ಥಾಪಿಸುವ ಸಾಮರ್ಥ್ಯ ಈ ಒಪ್ಪಂದಕ್ಕೆ ಇದೆ' ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಂಚಿಕೊಂಡಿದ್ದರು.

## ಸರ್ಕಾರಿ ಶಾಲೆಯಲ್ಲಿ ಓದಿದ 30 ಸಾವಿರ ಮಕ್ಕಳು ಅತಂತ್ರ!

• ಉದಯವಾಹಿನಿ,ಬೆಂಗಳೂರು

ಸರ್ಕಾರಿ ಶಾಲೆಯ ಮಕ್ಕಳಿಗೂ ಇಂಗ್ಲಿಷ್ ಮೀಡಿಯಂ ಶಿಕ್ಷಣ ಸಿಗಲಿ ಎಂಬ ಉದ್ದೇಶದಿಂದ ಆರಂಭವಾದ ಯೋಜನೆಯೊಂದು, ಈಗ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ಕತ್ತಲೆಗೆ ದೂಡಿದೆ. ಸರ್ಕಾರಿ ಶಾಲೆಯಲ್ಲಿ ಇಂಗ್ಲಿಷ್ ಮೀಡಿಯಂ ಓದಿದ ರಾಜ್ಯದ ಸುಮಾರು 30 ಸಾವಿರ ವಿದ್ಯಾರ್ಥಿಗಳು ಈಗ ಮುಂದೇನು ಮಾಡಬೇಕು ತೋಚದೆ ಅತಂತ್ರರಾಗಿದ್ದಾರೆ. ಜೂನ್ ತಿಂಗಳು ಅರ್ಧ ಕಳೆದರೂ ಶಿಕ್ಷಣ ಇಲಾಖೆ ಮಾತ್ರ ಈ ಗೊಂದಲಕ್ಕೆ ಇನ್ನೂ ಮುಕ್ತಿ ನೀಡಿಲ್ಲ. ಕಳೆದ 2018–19ನೇ ಶೈಕ್ಷಣಿಕ ವರ್ಷದಲ್ಲಿ ರಾಜ್ಯ ಸರ್ಕಾರವು ಬಡ ಮತ್ತು ಮಧ್ಯಮ ವರ್ಗದ ಮಕ್ಕಳ ಹಿತದೃಷ್ಟಿಯಿಂದ ರಾಜ್ಯಾದ್ಯಂತ ಆಯ್ದ 1001 ಸರ್ಕಾರಿ ಶಾಲೆಗಳಲ್ಲಿ 1ರಿಂದ 7ನೇ ತರಗತಿವರೆಗೆ ಇಂಗ್ಲಿಷ್ ಮಾಧ್ಯಮವನ್ನು ಆರಂಭಿಸಿತ್ತು. ಖಾಸಗಿ ಶಾಲೆಗಳ ಪೈಪೋಟಿಯ ನಡುವೆ ಹೆತ್ತವರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿದ್ದರು. ಅದರಂತೆ ಈ 1001 ಶಾಲೆಗಳಲ್ಲಿ ಇಂಗ್ಲಿಷ್ ಮೀಡಿಯಂನಲ್ಲಿ ಓದಿದ ಸುಮಾರು 30 ಸಾವಿರ ವಿದ್ಯಾರ್ಥಿಗಳು ಈಗ ಯಶಸ್ವಿಯಾಗಿ 7ನೇ ತರಗತಿ ಪಾಸಾಗಿದ್ದಾರೆ.

## ರಾಮನಗರ ಶಾಸಕ ಇಕ್ಬಾಲ್ ಹುಸೇನ್‌ಗೆ ಹೃದಯಾಘಾತ, ಆಸ್ಪತ್ರೆಗೆ ದಾಖಲು

• ಉದಯವಾಹಿನಿ, ಬೆಂಗಳೂರು

ರಾಮನಗರದ ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ಹೃದಯಾಘಾತವಾಗಿದ್ದು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಎಂದಿನಂತೆ ಕ್ಷೇತ್ರದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದರು. ಬಳಿಕ ಸಂಜೆ ವೇಳೆಗೆ ಮನೆಗೆ ಮರಳಿದ್ದರು. ತಡರಾತ್ರಿ ಎದೆ ನೋವು ಕಾಣಿಸಿಕೊಂಡಿತ್ತು.ಕುಟುಂಬದ ಸದಸ್ಯರು, ಆಪ್ತ ಸಹಾಯಕರು ಕೂಡಲೇ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ತುರ್ತು ಚಿಕಿತೆ?ಸ ನೀಡಿದ್ದ ವೈದ್ಯರು, ಸ್ಟಂಟ್ ಅಳವಡಿಸಿದ್ದಾರೆ. ಶಾಸಕರ ಆರೋಗ್ಯದಲ್ಲಿ ಚೇತರಿಕೆ ಕಂಡಿದೆ ಎಂದು ಮೂಲಗಳು ತಿಳಿಸಿವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ. ಸುರೇಶ್ ಆಸ್ಪತ್ರೆಗೆ ಭೇಟಿ ನೀಡಿ ಶಾಸಕರ ಆರೋಗ್ಯ ವಿಚಾರಿಸಿದ್ದಾರೆ.

ಇಕ್ಬಾಲ್ ಹುಸೇನ್, ಡಿ.ಕೆ.ಶಿವಕುಮಾರ್ ಅವರ ಪರಮಾಪ್ತ ಬಳಗದಲ್ಲಿ ಗುರುತಿಸಿಕೊಂಡಿದ್ದಾರೆ. ಅಧಿಕಾರ ಹಂಚಿಕೆಗೂ ಮುನ್ನ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು, ಹಾಗೇ ಆಗುತ್ತಾರೆ ಎಂದು ಇಕ್ಬಾಲ್ ಹುಸೇನ್ ಹಲವಾರು ಬಾರಿ ವಕಾಲತು ವಹಿಸಿದ್ದರು ಕೆಪಿಸಿಸಿಯಿಂದ ನೋಟಿಸ್ ನೀಡಿದ ಹೊರತಾಗಿಯೂ ಹೇಳಿಕೆ ನೀಡುವುದನ್ನು ನಿಲ್ಲಿಸಿರಲಿಲ್ಲ.

ಇತ್ತೀಚೆಗೆ ಡಿ.ಕೆ.ಶಿವಕುಮಾರ್ ಅವರು ಸ್ವಕ್ಷೇತ್ರ ಕನಕಪುರದಲ್ಲಿ ಕೃತಜ್ಞತೆ ಸಮರ್ಪಣಾ ಜಾಥಾ ನಡೆಸಿದಾಗ ಇಕ್ಬಾಲ್ ಹುಸೇನ್ ಜೊತೆಯಲ್ಲೇ ನಿಂತು ಜಾಥಾದಲ್ಲಿ ಭಾಗವಹಿಸಿದ್ದರು.

## ಕಡಿಮೆ ವೆಚ್ಚದಲ್ಲಿ ವಿದ್ಯುತ್ ಪ್ರಸರಣ ಸಾಮರ್ಥ್ಯ ಶೇ.25 ರಷ್ಟು ಹೆಚ್ಚಳದ ಗುರಿ

• ಉದಯವಾಹಿನಿ,ಬೆಂಗಳೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ರಾಜ್ಯದ ವಿದ್ಯುತ್ ಪ್ರಸರಣ ಜಾಲದ ಆಧುನೀಕರಣದತ್ತ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಶೂನ್ಯ ವೆಚ್ಚದಲ್ಲಿ ರಾಜ್ಯದ ವಿದ್ಯುತ್ ಪ್ರಸರಣ ಸಾಮರ್ಥ್ಯವನ್ನು ಶೇಕಡಾ 25ರಷ್ಟು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಗೆ ಮುಂದಾಗಿದೆ. ಬೆಂಗಳೂರು ನಗರದ ಪುಟ್ಟೇನಹಳ್ಳಿ – ಸಹಕಾರನಗರ 220 ಕೆವಿ ವಿದ್ಯುತ್ ಪ್ರಸರಣ ಮಾರ್ಗದಲ್ಲಿ 'ಡೈನಾಮಿಕ್ ಲೈನ್ ರೇಟಿಂಗ್' (ಡಿಎಲ್‌ಆರ್) ಪ್ರಾಯೋಗಿಕ ಯೋಜನೆ ಅಳವಡಿಕೆ ಆರಂಭಿಸಿದೆ.

ಈ ಯೋಜನೆಯ ಅನುಷ್ಠಾನಕ್ಕೆ ಕಾರ್ಯಾದೇಶ ಪತ್ರವನ್ನು ನೀಡಲಾಗಿದೆ. ಈ ಮೂಲಕ ಇಂತಹ ಅತ್ಯಾಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುತ್ತಿರುವ ದಕ್ಷಿಣ ಭಾರತದ ಮೊದಲ ರಾಜ್ಯ ವಿದ್ಯುತ್ ಪ್ರಸರಣ ನಿಗಮವಾಗಿ ಹೊರ ಹೊಮ್ಮಿದೆ.

ಈ ಹೊಸ ತಂತ್ರಜ್ಞಾನದ ಮೂಲಕ, ಯಾವುದೇ ಹೆಚ್ಚುವರಿ ಟವರ್‌ಗಳ ನಿರ್ಮಾಣ ಅಥವಾ ಹೊಸ ಭೂ ಸ್ವಾಧೀನದ ಅಗತ್ಯವಿಲ್ಲದೇ, ಅಸ್ತಿತ್ವದಲ್ಲಿರುವ ಮೂಲಸೌಕರ್ಯದ ವಿದ್ಯುತ್ ಪ್ರಸರಣ ಸಾಮರ್ಥ್ಯವನ್ನು ಶೇಕಡಾ 25 ರಷ್ಟು ಹೆಚ್ಚಿಸುವ ಗುರಿಯನ್ನು ನಿಗಮ ಹೊಂದಿದೆ.ಈ ಯೋಜನೆಯು ಪ್ರಸ್ತುತ ಜಾರಿಯಲ್ಲಿರುವ ಸಾಂಪ್ರದಾಯಿಕ ಸ್ಟಾಟಿಕ್ ಲೈನ್ ರೇಟಿಂಗ್' ವಿಧಾನದ ಬದಲಿಗೆ, ಐಒಟಿ ಸಂವೇದಕಗಳನ್ನು ಬಳಸುತ್ತದೆ.

## ರೇಣುಕಾಸ್ವಾಮಿ ಕೊಲೆ ಕೇಸ್: ವಾರದಲ್ಲಿ 4 ದಿನ ಟ್ರಯಲ್, ಖುದ್ದು ಹಾಜರಾತಿ ಕೇಳಿದ ದರ್ಶನ್

• ಉದಯವಾಹಿನಿ,ಬೆಂಗಳೂರು

ಸ್ಯಾಂಡಲ್‌ವುಡ್ ನಟ ದರ್ಶನ್ ಮತ್ತು ಇತರರು ಆರೋಪಿಗಳಾಗಿರುವ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ವಿಚಾರಣೆ ಇದೀಗ ಅತ್ಯಂತ ನಿರ್ಣಾಯಕ ಘಟ್ಟಕ್ಕೆ ತಲುಪಿದೆ. ಪ್ರಕರಣದ ತ್ವರಿತಗತಿ ವಿಚಾರಣೆಗೆ ಸಂಬಂಧಿಸಿದಂತೆ ಸಿಸಿಎಚ್ 59 ರ ಸೆಷನ್ಸ್ ನ್ಯಾಯಾಲಯವು ಮಹತ್ವದ ಆದೇಶ ನೀಡಿದ್ದು, ವಾರದಲ್ಲಿ ಕನಿಷ್ಠ ನಾಲ್ಕು ದಿನಗಳ ಕಾಲ ನಿರಂತರ ವಿಚಾರಣೆ ನಡೆಸಲು ಸಮ್ಮತಿ ಸೂಚಿಸಿದೆ. ಸುಪ್ರೀಂ ಕೋರ್ಟ್‌ನ ಕಟ್ಟುನಿಟ್ಟಿನ ನಿರ್ದೇಶನದ ಬೆನ್ನಲ್ಲೇ, ಪ್ರಕರಣವನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದಂತೆ ನ್ಯಾಯಾಲಯ ಉಭಯ ವಕೀಲರಿಗೆ ಖಡಕ್ ಸೂಚನೆ ನೀಡಿದೆ. ವಿಚಾರಣೆ ವೇಳೆ ಸರ್ಕಾರದ ವಿಶೇಷ ಅಭಿಯೋಜಕ ಪ್ರಸನ್ನ ಕುಮಾರ್ ಅವರು, ಸುಪ್ರೀಂ ಕೋರ್ಟ್ ಸೂಚನೆಯಂತೆ ಒಂದು ವರ್ಷದೊಳಗೆ ಪ್ರಕರಣದ 60 ಪ್ರಮುಖ ಸಾಕ್ಷಿಗಳ ವಿಚಾರಣೆ ಮುಗಿಸಬೇಕಿದೆ.

## ಭ್ರಷ್ಟಾಚಾರ ನಿಯಂತ್ರಣಕ್ಕೆ ಶೀಘ್ರದಲ್ಲೇ ಖಾಯಂ ಪರಿಹಾರ : ಗೃಹ ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು



ನಾಗರಿಕರಿಗೆ ತೊಂದರೆ ನೀಡಿ, ಲಂಚ ಕೇಳುವ ಭ್ರಷ್ಟಾಚಾರದ ವ್ಯವಸ್ಥೆಗೆ ಮೇಲಟ್ಟದಿಂದಲೂ ಕಡಿವಾಣ ಹಾಕಲು ಖಾಯಂ ವ್ಯವಸ್ಥೆಯನ್ನು ಶೀಘ್ರವೇ ರೂಪಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಪೊಲೀಸರು ಜೈಪುರದಲ್ಲಿ ಲಂಚ ಕೇಳಿ ಸಿಕ್ಕಿಬಿದ್ದಿರುವುದು ಒಳ್ಳೆಯ ಬೆಳವಣಿಗೆಯಂತೂ ಅಲ್ಲ, ಇದರಿಂದ ರಾಜ್ಯದ ಜನತೆಗೆ ಧಕ್ಕೆಯುಂಟಾಗಿದೆ. ರಕ್ಷಕರೇ ಭಕ್ಷಕರಾಗುವುದನ್ನು ಸಹಿಸಲಾಗುವುದಿಲ್ಲ ಎಂದರು.

ಜೈಪುರದಲ್ಲಿ ಸಿಕ್ಕಿಬಿದ್ದ ಅಧಿಕಾರಿಗಳನ್ನು ಈಗಾಗಲೇ ಅಮಾನತುಗೊಳಿಸಲಾಗಿದೆ.ಉನ್ನತಾಧಿಕಾರಿಗಳು ಇದರಲ್ಲಿ ಭಾಗಿಯಾಗಿದ್ದಾರೆಯೇ ಎಂಬುದನ್ನು ಪರಿಶೀಲಿಸಲು ಆದೇಶಿಸಲಾಗಿದೆ ಎಂದರು. ವ್ಯವಸ್ಥೆ ತುಕ್ಕು ಹಿಡಿದಿದೆ. ಅದನ್ನು ಸರಿಪಡಿಸಲು ಸ್ವಲ್ಪ ಸಮಯಬೇಕು. ಭ್ರಷ್ಟಾಚಾರವನ್ನು ಬೇರು ಮಟ್ಟದಿಂದ ಕಿತ್ತೊಗೆಯಬೇಕಿದೆ. ಇದನ್ನು ಕೆಳ ಹಂತದಲ್ಲಷ್ಟೇ ಅಲ್ಲ ಮೇಲಟ್ಟದಿಂದಲೂ ಸರಿಪಡಿಸಬೇಕಿದೆ. ಯಾರೇ ಹಣ ಕೇಳಿದರೂ ನಮಗೆ ದೂರು ನೀಡಿ ಎಂದು ಮುಖ್ಯಮಂತ್ರಿಯವರು ಹೇಳಿದ್ದಾರೆ. ಪೊಲೀಸ್ ಠಾಣೆಗಳಲ್ಲಿ ಜನರಿಗೆ ತೊಂದರೆ ಕೊಡುವುದು, ಅವ್ಯವಹಾರ ಮಾಡುವುದು, ಲಂಚ ಕೇಳುವುದು, ಕರ್ತವ್ಯ ನಿರ್ವಹಿಸುವಾಗ ಭ್ರಷ್ಟಚಾರ ನಡೆಸುವುದು ಕಂಡು ಬಂದರೆ, ಜನರು ನೇರವಾಗಿ ನಮಗೆ ದೂರು ನೀಡುವ ವ್ಯವಸ್ಥೆಯನ್ನು ಗೃಹ ಇಲಾಖೆಯಲ್ಲಿ ಜಾರಿಗೊಳಿಸಲಾಗುವುದು ಎಂದು ಹೇಳಿದರು. ನನ್ನ ಇಲಾಖೆಯ ಆಗೂ- ಹೋಗುಗಳ ಹೊಣೆಗಾರಿಕೆಯನ್ನು ತೆಗೆದುಕೊಳ್ಳಲು ನಾನು ಸಿದ್ಧನಿದ್ದೇನೆ.

ಅದೇ ರೀತಿ ಬಿಜೆಪಿ ಸರ್ಕಾರದಲ್ಲಿ ಗೃಹ ಸಚಿವರಾಗಿದ್ದ ಆರ್. ಅಶೋಕ್, ಬಸವರಾಜ ಬೊಮ್ಮಾಯಿ, ಅರಗ ಜ್ಞಾನೇಂದ್ರ ಅವರ ಕಾಲದಲ್ಲಿ ಪೊಲೀಸ್ ಠಾಣೆಗಳಲ್ಲಿ ಭ್ರಷ್ಟಚಾರ ಇರಲಿಲ್ಲವೇ? ಈಗ ನಮ ಅಧಿಕಾರಿಗಳು ತಪ್ಪು ಮಾಡಿದರೆ, ನಾನು ಕ್ರಮ ಕೈಗೊಳ್ಳುವುದಾಗಿ ಧೈರ್ಯವಾಗಿ ಹೇಳುತ್ತಿದ್ದೇನೆ.

## ಗ್ಯಾರಂಟಿ ಯೋಜನೆ ಭ್ರಷ್ಟಾಚಾರದ ಬಗ್ಗೆ ರಾಜ್ಯ ಸರ್ಕಾರ ತನಿಖೆ ನಡೆಸಲಿ

• ಉದಯವಾಹಿನಿ, ಬೆಂಗಳೂರು



ಗ್ಯಾರಂಟಿ ಯೋಜನೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು ರಾಜ್ಯ ಸರ್ಕಾರ ತನಿಖೆ ನಡೆಸಲಿ ಎಂದು ಶಿವಮೊಗ್ಗ ಲೋಕಸಭಾ ಸಂಸದ ಬಿ. ವೈ. ರಾಘವೇಂದ್ರ ಆಗ್ರಹಿಸಿದ್ದಾರೆ.

ಮಾಧ್ಯಮದವರ ಜೊತೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ವಿಚಾರದಲ್ಲಿ ಕೆಲ ನ್ಯೂನತೆಗಳನ್ನು ನೋಡಿಕೊಂಡು ಮತ್ತೆ ಅರ್ಜಿ ಕರೆಯುವ ಕುರಿತ ಸಿಎಂ ಅವರ ಹೇಳಿಕೆಗಳನ್ನು ನಾನು ನೋಡಿದ್ದೇನೆ. ಈ ಮೂರುವರೆ ವರ್ಷ ದಾಖಲೆ ಇಲ್ಲದೆ ಸತ್ತು ಹೋದವರು ಒಂದೂ ಕಾಲು ಲಕ್ಷ ಹೆಣ್ಣು ಮಕ್ಕಳ ಹೆಸರಿನಲ್ಲಿ ಗೃಹಲಕ್ಷ್ಮಿ ದುರುಪಯೋಗದ ಬಗ್ಗೆ ತನಿಖೆ ನಡೆಸುತ್ತೀರಾ? ಎಂದು ಪ್ರಶ್ನಿಸಿದರು. ನೀವು ಪಂಚ ಗ್ಯಾರಂಟಿಯನ್ನು ಪ್ರತಿಯೊಬ್ಬ ವ್ಯಕ್ತಿಗೂ ನೀಡುವ ಭರವಸೆಯನ್ನು ನೀಡಿದ್ದೀರಿ. ಈಗ ಕೇವಲ ಶೇ.15 ರಷ್ಟು ಜನರಿಗೆ ಮಾತ್ರ ನೀಡುತ್ತಿದ್ದೀರಿ. ಯುವಕರು ಸೇರಿದಂತೆ ಕೇವಲ ಶೇ. 22 ರಷ್ಟು ಜನರಿಗೆ ಮಾತ್ರ ಗ್ಯಾರಂಟಿ ಯೋಜನೆ ತಲುಪುತ್ತಿದೆ. ಈ ವಿಚಾರದಲ್ಲಿ ತನಿಖೆಯನ್ನು ಮಾಡಿ, ಪರಿಶೀಲನೆ ಮಾಡಿ, ಎಲ್ಲರಿಗೂ ಸಿಗುವಂತಹ ಯೋಜನೆ ಮಾಡಿ. ಭ್ರಷ್ಟಾಚಾರ ಆಗಿರುವ ಬಗ್ಗೆ ತನಿಖೆಯನ್ನು ಮಾಡಿ. ಯಾರು ತಪ್ಪಿತಸ್ಥರಿರುತ್ತಾರೋ ಅವರಿಗೆ ಶಿಕ್ಷೆ ಕೊಡಿಸುವುದು ಸಹ ಸರ್ಕಾರದ ಕರ್ತವ್ಯವಾಗಿದೆ ಎಂದು ಹೇಳಿದರು. ಯೋಜನೆ ಜಾರಿ ಮಾಡುವಾಗ ಎಲ್ಲವನ್ನೂ ಯೋಚನೆ ಮಾಡಬೇಕಿತ್ತು. ಈಗ ಜ್ಞಾನೋದಯವಾದಂತೆ ಕಾಣುತ್ತದೆ. ರಾಜ್ಯ ಸರ್ಕಾರ ಕೇವಲ ಚರ್ಚೆಯ ಮೂಲಕನೇ ಕಾಲ ಕಳೆಯುತ್ತಿದೆ. ಮುಂದಿನ ದಿನಗಳಲ್ಲಿ ಆದ್ರೂ ಸಹ ಒಳ್ಳೆಯ ಆಡಳಿತವನ್ನು ನೋಡಬಹುದಾ? ಎಂಬ ನಿರೀಕ್ಷೆಯನ್ನು ರಾಜ್ಯದ ಜನ ಹೊಂದಿದ್ದಾರೆ ಎಂದರು. ಡಿ. ಕೆ. ಶಿವಕುಮಾರ್ ಅವರ ಮೊದಲ ಆದ್ಯತೆ ಕಸ ವಿಲೇವಾರಿಗೆ 30 ವರ್ಷದ ಟೆಂಡರ್, ಬಡವರಿಗೆ ಆದ್ಯತೆ ಅಂತ ಬಿಡದಿ ಟೌನ್ ಶಿಪ್ ಬಗ್ಗೆ ಚರ್ಚೆ ಮಾಡುತ್ತಿದ್ದಾರೆ. ಈಗ ಮಳೆ ಕಡಿಮೆ ಅಂತ ಚರ್ಚೆ ಆಗುತ್ತಿದೆ.

ಈಗ ರೈತರು ಉಳುಮೆ ಮಾಡಲು ತಯಾರಿ ಮಾಡಿಕೊಂಡಿದ್ದಾರೆ. ಆದರೆ ಮಳೆ ಬರ್ತಾ ಇಲ್ಲ. ಬಿತ್ತನೆ ಮಾಡಿದ್ರು ಮಳೆ ಬರುತ್ತಿಲ್ಲ. ಈ ಬಗ್ಗೆ ಗಮನ ಹರಿಸದ ಇವರು ದೊಡ್ಡ ಕಡೆ ಮಾತ್ರ ಗಮನ ಹರಿಸುತ್ತಿದ್ದಾರೆ ಎಂದು ಟೀಕಿಸಿದರು.ಟೌನ್ ಶಿಪ್ ಕುರಿತು ಪ್ರಧಾನಿ ನರೇಂದ್ರ ಮೋದಿ ಹಾಗೂ ಸಿಎಂ ಡಿ. ಕೆ. ಶಿವಕುಮಾರ್ ಅವರ ನಡುವೆ ಏನ್ ಮಾತುಕತೆ ನಡೆದಿದೆ ಅಂತ ನಮಗೆ ಗೊತ್ತಿಲ್ಲ.

ಪ್ರಧಾನಿಯವರು ಒಟ್ಟಾರೆ ಭೇಷ್ ಅಂದಿದ್ದಾರೋ, ಟೌನ್ ಶಿಪ್ ಬಗ್ಗೆ ಭೇಷ್ ಅಂದಿದ್ದಾರೋ ಗೊತ್ತಿಲ್ಲ ಎಂದು ಹೇಳಿದರು.

## ಕಸದಿಂದ ಕಾಸು ಹೊಡೆಯುವ ಸಂಚು, ಬೆಂಗಳೂರು ಜನತೆಗೆ ಡ್ಯಾಮೇಜು, ಕಾಂಗ್ರೆಸ್‌ಗೆ ಲಗೇಜು: ಆರ್. ಅಶೋಕ್

• ಉದಯವಾಹಿನಿ, ಬೆಂಗಳೂರು

ಕಸದಿಂದ ಕಾಸು ಹೊಡೆಯುವ ಸಂಚು ಮಾಡಿದ್ದಾರೆ. ಬೆಂಗಳೂರು ಜನತೆಗೆ ಇದು ಡ್ಯಾಮೇಜು, ಕಾಂಗ್ರೆಸ್‌ಗೆ ಲಗೇಜು ಎಂದು ವಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿದ ಅವರು, ಕಸದಿಂದ ಕಾಸು ಹೊಡೆಯುವ ಸಂಚು ಮಾಡಿದ್ದಾರೆ. ಬೆಂಗಳೂರು ಜನತೆಗೆ ಇದು ಡ್ಯಾಮೇಜು, ಕಾಂಗ್ರೆಸ್‌ಗೆ ಲಗೇಜು. ಕಸದಿಂದ ರಸ, ಕಸದಿಂದ ಕಾಸು ಮಾಡಿಕೊಳ್ಳಲು ಹೊರಟಿದ್ದಾರೆ. ನಾನು ಅಧಿಕಾರಿಗಳ ಸಮಿತಿಗೆ ಪತ್ರ ಬರೆದು ವಾಸ್ತವ ವರದಿ ಕೊಡಲು ಮನವಿ ಮಾಡಿದ್ದೇನೆ. ಕಸದ ಟೆಂಡರ್ ವಿರುದ್ಧ ಲೋಕಾಯುಕ್ತಕ್ಕೂ ದೂರು ಕೊಟ್ಟಿದ್ದೇನೆ. ರಾಜ್ಯಪಾಲರಿಗೂ ದೂರು ಕೊಟ್ಟಿದ್ದೇನೆ. ರಾಜ್ಯಪಾಲರು ಸರ್ಕಾರಕ್ಕೆ ಸ್ಟ್ರಾಂಗ್ ಪತ್ರ ಬರೆದಿದ್ದಾರೆ ಅನ್ನಿಸುತ್ತೆ. ಡಿಕೆಶಿಗೆ ಇರೋದು ಸಿಎಂ ಅವಧಿ 1 ವರ್ಷ 11 ತಿಂಗಳು. ಆದರೆ ಅವರು ಕಸದ ಟೆಂಡರ್ ಕೊಡ್ತಿರೋದು 30+30 ವರ್ಷಗಳಿಗೆ ಎಂದು ಟೀಕಿಸಿದರು.

ಝೊಂಜೀ, ಆಲ್ಫಾ, ಬೀಟಾ ಪೀಳಿಗೆವರೆಗೂ ಈ ಕಸದ ಟೆಂಡರ್ ಹಗರಣ ನೋಡ್ತಾರೆ. ಇಷ್ಟು ಸುದೀರ್ಘ ಅವಧಿಗೆ ಟೆಂಡರ್ ಕೊಡೋದು ನ್ಯಾಯಾನಾ



ಮಿಸ್ಟರ್ ಶಿವಕುಮಾರ್ ಬ್ರ್ಯಾಂಡ್ ಬೆಂಗಳೂರು ಮಾಡ್ತೀವಿ ಅಂತ ಹೇಳಿ ಇನ್ನೂ ಹಾಳು ಮಾಡಿದ್ರು. ಟನಲ್ ರಸ್ತೆ ಮಾಡಲು ಹೊರಟಿದ್ದೀರಿ, ಅದರ ಕರ್ಮಕಾಂಡದ ಬಗ್ಗೆ ಮುಂದೆ ಮಾಧ್ಯಮಗೋಷ್ಟಿ ಮಾಡ್ತೇನೆ. ಕಸದ ಟೆಂಡರ್ ಹಗರಣವನ್ನು ನಾನು ಬೆಂಗಳೂರಿಗರ ಪರವಾಗಿ ಬೆಳಕಿಗೆ ತಂದಿದ್ದೇನೆ. 39,437 ಕೋಟಿ ಮೊತ್ತದ ಈ ಕಸದ ಹಗರಣ ಬೆಂಗಳೂರಿಗರ ಮೇಲೆ ಅವರ ಮಕ್ಕಳು, ಮೊಮ್ಮಕ್ಕಳ ಮೇಲೆ ದೊಡ್ಡ ಹೊರೆ ಆಗಲಿದೆ. ಕಸದ ಟೆಂಡರ್ ವಿರುದ್ಧ ಬೆಂಗಳೂರಿನ ಜನ ಪತ್ರ ಚಳವಳಿ ಮಾಡಬೇಕು. ಎಲ್ರೂ ಸಿಎಂಗೆ, ರಾಜ್ಯಪಾಲರಿಗೆ, ರಾಷ್ಟ್ರಪತಿಗಳಿಗೆ ಪತ್ರ ಬರೆಯಿರಿ ಎಂದು ನಗರದ ಜನತೆಗೆ ಆರ್. ಅಶೋಕ್‌ಗೆ ಕರೆ ನೀಡಿದರು. ಕಸದ ಮಾಫಿಯಾದ ಏಜೆಂಟ್ ಎಂಬ ಡಿಕೆಶಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ನಾನು ಜನರ ಏಜೆಂಟ್ ಕಸದ ಮಾಫಿಯಾದ ಏಜೆಂಟ್ ಅಲ್ಲ. ಟೆಂಡರ್ ಕರೆದಿರೋದು ನೀನಪ್ಪ ಡಿ.ಕೆ. ಶಿವಕುಮಾರ್. ನಾನು ಇದುವರೆಗೆ ಕಸದ ಟೆಂಡರ್ ಕರೆದಿಲ್ಲ.

ಟೆಂಡರ್ ಕರೆದು ಜನರ ಮೇಲೆ 39,437 ಕೋಟಿ ಹೊರೆ ಹಾಕಿ ಮಾಫಿಯಾದಲ್ಲಿ ಸಿಕ್ಕಿಕೊಂಡಿರೋದು ನೀವು. ಡಿಕೆಶಿ ಹೇಳಿಕೆ ಭೂತದ ಬಾಯಲ್ಲಿ ಭಗವದ್ಗೀತೆ ಹೇಳಿದಂತೆ. ಯಾವುದೇ ತನಿಖೆಗೆ ಸಿದ್ಧ ಅಂತ ಡಿಕೆಶಿ ಹೇಳಿದ್ದಾರೆ.ಬೆಂಗಳೂರು ಜನತೆಗೆ ಇದು ಡ್ಯಾಮೇಜು, ನಾನು ಈ ಪ್ರಕರಣ ಸಿಬಿಐಗೆ ಕೊಡಿ ಅಂದಿದ್ದೇನೆ.

ಸಿಬಿಐಗೆ ಅನುಮತಿ ಕೊಡಿ ನೋಡೋಣ ಎಂದು ಸವಾಲು ಹಾಕಿದರು.ಡಿಕೆಶಿಗೆ ತಾಕತ್ ಇದೆ, ಸಿದ್ದರಾಮಯ್ಯ ಅವರಿಂದ ಅಧಿಕಾರ ಕಿತ್ಕೊಂಡಿದ್ದಾರೆ ಅಂದ್ರೆ ತಾಕತ್ ಇರೋರೇ. ಅವರು ಈ ಪ್ರಕರಣ ಸಿಬಿಐಗೆ ಕೊಡಲಿ. ಎಲ್ಲವೂ ನನ್ನದೇ ಅಂತ ಡಿಕೆಶಿ ಹೊರಟಿದ್ದಾರೆ. ಕಸದ ಟೆಂಡರ್ ಹಗರಣ ವಿರುದ್ಧ ಹೋರಾಟ ಮಾಡ್ತೇವೆ ಎಂದು ಎಚ್ಚರಿಕೆ ರವಾನಿಸಿದರು.


### ಬಿಡದಿಗೆ ಬಂದು ನೋಡಲಿ ರಾಹುಲ್ ಗಾಂಧಿ

ಬಿಡದಿ ಟೌನ್‌ಶಿಪ್‌ಗೆ ವಿರೋಧ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಬಿಡದಿ ಟೌನ್ ಶಿಪ್ ವಿರುದ್ಧ ದೊಡ್ಡ ಹೋರಾಟ ನಡೀತಿದೆ. ನಮ್ಮ ತೆರಿಗೆ, ನಮ್ಮ ಹಕ್ಕು ಅಂದ್ರು ಸಿದ್ದರಾಮಯ್ಯ. ಈಗ ಬಿಡದಿ ರೈತರು ನಮ್ಮ ಭೂಮಿ ನಮ್ಮ ಹಕ್ಕು ಅಂತಿದ್ದಾರೆ. ಇದಕ್ಕೆ ಕಾಂಗ್ರೆಸ್ ನವರು ಉತ್ತರ ಕೊಡಲಿ. ರಾಹುಲ್ ಗಾಂಧಿ ಅಂಡಮಾನ್ ನಿಕೋಬಾರ್ ಗೆ ಹೋಗಿ ಕೇಂದ್ರ ಪರಿಸರ ನಾಶ ಮಾಡಿ ಯೋಜನೆ ಮಾಡ್ತಿದೆ ಅಂದ್ರು. ಇಲ್ಲಿ ಬಿಡದಿಯಲ್ಲಿ, ಅದೇ ತೆಂಗಿನಮರ, ಅಡಿಕೆ ಮರ, ರೇಷ್ಮೆ ಸೊಪ್ಪಿನ ಗಿಡ, ತರಕಾರಿ ಇದೆ. ಇಲ್ಲಿ ನಾಶ ಆಗಬಹುದು ಎಂದು ಕಿಡಿಕಾರಿದರು.

**ಈ ದಿನದ ದರ** ಪೆಟ್ರೋಲ್: 110.89 ₹/L ಡೀಸೆಲ್ : 98.80₹/L ಬಂಗಾರ: ₹ 15,153/Gram 24ct ₹13,890/Gram 22ct ಬೆಳ್ಳಿ: ₹265.00/Gram

# ಬಿಜೆಪಿ ಸರ್ಕಾರ ಬಿಡದಿಯ 1 ಸಾವಿರ ಎಕರೆ ಭೂಮಿ ಸ್ವಾಧೀನ ಮಾಡಿಕೊಂಡಾಗ ಇವರ್ಯಾಕೆ ಸುಮ್ಮನಿದ್ದರು ಕುಮಾರಸ್ವಾಮಿ ವಿರುದ್ಧ ಸಿಎಂ ಕಿಡಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಡದಿ ಟೌನ್‌ಶಿಪ್ ವಿವಾದ ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷಗಳ ನಡುವೆ ವಾಕ್ಸಮರಕ್ಕೆ ಕಾರಣವಾಗಿದೆ. ರೈತರಿಂದ ಈ ಯೋಜನೆಗೆ ಭಾರಿ ವಿರೋಧ ವ್ಯಕ್ತವಾಗುತ್ತಿರುವಂತೆಯೇ ಕಾನೂನು ಹೋರಾಟ ನಡೆಸಲಾಗುವುದು ಎಂದು ಜೆಡಿಎಸ್ ಹೇಳಿದೆ. ಈ ಮಧ್ಯೆ, ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಜೆಡಿಎಸ್ ಹಾಗೂ ಕೇಂದ್ರ ಸಚಿವ ಎಚ್. ಡಿ. ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು. ನಾನು ಯಾರ್ಯಾರೋ ಮಾತಿಗೆ ಉತ್ತರ ನೀಡಲು ಆಗುವುದಿಲ್ಲ. ಮಹಾರಾಷ್ಟ್ರದಲ್ಲಿ 90 ಸಾವಿರ ಎಕರೆ, ತೆಲಂಗಾಣದಲ್ಲಿ 40 ಸಾವಿರ ಎಕರೆಯಲ್ಲಿ ಟೌನ್ ಶಿಪ್ ಮಾಡುತ್ತಿದ್ದಾರೆ. ಬಿಡದಿಯದು ನನ್ನ ಯೋಜನೆಯಲ್ಲ. ಕುಮಾರಸ್ವಾಮಿ ಅವರು ಈ ಯೋಜನೆಗೆ ಅಧಿಸೂಚನೆ ಹೊರಡಿಸಿದ್ದರು. ಹಿಂದಿನ ಬಿಜೆಪಿ ಸರ್ಕಾರ ಈ ಜಾಗದಲ್ಲಿ 1 ಸಾವಿರ ಎಕರೆಯನ್ನು ಕೆಐಎಡಿಬಿಗೆ ಸ್ವಾಧೀನ ಪಡಿಸಿಕೊಟ್ಟಾಗ ಇವರು ಯಾಕೆ ಸುಮ್ಮನಿದ್ದರು ಹಾರೋಹಳ್ಳಿ ಕೈಗಾರಿಕಾ ಪ್ರದೇಶ ಮಾಡಿದ್ದು ಯಾರು? ಆಗ ರೈತರನ್ನು ಕಳುಹಿಸಿ ಇಲ್ಲಿ ರೈತರು ಜಮೀನು ನೀಡಲು ಮುಂದಾಗಿದ್ದಾರೆ. ಆದರೆ ಇವರಿಗೆ ರಾಜಕಾರಣ ಮಾಡಬೇಕು, ಮಾಡುತ್ತಿದ್ದಾರೆ ಎಂದು ಹರಿಹಾಯ್ದರು. **ಯಾವುದೇ ಕಾರಣಕ್ಕೂ ಗೃಹಲಕ್ಷ್ಮಿ ನಿಲ್ಲುವುದಿಲ್ಲ:** ಇದೇ ವೇಳೆ ಗೃಹ ಲಕ್ಷ್ಮಿ ಯೋಜನೆ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪುವಂತೆ ನೋಡಿಕೊಳ್ಳಲು ಸರ್ಕಾರ ಮುಂದಾಗಿದೆ. ಆರಂಭದಲ್ಲಿ ಕೆಲವು ಫಲಾನುಭವಿಗಳು ಬೇರೆಯವರ ದೂರವಾಣಿ ಸಂಖ್ಯೆ ಹಾಗೂ ಇತರೆ ಮಾಹಿತಿ ನೀಡಿದ್ದಾರೆ. ಬೇರೆಯವರ ಖಾತೆಗೆ ಹಣ ಹೋಗುತ್ತಿರುವ ಬಗ್ಗೆ ನಮಗೆ ಮಾಹಿತಿ ಇದೆ. ಫಲಾನುಭವಿಗಳ ಖಾತೆಗೆ ಹಣ ಹೋಗುವಂತೆ ಮಾಡುವುದು ಸರ್ಕಾರದ ಉದ್ದೇಶ ಎಂದರು.

> **ಸರ್ಕಾರವು ಕರ್ನಾಟಕದವರಿಗೆ ಈ ಯೋಜನೆ ನೀಡುತ್ತಿದ್ದು, ಅನ್ಯ ರಾಜ್ಯದವರಿಗೆ ಈ ಯೋಜನೆ ನೀಡುವುದಿಲ್ಲ. ಉಚಿತ ವಿದ್ಯುತ್ ಅನ್ನು ನಮ್ಮ ರಾಜ್ಯದ ಮತದಾರರಿಗೆ ನೀಡಬೇಕೇ ಹೊರತು, ಬೇರೆ ರಾಜ್ಯದವರಿಗೆ ಯಾಕೆ ಕೊಡಬೇಕು? ಫಲಾನುಭವಿಗಳಿಗೆ ಗುರುತಿನ ಚೀಟಿ ನೀಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಿದ್ದೇವೆ. ಆ ಪ್ರಕ್ರಿಯೆ ನಡೆಯುತ್ತಿದೆ. ಮಹಾರಾಷ್ಟ್ರ, ಮಧ್ಯಪ್ರದೇಶ, ಆಂಧ್ರಪ್ರದೇಶ ಸೇರಿದಂತೆ ಬೇರೆ ರಾಜ್ಯಗಳು ನಮ್ಮ ಮಾದರಿ ಅನುಸರಿಸಿವೆ ಎಂದು ತಿಳಿಸಿದರು.** ಡಿಕೆಶಿ ಸಿಎಂ

## ಪಿ.ಲಂಕೇಶ್ ಪತ್ನಿ, ಲೇಖಕಿ ಇಂದಿರಾ ಲಂಕೇಶ್ ನಿಧನ; ಸಿಎಂ ಡಿಕೆಶಿ, ಮಾಜಿ ಸಿಎಂ ಸಿದ್ದರಾಮಯ ಸಂತಾಪ

• ಉದಯವಾಹಿನಿ,ಬೆಂಗಳೂರು

ವಯೋಸಹಜ ಕಾಯಿಲೆಯಿಂದ, ಹಿರಿಯ ಪತ್ರಕರ್ತ ಹಾಗೂ ಖ್ಯಾತ ಬರಹಗಾರ ದಿ. ಪಿ. ಲಂಕೇಶ್ ಪತ್ನಿ, ಲೇಖಕಿ ಶ್ರೀಮತಿ ಇಂದಿರಾ ಲಂಕೇಶ್(84) ಅವರು ಸೋಮವಾರ ನಿಧನರಾಗಿದ್ದಾರೆ.
ಬೆಂಗಳೂರಿನ ರಾಜಾಜಿನಗರದಲ್ಲಿರುವ ತಮ್ಮ ನಿವಾಸದಲ್ಲಿ ಇಂದಿರಾ ಅವರು ಕೊನೆಯುಸಿರೆಳೆದಿದ್ದು, ಅವರ ನಿಧನದಿಂದ ಕನ್ನಡ ಸಾಹಿತ್ಯ ಮತ್ತು ಪತ್ರಿಕೋದ್ಯಮದ ಮತ್ತೊಂದು ಮಹತ್ವದ ಕೊಂಡಿ ಕಳಚಿದಂತಾಗಿದೆ. ಇಂದಿರಾ ಅವರು ಪುತ್ರಿ ಕವಿತಾ ಲಂಕೇಶ್(ಚಿತ್ರನಿರ್ದೇಶಕಿ) ಹಾಗೂ ಪುತ್ರ ಇಂದ್ರಜಿತ್ ಲಂಕೇಶ್ (ನಿರ್ದೇಶಕ ಹಾಗೂ ಪತ್ರಕರ್ತ) ಸೇರಿದಂತೆ ಅಪಾರ ಬಂಧು-ಮಿತ್ರರು ಮತ್ತು ಅಭಿಮಾನಿ ಬಳಗವನ್ನು ಅಗಲಿದ್ದಾರೆ.

## ಕಲೆಗಳು ಬೆಳೆದರೆ ದೇಶದ ಸಂಸ್ಕೃತಿ ಬೆಳೆಯುತ್ತದೆ - ಶ್ರೀಮತಿ ನಮೃತ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪದ್ಮಿನಿಪ್ರಿಯ ನೃತ್ಯ ಕಲಾ ಅಕಾಡೆಮಿಯು ತನ್ನ 15ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ನಗರದ ನಯನ ಸಭಾಂಗಣದಲ್ಲಿ ವಿದುಷಿ ಉಷಾ ಬಸಪ್ಪನವರ ನಿರ್ದೇಶನದಲ್ಲಿ ಹಮ್ಮಿಕೊಂಡಿದ್ದ ನೃತ್ಯ ವೈಭವ ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದ ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಶ್ರೀಮತಿ ಎನ್ ನಮ್ರತಾ ರವರು ನಮ್ಮ ಕಲೆಗಳು ಬೆಳೆದರೆ ದೇಶದ ಸಂಸ್ಕೃತಿ ಬೆಳೆಯುತ್ತದೆ ಎಂದು ಅಭಿಪ್ರಾಯಪಟ್ಟರು. ಯಾವುದೇ ಕಲೆಯನ್ನು ಮಕ್ಕಳು ಕಲಿತರೆ ಆ ಮಕ್ಕಳ ದೈಹಿಕ ಆರೋಗ್ಯ, ಮಾನಸಿಕ ಆರೋಗ್ಯ ಮತ್ತು ಸಾಮಾಜಿಕ ಆರೋಗ್ಯ ವೃದ್ಧಿಸುತ್ತದೆ. ಇದರಿಂದ ಆರೋಗ್ಯಪೂರ್ಣ ಸಮಾಜ ನಿರ್ಮಾಣವಾಗುತ್ತದೆ ಎಂದರು. ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ವಿದುಷಿ, ಡಾ.ಬಿ. ವಿ. ಗೀತಾ ರವರು ಪ್ರಕೃತಿ ಮಾತಾ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷರಾದ ಪರಮೇಶ್ವರ್ ಅವರು ಸಾಧನಾ ನೃತ್ಯ ಶಾಲೆಯ ವಿದುಷಿ ಭಾವನಾ ಶಂಕರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.
ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಸರಸ್ವತಿರವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿ ಗಣ್ಯರನ್ನು ಖ್ಯಾತ ಜಾನಪದ ಗಾಯಕ ಡಾ. ಜೋಗಿಲ ಸಿದ್ದರಾಜುರವರು ಸ್ವಾಗತಿಸಿದರು. ವಿದುಷಿ ಮಂಜು ಭೈರವಿರವರು ಬಹಳ ಅಚ್ಚುಕಟ್ಟಾಗಿ ಕಾರ್ಯಕ್ರಮವನ್ನು ನಿರೂಪಿಸಿದರು.
ಸಂಸ್ಥೆಯ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಬಹಳ ಅಚ್ಚುಕಟ್ಟಾಗಿ ಶಾಸ್ತ್ರೀಯ ನೃತ್ಯ, ಸಮೂಹ ನೃತ್ಯ, ಜನಪದ ನೃತ್ಯವನ್ನು ಪ್ರದರ್ಶಿಸಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು.

## ಡಿಕೆ ಶಿವಕುಮಾರ್ ರೈತರ ಮಾತು ಕೇಳುತ್ತಿಲ್ಲ; ರಾಹುಲ್ ಗಾಂಧಿಗೆ ನಿಖಿಲ್ ಪತ್ರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರು ಹೊರವಲಯದ ಬಿಡದಿ ಟೌನ್‌ಶಿಪ್ ಭೂಸ್ವಾಧೀನ ಪ್ರಕ್ರಿಯೆ ಇದೀಗ ಭಾರೀ ರಾಜಕೀಯ ಸ್ವರೂಪ ಪಡೆದುಕೊಂಡಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ರೈತರ ಅಹವಾಲುಗಳನ್ನು ಆಲಿಸುತ್ತಿಲ್ಲ ಎಂದು ಆರೋಪಿಸಿ ನಿಖಿಲ್ ಕುಮಾರಸ್ವಾಮಿ ಎಐಸಿಸಿ ನಾಯಕ ರಾಹುಲ್ ಗಾಂಧಿ ಅವರಿಗೆ ಪತ್ರ ಬರೆದು ಹಸ್ತಕ್ಷೇಪಕ್ಕೆ ಆಗ್ರಹಿಸಿದ್ದಾರೆ. ಬಡ, ದಲಿತ ಹಾಗೂ ಸಣ್ಣ ರೈತರ ಜಮೀನುಗಳನ್ನು ಬಲವಂತವಾಗಿ ಕಸಿದುಕೊಳ್ಳಲಾಗುತ್ತಿದೆ ಎಂದು ತಮ್ಮ ಪತ್ರದಲ್ಲಿ ಗಂಭೀರ ಆರೋಪ ಮಾಡಿದ್ದಾರೆ.
ಕೇಂದ್ರ ಸರ್ಕಾರದ ಗ್ರೇಟ್ ನಿಕೋಬಾರ್ ಅಭಿವೃದ್ಧಿ ಯೋಜನೆ ವಿರುದ್ಧ 'ಗ್ರೀನ್ ಓವರ್ ಗ್ರೀಡ್' (ಹಸಿರಿನ ಮೇಲೆ ದುರಾಸೆ) ಎಂದು ದನಿ ಎತ್ತಿರುವ ರಾಹುಲ್ ಅವರು, ಅರಣ್ಯ ಮತ್ತು ಪರಿಸರ ರಕ್ಷಣೆ ಬಗ್ಗೆ ಕಾಳಜಿ ವ್ಯಕ್ತಪಡಿಸಿದ್ದಾರೆ. ಕರ್ನಾಟಕದಲ್ಲಿ ಅವರದ್ದೇ ಪಕ್ಷದ ಸರ್ಕಾರ ರೈತರ ಫಲವತ್ತಾದ ಭೂಮಿಯನ್ನು ಉಪನಗರಕ್ಕೆ ಸ್ವಾಧೀನಪಡಿಸಿಕೊಳ್ಳುತ್ತಿದೆ. ಆ ಬಗ್ಗೆಯೂ ತಮ್ಮ ಸರ್ಕಾರದ ಕಿವಿ ಹಿಂಡಿ ಯೋಜನೆ ಕೈ ಬಿಡುವಂತೆ ಪತ್ರದಲ್ಲಿ ಒತ್ತಾಯಿಸಲಾಗಿದೆ ಎಂದು

## ವಿಜಯಪುರದಲ್ಲಿ ಸಾವಯವ ತರಕಾರಿ ಬೆಳೆಗಾರರಿಗೆ ಬಿಜೆಪಿ ವತಿಯಿಂದ ಸನ್ಮಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪಟ್ಟಣದ ಬಸವೇಶ್ವರ ನಗರದ ವಿನಾಯಕ ದೇವಾಲಯದ ಆವರಣದಲ್ಲಿರುವ ಸಾವಯವ ಮಾರುಕಟ್ಟೆಗೆ ಸಾವಯವ ತರಕಾರಿಗಳನ್ನು ಬೆಳೆದು ತಂದು ಮಾರಾಟ ಮಾಡುವ ಪ್ರಗತಿಪರ ರೈತರನ್ನು ಬಿಜೆಪಿ ಪಕ್ಷದಿಂದ ಸನ್ಮಾನಿಸಲಾಯಿತು. ಸಾವಯವ ಕೃಷಿಗೆ ನಾವೆಲ್ಲರೂ ಆದ್ಯತೆ ನೀಡಬೇಕು' ಎಂದು ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ನೀಲೇರಿ ಎಲ್.ಎನ್.ಅಂಬರೀಶ್ ಗೌಡ ತಿಳಿಸಿದರು. ಸಾವಯವ ಕೃಷಿ ಸಂತೆಯ ಸಂಚಾಲಕ ಬಿ.ಕೆ. ದಿನೇಶ್, ಬಿಜೆಪಿ ಮುಖಂಡ ಗಿರೀಶ್ ಆರಾಧ್ಯ, ಬಿಜೆಪಿ ತಾಲ್ಲೂಕು ಘಟಕದ ಕಾರ್ಯದರ್ಶಿ ಧರ್ಮಪುರ ಅನಿಲ್, ಮಾಜಿ ಕಾರ್ಯದರ್ಶಿ ರವಿಕುಮಾರ್, ಟೌನ್ ಬಿಜೆಪಿ ಅಧ್ಯಕ್ಷ ವೆಂಕಟೇಶ ಪ್ರಭು, ಮಹಿಳಾ ಮೋರ್ಚಾದ ವೀಣಾ, ಭಾಗ್ಯಮ್ಮ, ಪ್ರೇಮಾ ಉಪಸ್ಥಿತರಿದ್ದರು.

## ಗೃಹಜ್ಯೋತಿ -ಗೃಹಲಕ್ಷ್ಮೀ ಯೋಜನೆಗಳ ಸರ್ಜರಿ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಯನ್ನು ಪರಿಷ್ಕರಿಸಲು ಮುಂದಾಗಿದೆ. ಅನರ್ಹರಿಗೂ ಗೃಹಲಕ್ಷ್ಮೀ ಹಣ, ಗೃಹಜ್ಯೋತಿ ಭಾಗ್ಯ ಸಿಗುತ್ತಿರುವುದರಿಂದ ಇದನ್ನು ಪರಿಷ್ಕರಿಸಬೇಕಾಗಿದೆ ಎಂದು ಸಿಎಂ ಡಿಕೆ ಶಿವಕುಮಾರ್ ಇಂದು ಹೇಳಿದ್ದಾರೆ.
**ಮೃತಪಟ್ಟ ಮಹಿಳೆಯರ ಅಕೌಂಟ್‌ಗೆ ಗೃಹಲಕ್ಷ್ಮೀ ಹಣ ಜಮೆ:** ಗೃಹಲಕ್ಷ್ಮೀ ಯೋಜನೆಗೆ ಅರ್ಹತೆ ಇಲ್ಲದ 4.3 ಲಕ್ಷ ಹೆಸರುಗಳನ್ನು ಡಿಲೀಟ್ ಮಾಡಲು ಸರಕಾರ ನಿರ್ಧರಿಸಿದೆ ಎನ್ನಲಾಗಿದೆ. ಇದರಿಂದ ಸರಕಾರಕ್ಕೆ ಪ್ರತೀ ವರ್ಷ ಸಾವಿರಾರು ಕೋಟಿ ರೂ ಉಳಿತಾಯವಾಗಲಿದೆ. ಅಲ್ಲದೆ 79.75 ಕೋಟಿ ರೂ. ಸತ್ತವರ ಅಕೌಂಟ್‌ಗಳಿಗೆ ಹಣ ಹೋಗಿದೆ. ಒಟ್ಟು 68,776 ಸತ್ತುಹೋಗಿರುವ ಮಹಿಳೆಯರ ಖಾತೆಗೆ ಜಮೆ ಆಗಿದ್ದು, ಇದನ್ನು ವಾಪಸ್ ಪಡೆಯಲು ಮಹಿಳಾ ಮತ್ತು ಮಕ್ಕಳ ಇಲಾಖೆ ಮುಂದಾಗಿದೆ ಆದರೆ ಹಲವೆಡೆ ಈಗಾಗಲೇ ಇದು ಡ್ರಾ ಮಾಡಿಕೊಳ್ಳಲಾಗಿದೆ. ಏರ್ಟೆಲ್-ಪೇಟಿಎಂ ನಂತಹ ಖಾತೆಗಳಿಗೂ ದುಡ್ಡು ಹೋಗಿದೆ. ಎಷ್ಟೋ ಅರ್ಹರಿಗೆ ತಪ್ಪಿ, ಅನರ್ಹರ ಕೈಗೆ ಈ ಹಣ ಹೋಗಿರುವುದರಿಂದ ಪರಿಷ್ಕರಣೆ ಮಾಡಲಾಗುತ್ತಿದೆ ಎನ್ನಲಾಗಿದೆ.
**ಕರ್ನಾಟಕದವರಿಗಷ್ಟೇ ಗೃಹಜ್ಯೋತಿ ಯೋಜನೆ:**
ವಾಣಿಜ್ಯ ಉದ್ದೇಶಕ್ಕೆ ಗೃಹಜ್ಯೋತಿಯ ದುರ್ಬಳಕೆ ಹಾಗೂ, ಹೊರರಾಜ್ಯದವರೂ ಬಾಡಿಗೆ ಮನೆಗಳಲ್ಲಿ ಈ ಯೋಜನೆಯನ್ನು ಬಳಸುತ್ತಿರುವುದರಿಂದ ಈ ಯೋಜನೆಯ ಪರಿಷ್ಕರಣೆಗೆ ಸರಕಾರ ನಿರ್ಧರಿಸಿದೆ. ಈ ಬಗ್ಗೆ ಮಾತನಾಡಿದ ಸಿಎಂ ಡಿಕೆ ಶಿವಕುಮಾರ್, ವಿಪಕ್ಷದವರು ಇರುವುದೇ ಟೀಕಿಸುವುದಕ್ಕೆ. ಏನೇ ಒಳ್ಳೆಯದನ್ನು ಮಾಡಿದ್ರೂ, ತಡೆಯೋದಕ್ಕೆ ಅವರಿರೋದು ಎಂದರು. ಗ್ಯಾರಂಟಿ ಯೋಜನೆಗಳನ್ನು ಪಡೆಯುವವರ ಸರಿಯಾದ ಮಾಹಿತಿ, ಫೋಟೋ, ಗುರುತು ಬೇಕಾಗಿದೆ. ಮೊದಲೆಲ್ಲ ತರಾತುರಿಯಲ್ಲಿ ಯಾರದ್ದೋ ಫೋನ್ ನಂಬರ್ ಕೊಟ್ಟಿದ್ದಾರೆ. ಯಾರದ್ದೋ ಅಕೌಂಟ್‌ಗಳಿಗೆ ದುಡ್ಡು ಹೋಗುತ್ತಾ ಇದೆ. ನಮ್ಮ ಪ್ರಕಾರ ನೇರ ಫಲಾನುಭವಿಗಳ ಅಕೌಂಟ್‌ಗೇ ದುಡ್ಡು ಹೋಗಬೇಕು. ಯಾರ್ಯಾರೋ ಡ್ರಾ ಮಾಡ್ಕೊಂಡು ಹೋಗಬಾರದು. ಈ ಬಗ್ಗೆ ನಮ್ಮ ಬಳಿ ದಾಖಲೆ ಇದೆ. ಕರ್ನಾಟಕದವರಿಗೆ ಮಾತ್ರ ನಾವು ಈ ಗ್ಯಾರಂಟಿ ಕೊಡುತ್ತಾ ಇರುವುದು. ಹೊರಗಡೆ ರಾಜ್ಯದವರಿಗೆ ಇಲ್ಲ. ಕರೆಂಟ್ ಕೂಡಾ ರಾಜ್ಯದ ಮತದಾರರಿಗೆ ಮಾತ್ರ. ಸಚಿವ ಸಂಪುಟದಲ್ಲಿ ತೀರ್ಮಾನ ಪಡೆದುಕೊಂಡ ಪ್ರಕಾರ, ಬಸ್‌ನಲ್ಲಿ ಓಡಾಡುವವರಿಗೆ ಐಡಿ ಕಾರ್ಡ್ ಕೊಡುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದರು. ಗ್ಯಾರಂಟಿ ರದ್ದಾಗುವುದಿಲ್ಲ. ಗ್ಯಾರಂಟಿಗೆ ಇಡೀ ದೇಶಕ್ಕೆ ನಾವು ಮಾದರಿ. ಗ್ಯಾರಂಟಿ ಯೋಜನೆ ನಿಲ್ಲಿಸುವುದಿಲ್ಲ. ಕರ್ನಾಟಕವನ್ನು ಮಾದರಿಯಾಗಿ, ಮಹಾರಾಷ್ಟ್ರದವರು , ಮಧ್ಯಪ್ರದೇಶದವರು, ಆಂಧ್ರಪ್ರದೇಶದವರು, ತಮಿಳುನಾಡಿನವರು ಎಲ್ಲೆಲ್ಲಾ ಚುನಾವಣೆ ನಡೆದಿದೆಯೋ ಅವರೆಲ್ಲ ನಮ್ಮ ಮಾದರಿ ಫಾಲೋ ಮಾಡಿದ್ದಾರೆ. ಎಲ್ಲಾ ಬೆಲೆಗಳು ಏರಿಕೆ ಆಗಿ , ಆದಾಯ ಪಾತಾಳಕ್ಕೆ ಹೋಗುತ್ತಾ ಇದೆ. ಹೀಗಾಗಿ ಗ್ಯಾರಂಟಿ ಯಾರಗೂ

### ಚುನಾವಣಾ ಪೂರ್ವದಲ್ಲಿ ಬಿಜೆಪಿ ಗ್ಯಾರಂಟಿ

**ನಮ್ಮ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಾ ಬಂದಿರುವ ಬಿಜೆಪಿ, ಅದೇ ಯೋಜನೆಗಳನ್ನು ಮಧ್ಯಪ್ರದೇಶ, ಬಿಹಾರ, ಪಶ್ಚಿಮಬಂಗಾಳ ರಾಜ್ಯಗಳಲ್ಲಿ ನಕಲು ಹೊಡೆದು ಅಧಿಕಾರಕ್ಕೆ ಬಂದಿದೆ. ಇವರಿಗೆ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುವ ಯಾವ ನೈತಿಕತೆ ಇದೆ ಕೆಲವು ರಾಜ್ಯಗಳ ಚುನಾವಣಾ ಪೂರ್ವದಲ್ಲಿ ಬಿಜೆಪಿ ಗ್ಯಾರಂಟಿ ಯೋಜನೆಗಳ ಆಶ್ವಾಸನೆ ನೀಡಿದರೂ ಅವುಗಳನ್ನು ಸಂಪೂರ್ಣವಾಗಿ ಜಾರಿಗೆ ತರಲು ಸಾಧ್ಯವಾಗುತ್ತಿಲ್ಲ**

### ಗ್ಯಾರಂಟಿಗೆ ಇಡೀ ದೇಶಕ್ಕೆ ಮಾದರಿ



ಉದಯವಾಹಿನಿ ಚಿತ್ರ

### ದುರಾಸೆಗೆ ಬಲಿಬಿದ್ದು ಸರ್ಕಾರಕ್ಕೆ ಮೋಸ

**ಈ ಯೋಜನೆಗಳು ನಿಜವಾದ ಅರ್ಹರಿಗೆ ಸಿಗಬೇಕು, ಅದು ಅನರ್ಹರ ಪಾಲಾದಾಗ ಅದನ್ನು ತಡೆಗಟ್ಟುವುದು ಚುನಾಯಿತ ಸರ್ಕಾರದ ಕರ್ತವ್ಯವಾಗಿದೆ. ನಮ್ಮ ಜನರು ಕೂಡಾ ಈ ಬಗ್ಗೆ ಯೋಚನೆ ಮಾಡಬೇಕಾಗಿದೆ. ದುರಾಸೆಗೆ ಬಲಿಬಿದ್ದು ಸರ್ಕಾರಕ್ಕೆ ಮೋಸ ಮಾಡಿ ಗ್ಯಾರಂಟಿ ಯೋಜನೆಗಳ ಲಾಭ ತೆಗೆದುಕೊಳ್ಳುವುದು ಕಾನೂನಿನ ಉಲ್ಲಂಘನೆ ಮಾತ್ರವಲ್ಲ, ರಾಜ್ಯದ ಜನತೆಗೆ ಬಗೆವ ದ್ರೋಹವಾಗಿದೆ. ಇಂತಹ ವಿಷಯದಲ್ಲಿ ವಿರೋಧ ಪಕ್ಷಗಳು ರಾಜಕೀಯ ಲಾಭಕ್ಕಾಗಿ ಅಪಪ್ರಚಾರ ಮಾಡಲು ಹೋಗದೆ, ಅರ್ಹರಿಗೆ ಯೋಜನೆಗಳನ್ನು ತಲುಪಿಸಲು ಸರ್ಕಾರಕ್ಕೆ ನೆರವಾಗಬೇಕು ಎಂದಿದ್ದಾರೆ.**

### ಬಿಜೆಪಿ ಮೂಲತ

**ಬಡವರ ವಿರೋಧಿ ಪಕ್ಷ. ಅದು ಗ್ಯಾರಂಟಿ ಯೋಜನೆಗಳನ್ನು ಮೊದಲ ದಿನದಿಂದಲೇ ವಿರೋಧಿಸುತ್ತಾ ಬಂದಿದೆ. ಮೊದಲು ಗ್ಯಾರಂಟಿ ಯೋಜನೆಗಳ ಜಾರಿಯೇ ಅಸಾಧ್ಯ ಎಂದರು, ನಂತರದ ದಿನಗಳಲ್ಲಿ ಹಣಕಾಸಿನ ಕೊರತೆಯಿಂದ ಸರ್ಕಾರ ದಿವಾಳಿಯಾಗಲಿದೆ ಎಂದರು. ಈಗ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುವುದು ಎನ್ನುವ ಪುಕಾರು ಹಬ್ಬಿಸುತ್ತಿದ್ದಾರೆ. ಇದು ಅವರ ರಾಜಕೀಯ ಹತಾಶೆಯ ಪ್ರತೀಕ.ಮುಖ್ಯಮಂತ್ರಿಯಾಗಿ ಐದು ಯೋಜನೆಗಳನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೆ ತಂದಿದ್ದಲ್ಲದೆ, ಇದರಿಂದಾಗಿ ರಾಜ್ಯದ ಆರ್ಥಿಕತೆ ಮೇಲೆ ಏನೂ ದುಷ್ಪರಿಣಾಮ ಬೀರದಂತೆ ನೋಡಿಕೊಂಡಿದ್ದೇನೆ. ಇಂದು ಕರ್ನಾಟಕ ರಾಜ್ಯವು ತಲಾವಾರು ಆದಾಯದಲ್ಲಿ ದೇಶಕ್ಕೇ ಮೊದಲನೇ ಸ್ಥಾನದಲ್ಲಿದೆ, ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರದ ಎರಡನೇ ರಾಜ್ಯ ಕರ್ನಾಟಕ. ಖಜಾನೆ ಖಾಲಿಯಾಗಿದ್ದರೆ, ಸರ್ಕಾರ ದಿವಾಳಿ ಸ್ಥಿತಿಯಲ್ಲಿದ್ದರೆ ಈ ಸಾಧನೆ ಸಾಧ್ಯವೇ**

ಗ್ಯಾರಂಟಿಗೆ ಇಡೀ ದೇಶಕ್ಕೆ ನಾವು ಮಾದರಿ. ಗ್ಯಾರಂಟಿ ಯೋಜನೆ ನಿಲ್ಲಿಸುವುದಿಲ್ಲ. ಕರ್ನಾಟಕವನ್ನು ಮಾದರಿಯಾಗಿ, ಮಹಾರಾಷ್ಟ್ರದವರು , ಮಧ್ಯಪ್ರದೇಶದವರು, ಆಂಧ್ರಪ್ರದೇಶದವರು, ತಮಿಳುನಾಡಿನವರು ಎಲ್ಲೆಲ್ಲಾ ಚುನಾವಣೆ ನಡೆದಿದೆಯೋ ಅವರೆಲ್ಲ ನಮ್ಮ ಮಾದರಿ ಫಾಲೋ ಮಾಡಿದ್ದಾರೆ. ಎಲ್ಲಾ ಬೆಲೆಗಳು ಏರಿಕೆ ಆಗಿ , ಆದಾಯ ಪಾತಾಳಕ್ಕೆ ಹೋಗುತ್ತಾ ಇದೆ. ಹೀಗಾಗಿ ಗ್ಯಾರಂಟಿ ಯಾರಗೂ ನಿಲ್ಲಿಸುವುದಿಲ್ಲ. ಫಲಾನುಭವಿಗಳ ಇದನ್ನು ಸರಿಯಾಗಿ ಬಳಸಿಕೊಳ್ಳಬೇಕು. ಇದನ್ನು ಬಡ್ಡಿ ಕೊಡುವ ಯಾವ್ ಯಾವ್ದೋ ಕಂಪನಿಗಳಿಗೆ ಕಟ್ಟಬಾರದು. ದಾವಣಗೆರೆ, ಬೆಳಗಾವಿಯಲ್ಲಿ ಇದೆಲ್ಲ ನಡೆದಿದೆ.

## ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಆಕ್ರೋಶ: ಪಾದರಾಯನಪುರದಲ್ಲಿ ಜಮೀರ್ ಬೆಂಬಲಿಗರ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯ ಸಚಿವ ಸಂಪುಟದ ಮೊದಲ ಹಂತದಲ್ಲಿ ಶಾಸಕ ಜಮೀರ್ ಅಹಮ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ಕೈತಪ್ಪಿದ ಹಿನ್ನೆಲೆಯಲ್ಲಿ, ಇಂದು ಬೆಂಗಳೂರಿನ ಪಾದರಾಯನಪುರದಲ್ಲಿ ಅವರ ಬೆಂಬಲಿಗರು ಹಾಗೂ ಅಭಿಮಾನಿಗಳು ಬೃಹತ್ ಪ್ರತಿಭಟನೆ ನಡೆಸಿದರು. ಪಾಲಿಕೆ ಮಾಜಿ ಸದಸ್ಯ ಇಮ್ರಾನ್ ಪಾಷಾ ನೇತೃತ್ವದಲ್ಲಿ ಜಮೀರ್ ಅಹಮ್ಮದ್ ಅವರಿಗೆ ಸಚಿವ ಹಾಗೂ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಒತ್ತಾಯಿಸಿ 'ವಿಧಾನಸೌಧ ಚಲೋ' ಪಾದಯಾತ್ರೆಗೆ ಕರೆ ನೀಡಲಾಗಿತ್ತು. ಆದರೆ, ಹೈಕೋರ್ಟ್ ನಿರ್ದೇಶನದಂತೆ ಫ್ರೀಡಂ ಪಾರ್ಕ್‌ನಲ್ಲಿ ಮಾತ್ರ ಪ್ರತಿಭಟನೆಗೆ ಅವಕಾಶ ಇರುವುದರಿಂದ ಪೊಲೀಸರು ಪಾದಯಾತ್ರೆಗೆ ಅನುಮತಿ ನಿರಾಕರಿಸಿದರು.ಮುಂಜಾಗ್ರತಾ ಕ್ರಮವಾಗಿ ಹೊಸಹಳ್ಳಿ ಫ್ಲೈಓವರ್ ಮತ್ತು ಪಾದರಾಯನಪುರ ಮುಖ್ಯ ರಸ್ತೆಯನ್ನು ಬಂದ್ ಮಾಡಿ, ಬಿಗುವಿನ ಪೊಲೀಸ್ ಭದ್ರತೆ ಕಲ್ಪಿಸಲಾಗಿತ್ತು.
ಸ್ಥಳದಲ್ಲಿ ಕೆಎಸ್‌ಆರ್‌ಪಿ ತುಕಡಿ ಹಾಗೂ ಸಿಆರ್ ತಂಡಗಳನ್ನು ನಿಯೋಜಿಸಲಾಗಿತ್ತು. ಪ್ರತಿಭಟನೆಗೆ ಬೆಂಬಲ ಸೂಚಿಸಿ ಪಾದರಾಯನಪುರ ಮುಖ್ಯ ರಸ್ತೆಯ ವ್ಯಾಪಾರಿಗಳು ಸ್ವಯಂಪ್ರೇರಿತರಾಗಿ ಅಂಗಡಿಗಳನ್ನು ಬಂದ್ ಮಾಡಿದ್ದರು. ಜಮೀರ್ ಅಹಮ್ಮದ್ ಅವರ ಪೋಸ್ಟರ್ ಹಾಗೂ ಫೋಟೋಗಳನ್ನು ಹಿಡಿದ ನೂರಾರು ಮಹಿಳೆಯರು ಮತ್ತು ಪುರುಷರು ಇಮ್ರಾನ್ ಪಾಷಾ ಕಚೇರಿ ಬಳಿ ಜಮಾಯಿಸಿದರು. ಪೊಲೀಸರು ರಸ್ತೆಯ ಮಧ್ಯೆ ಬ್ಯಾರಿಕೇಡ್‌ಗಳನ್ನು ಹಾಕಿ ಜನರನ್ನು ಗಲ್ಲಿಗಳಲ್ಲಿಯೇ ತಡೆದರೂ, ನೂಕಾಟ-ತಳ್ಳಾಟ ನಡೆಸಿ ಪ್ರತಿಭಟನಾಕಾರರು ರಸ್ತೆಗೆ ಧಾವಿಸಿ ನ್ಯಾಯ ಬೇಕು ಎಂದು ಘೋಷಣೆ ಕೂಗಿದರು. ಪ್ರತಿಭಟನೆ ವೇಳೆ ಮಾತನಾಡಿದ ಇಮ್ರಾನ್ ಪಾಷಾ, ಜಮೀರ್ ಅಹಮ್ಮದ್ ಅವರು ಮುಸ್ಲಿಂ ಸಮುದಾಯದ ಪ್ರಮುಖ ನಾಯಕರಾಗಿದ್ದಾರೆ. ಅವರಿಗೆ ಸಚಿವ ಸ್ಥಾನ ಸಿಗದಿರುವುದು ಸಮುದಾಯಕ್ಕೆ ನೋವು ತಂದಿದೆ. ಈ ಹಿಂದೆ ಎಸ್.ಎಂ. ಕೃಷ್ಣ ಅವರ ನೇತೃತ್ವದ ಸರ್ಕಾರದಲ್ಲಿ ಐದು ಮುಸ್ಲಿಂ ಮುಖಂಡರಿಗೆ ಸಚಿವ ಸ್ಥಾನ ನೀಡಲಾಗಿತ್ತು.
ಡಿ.ಕೆ. ಶಿವಕುಮಾರ್ ಅವರ ಸಂಪುಟದಲ್ಲಿ ನಾಲ್ಕು ಜನರಿಗೆ ಅವಕಾಶ ಸಿಗುವ ವಿಶ್ವಾಸವಿದ್ದು, ಅದರಲ್ಲಿ ಜಮೀರ್ ಅವರಿಗೂ ಸ್ಥಾನ ಸಿಗಲೇಬೇಕು. ನಾನು ಜೆಡಿಎಸ್ ಪಕ್ಷದಲ್ಲಿದ್ದರೂ ಜಮೀರ್ ಅವರಿಗಾಗಿ ಈ ಹೋರಾಟ ಮಾಡುತ್ತಿದ್ದೇನೆ. ಒಂದು ವೇಳೆ ಅವರಿಗೆ ಅವಕಾಶ ಸಿಗದಿದ್ದರೆ ಮುಂದೆಯೂ ಹೋರಾಟ ಮುಂದುವರಿಯಲಿದೆ

## ಮುಂದಿನ ಎರಡು ವರ್ಷಕ್ಕಷ್ಟೇ ಅಲ್ಲ...: ಐದು ಗ್ಯಾರಂಟಿಗಳ ಬಗ್ಗೆ ಮಾಜಿ ಸಿಎಂ ಸಿದ್ದರಾಮಯ್ಯ ಮಹತ್ವದ ಘೋಷಣೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಗ್ಯಾರಂಟಿಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ಪ್ರತಿಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸಲಾಗುವುದಿಲ್ಲ ಎಂದು ಸೋಮವಾರ ಪ್ರತಿಪಾದಿಸಿದ್ದಾರೆ.
ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಮಾಜಿ ಸಿಎಂ, ಪಂಚ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೆ ನಿಲ್ಲಿಸುವುದಿಲ್ಲ. ಮುಂದಿನ ಎರಡು ವರ್ಷಗಳ ಕಾಲ ಮಾತ್ರವಲ್ಲ, ಮುಂದಿನ ಚುನಾವಣೆಯಲ್ಲಿ ಮತ್ತೆ ನಾವು ಅಧಿಕಾರಕ್ಕೆ ಬರಲಿದ್ದೇವೆ.
ಅದರ ನಂತರವೂ ಗ್ಯಾರಂಟಿಗಳು ಮುಂದುವರಿಯಲಿವೆ. ಯೋಜನೆಗಳ ಅನುಷ್ಠಾನದಲ್ಲಿ ಕಂಡು ಬರುವ ದೋಷಗಳನ್ನು ಸರಿಪಡಿಸುವ ಕೆಲಸ ಪ್ರಾರಂಭದಿಂದಲೇ ನಡೆಯುತ್ತಾ ಬಂದಿದೆ, ಈಗಲೂ ಮುಂದುವರೆದಿದೆ. ಈ ಯೋಜನೆಗಳ ಫಲಾನುಭವಿಗಳು ವಿರೋಧ ಪಕ್ಷಗಳ ಅಪಪ್ರಚಾರಕ್ಕೆ ಕಿವಿಗೊಟ್ಟು ಆತಂಕಕ್ಕೆ ಈಡಾಗಬೇಕಾಗಿಲ್ಲ ಎಂದಿದ್ದಾರೆ.
**ಬಿಜೆಪಿ ಮೂಲತ:** ಬಡವರ ವಿರೋಧಿ ಪಕ್ಷ. ಅದು ಗ್ಯಾರಂಟಿ ಯೋಜನೆಗಳನ್ನು ಮೊದಲ ದಿನದಿಂದಲೇ ವಿರೋಧಿಸುತ್ತಾ ಬಂದಿದೆ. ಮೊದಲು ಗ್ಯಾರಂಟಿ ಯೋಜನೆಗಳ ಜಾರಿಯೇ ಅಸಾಧ್ಯ ಎಂದರು, ನಂತರದ ದಿನಗಳಲ್ಲಿ ಹಣಕಾಸಿನ ಕೊರತೆಯಿಂದ ಸರ್ಕಾರ ದಿವಾಳಿಯಾಗಲಿದೆ ಎಂದರು.
ಈಗ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುವುದು ಎನ್ನುವ ಪುಕಾರು ಹಬ್ಬಿಸುತ್ತಿದ್ದಾರೆ. ಇದು ಅವರ ರಾಜಕೀಯ ಹತಾಶೆಯ ಪ್ರತೀಕ. ಈ ಯೋಜನೆಗಳು ನಿಜವಾದ ಅರ್ಹರಿಗೆ ಸಿಗಬೇಕು, ಅದು ಅನರ್ಹರ ಪಾಲಾದಾಗ ಅದನ್ನು ತಡೆಗಟ್ಟುವುದು ಚುನಾಯಿತ ಸರ್ಕಾರದ ಕರ್ತವ್ಯವಾಗಿದೆ.
ನಮ್ಮ ಜನರು ಕೂಡಾ ಈ ಬಗ್ಗೆ ಯೋಚನೆ ಮಾಡಬೇಕಾಗಿದೆ. ದುರಾಸೆಗೆ ಬಲಿಬಿದ್ದು ಸರ್ಕಾರಕ್ಕೆ ಮೋಸ ಮಾಡಿ ಗ್ಯಾರಂಟಿ ಯೋಜನೆಗಳ ಲಾಭ ತೆಗೆದುಕೊಳ್ಳುವುದು ಕಾನೂನಿನ ಉಲ್ಲಂಘನೆ ಮಾತ್ರವಲ್ಲ, ರಾಜ್ಯದ ಜನತೆಗೆ ಬಗೆವ ದ್ರೋಹವಾಗಿದೆ. ಇಂತಹ ವಿಷಯದಲ್ಲಿ ವಿರೋಧ ಪಕ್ಷಗಳು ರಾಜಕೀಯ ಲಾಭಕ್ಕಾಗಿ ಅಪಪ್ರಚಾರ ಮಾಡಲು ಹೋಗದೆ, ಅರ್ಹರಿಗೆ ಯೋಜನೆಗಳನ್ನು ತಲುಪಿಸಲು ಸರ್ಕಾರಕ್ಕೆ ನೆರವಾಗಬೇಕು ಎಂದು ಪೋಸ್ಟ್ ಮಾಡಿದ್ದಾರೆ.

## ಕಾರ್ಯಕರ್ತರ ಬಲವಿದ್ದರೆ ಮಾತ್ರ ಸರ್ಕಾರ ರಚನೆ ಸಾಧ್ಯ: ಶಾಸಕ ಎಂ.ಕೃಷ್ಣಪ್ಪ

• ಉದಯವಾಹಿನಿ, ಆನೇಕಲ್


ಉದಯವಾಹಿನಿ ಚಿತ್ರ

ಪ್ರತಿಯೊಬ್ಬ ನಾಯಕನ ಗೆಲುವಿನಲ್ಲೂ ಕಾರ್ಯಕರ್ತರ ಪಾತ್ರ ಹೆಚ್ಚಿರುತ್ತದೆ. ಅವರ ಬಲದಿದ್ದರೆ ಮಾತ್ರ ಬಿಜೆಪಿಗೆ ಸರ್ಕಾರ ರಚಿಸಲು ಸಾಧ್ಯವಾಗುತ್ತದೆ' ಎಂದು ಶಾಸಕ ಎಂ.ಕೃಷ್ಣಪ್ಪ ಹೇಳಿದರು.
ಬನ್ನೇರುಘಟ್ಟದಲ್ಲಿ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಗ್ರಾಮಾಂತರ ಮಂಡಲದಿಂದ ಆಯೋಜಿಸಿದ್ದ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು 'ಸಿದ್ಧಾಂತ, ಅಭಿವೃದ್ಧಿಯ ಮೇಲೆ ರಾಜಕಾರಣ ಮಾಡುವ ಪಕ್ಷ ಬಿಜೆಪಿ' ಎಂದರು. 'ಪಕ್ಷದ ತತ್ವ, ಸಿದ್ಧಾಂತಗಳನ್ನು ಪ್ರಚಾರ ಮಾಡಲು ಕ್ರಿಯಾಶೀಲ ಚಟುವಟಿಕೆ ರೂಪಿಸಬೇಕು.
ಪ್ರತಿ ಬೂತ್‌ಗಳಲ್ಲೂ ಸೇವಾ ಮತ್ತು ಸಂಘಟನೆಯ ಕಾರ್ಯಕ್ರಮ ಹೆಚ್ಚಿಸಬೇಕು. ಈಗಿನಿಂದಲೇ ಚುನಾವಣೆಗೆ ಕಾರ್ಯಕರ್ತರು ಸಜ್ಜಾಗಬೇಕು' ಎಂದು ಹೇಳಿದರು. ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ವಿವಿಧೆಡೆಯ ಕಾರ್ಯಕರ್ತರು ಸಮಾವೇಶದಲ್ಲಿ ಭಾಗಿಯಾಗಿದ್ದರು. ಜಿಗಣಿ ಸಮೀಪದ ಯಾರಂಡಹಳ್ಳಿಯಿಂದ ಬನ್ನೇರುಘಟ್ಟದವರೆಗೆ ಬೈಕ್ ರ‍್ಯಾಲಿ ಆಯೋಜಿಸಲಾಗಿತ್ತು. ಸಂಘಟನೆಯ ಕಾರ್ಯಕ್ರಮ ಹೆಚ್ಚಿಸಬೇಕು.
**ಅಧ್ಯಕ್ಷರ ಆಯ್ಕೆ:** ಬೆಂಗಳೂರು ದಕ್ಷಿಣ ಗ್ರಾಮಾಂತರ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿಗಳಾಗಿ ಶಶಿಕುಮಾರ್, ಪರಶುರಾಮ್, ಯುವ ಮೋರ್ಚಾ ಅಧ್ಯಕ್ಷರಾಗಿ ನವೀನ್ ರೆಡ್ಡಿ, ಮಹಿಳಾ ಮೋರ್ಚಾ ಅಧ್ಯಕ್ಷರಾಗಿ ಭಾರತಿ ವೆಂಕಟೇಶ್ ಗೌಡ, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷರಾಗಿ ರಘುರಾಮ್, ಎಸ್‌ಸಿ ಮೋರ್ಚಾ ಅಧ್ಯಕ್ಷರಾಗಿ ಜೆ.ಸಿ. ಕೃಷ್ಣಪ್ಪ, ಅಲ್ಪಸಂಖ್ಯಾತರ ಮೋರ್ಚಾ ಅಧ್ಯಕ್ಷರಾಗಿ ಮನ್ಸೂರ್ ಸಾಬ್, ರೈತ ಮೋರ್ಚಾ ಅಧ್ಯಕ್ಷರಾಗಿ ಚೇತನ್, ಸಾಮಾಜಿಕ ಜಾಲತಾಣ ವಿಭಾಗದ ಸಂಚಾಲಕರಾಗಿ ಅಮಿತ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಹರೀಶ್ ರೆಡ್ಡಿ ತಿಳಿಸಿದರು.

## ಅಯ್ಯಪ್ಪ ಮಾಲೆ ಧರಿಸಿ ಶಬರಿಮಲೆ ಯಾತ್ರೆ ಕೈಗೊಂಡ ಹೆಚ್.ಡಿ. ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಶಬರಿಮಲೆ ಯಾತ್ರೆ ಕೈಗೊಂಡಿದ್ದಾರೆ. ಜಾವವೇ ಕೊಚ್ಚಿನ್ ನಗರದ ಶ್ರೀ ಸುಬ್ರಮಣ್ಯ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಶ್ರೀ ಅಯ್ಯಪ್ಪ ಸ್ವಾಮಿ ಮಾಲೆ ಧರಿಸಿ ನಂತರ ದೇಗುಲದಲ್ಲಿಯೇ ಇರುಮುಡಿ ಹೊತ್ತು ಶಬರಿಮಲೆಗೆ ಯಾತ್ರೆ ಹೊರಟರು. ಪಂಪಾ ನದಿ ತೀರವನ್ನು ಸೇರಿಕೊಳ್ಳುವ ಸಚಿವರು ತದನಂತರ ಪುಣ್ಯ ಸ್ನಾನ ಮಾಡಿ ಶಬರಿಮಲೆ ಹತ್ತಿರ ಸಾಗಲಿದ್ದಾರೆ. ಸಂಜೆ ಅಯ್ಯಪ್ಪ ಸನ್ನಿಧಿಯಲ್ಲಿ ಪಡಿ ಪೂಜೆಯಲ್ಲಿ ಪಾಲ್ಗೊಳ್ಳಿರುವ ಸಚಿವರು ನಂತರ ಅಯ್ಯಪ್ಪ ಸ್ವಾಮಿಗೆ ಪುಷ್ಪ ಅಭಿಷೇಕದಲ್ಲಿ ಭಾಗಿಯಾಗಲಿದ್ದಾರೆ.

## ಆರ್ ಎಸ್ ಎಸ್ ನೋಂದಣಿ ಬಗ್ಗೆ ಮೋಹನ್ ಭಾಗವತ್‌ಗೆ ಪ್ರಿಯಾಂಕ್ ಖರ್ಗೆ ಪತ್ರ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ



ರಾಷ್ಟ್ರೀಯ ಸ್ವಯಂಸೇವಕ ಸಂಘದ ವಿರುದ್ಧದ ವಾಗ್ದಾಳಿಯನ್ನು ಮತ್ತಷ್ಟು ತೀವ್ರಗೊಳಿಸಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೋಮವಾರ ಸಂಘದ ನೋಂದಣಿ ಬಗ್ಗೆ ಸ್ಪಷ್ಟನೆ ಕೋರಿ ಆರ್ ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದಿದ್ದಾರೆ. ಮೋಹನ್ ಭಾಗವತ್‌ಗೆ ಬರೆದ ಪತ್ರವನ್ನು ಎಕ್ಸ್ ನಲ್ಲಿ ಹಂಚಿಕೊಂಡಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ಮೊದಲನೆಯದಾಗಿ, 100 ವರ್ಷಗಳನ್ನು ಪೂರೈಸಿದ ಅಭಿನಂದನೆಗಳನ್ನು ತಿಳಿಸಿದ್ದಾರೆ.
60,000 ಕ್ಕೂ ಹೆಚ್ಚು ಶಾಖೆಗಳು ಮತ್ತು ಕೋಟಿಗಟ್ಟಲೆ ಸ್ವಯಂಸೇವಕರನ್ನು ಹೊಂದಿರುವುದಾಗಿ ಪ್ರತಿಪಾದಿಸುವ ಸಂಸ್ಥೆಯು ಪಾರದರ್ಶಕತೆ ಮತ್ತು ಸಾಂವಿಧಾನಿಕ ಹೊಣೆಗಾರಿಕೆಯನ್ನು ಎತ್ತಿಹಿಡಿಯಬೇಕು ಎಂದು ಹೇಳಿದ್ದಾರೆ.
ಆರ್‌ಎಸ್‌ಎಸ್‌ನ ಅತ್ಯುನ್ನತ ಮತ್ತು ಪ್ರಮುಖ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆ ಅಖಿಲ ಭಾರತೀಯ ಪ್ರತಿನಿಧಿ ಸಭಾ ಬಿಡುಗಡೆ ಮಾಡಿದ 2025-26 ರ ವಾರ್ಷಿಕ ವರದಿಯ ಪ್ರಕಾರ, ಕರ್ನಾಟಕದಲ್ಲಿ 4,127 ದೈನಂದಿನ ಶಾಖೆಗಳು, 1,389 ಸಾಪ್ತಾಹಿಕ ಮಿಲನ್‌ಗಳು ಮತ್ತು 60 ಮಾಸಿಕ ಮಂಡಳಿಗಳನ್ನು ಹೊಂದುವ ಮೂಲಕ ಸಂಘಟನೆಯು ಭಾರಿ ಹೆಜ್ಜೆಗುರುತನ್ನು ಹೊಂದಿದೆ. ಆರ್‌ಎಸ್‌ಎಸ್‌ನ ಸಾರ್ವಜನಿಕ ಒಗ್ಗೂಡುವಿಕೆ ಕೂಡ ಅಷ್ಟೇ ವಿಸ್ತಾರವಾಗಿದೆ. ನಿಮ್ಮ ವರದಿಯ ಪ್ರಕಾರ, ಸಂಘಟನೆಯು 2,194 ಸಮಾಜೋತ್ಸವಗಳನ್ನು ನಡೆಸಿದ್ದು, ಇದರಲ್ಲಿ 19,61,158 ಮಂದಿ ಭಾಗವಹಿಸಿದ್ದಾರೆ. ರಾಜ್ಯಾದ್ಯಂತ ನೀವು 562 ಪಥಸಂಚಲನಗಳನ್ನು ಆಯೋಜಿಸಿದ್ದೀರಿ, ಇವು ಸಾಮಾನ್ಯವಾಗಿ 2.5 ರಿಂದ 3 ಕಿ.ಮೀ. ವರೆಗೆ ನಡೆದಿದ್ದು, 2,21,963 ಸಮವಸ್ತ್ರಧಾರಿ ಸ್ವಯಂಸೇವಕರು ಪಾಲ್ಗೊಂಡಿದ್ದರು ಎಂದು ಹೇಳಿಕೊಂಡಿದ್ದೀರಿ.
ಇಷ್ಟೊಂದು ವಿಸ್ತಾರವಾದ ಸಾಂಸ್ಥಿಕ ಅಸ್ತಿತ್ವವನ್ನು ಹೊಂದಿರುವಾಗ, ವಿಶೇಷವಾಗಿ ನಿಯಮಿತವಾದ ಸಾರ್ವಜನಿಕ ಒಗ್ಗೂಡುವಿಕೆ, ಸಮವಸ್ತ್ರಧಾರಿ ಪಥಸಂಚಲನಗಳು ಮತ್ತು ದೊಡ್ಡ-ಮಟ್ಟದ ಸಾಮಾಜಿಕ ಕಾರ್ಯಕ್ರಮಗಳನ್ನು ಒಳಗೊಂಡಿರುವಾಗ, ಇದನ್ನು ಕೇವಲ ಒಂದು ಖಾಸಗಿ ಅಥವಾ ಅನೌಪಚಾರಿಕ ವ್ಯವಸ್ಥೆ ಎಂದು ಪರಿಗಣಿಸಲು ಸಾಧ್ಯವಿಲ್ಲ. ಇದು ಸಂಘಟನೆಯ ಕಾನೂನುಬದ್ಧ ಸ್ಥಾನಮಾನ, ಹೊಣೆಗಾರಿಕೆ, ಆರ್ಥಿಕ ಪಾರದರ್ಶಕತೆ, ಸಾರ್ವಜನಿಕ ಸುವ್ಯವಸ್ಥೆ, ಅನುಮತಿಗಳು, ಹಣಕಾಸಿನ ಮೂಲಗಳು ಮತ್ತು ಭಾರತದ ಸಂವಿಧಾನ ಹಾಗೂ ಕಾನೂನುಗಳ ಪಾಲನೆಯ ಕುರಿತು ನ್ಯಾಯಸಮ್ಮತವಾದ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದಿದ್ದಾರೆ.

> **ನಾಗರಿಕರು, ಕಾರ್ಮಿಕರು, ಎನ್‌ಜಿಓಗಳು, ಟ್ರಸ್ಟ್‌ಗಳು, ದೇವಾಲಯಗಳು ಮತ್ತು ಕಂಪನಿಗಳು ನೋಂದಾಯಿಸಲು, ಪಾರದರ್ಶಕತೆ ಕಾಯ್ದುಕೊಳ್ಳಲು ಮತ್ತು ಕಾನೂನನ್ನು ಅನುಸರಿಸಲು ಬಯಸುತ್ತಿವೆ. ಆದರೆ, ಆರ್‌ಎಸ್‌ಎಸ್ ಏಕೆ ವಿನಾಯಿತಿ ನೀಡಬೇಕು ಎಂದು ಪ್ರಶ್ನಿಸಿದ್ದಾರೆ.** -ಪ್ರಿಯಾಂಕ್ ಖರ್ಗೆ

### ಬೃಹತ್ ನೆಟ್‌ವರ್ಕ್ ಇದಾಗಿದೆ

**ಇವೆಲ್ಲವನ್ನೂ ಒಟ್ಟಾಗಿ ನೋಡಿದಾಗ, ಕರ್ನಾಟಕದಾದ್ಯಂತ ದೈನಂದಿನ, ಸಾಪ್ತಾಹಿಕ ಮತ್ತು ಮಾಸಿಕ ಸಂಪರ್ಕಗಳು, ಬೃಹತ್ ಸಾರ್ವಜನಿಕ ಕಾರ್ಯಕ್ರಮಗಳು ಹಾಗೂ ಸಮವಸ್ತ್ರಧಾರಿ ಪಥಸಂಚಲನಗಳ ಮೂಲಕ ಕಾರ್ಯನಿರ್ವಹಿಸುತ್ತಿರುವ, ಶಿಸ್ತುಬದ್ಧ ಹಾಗೂ ಆಳವಾಗಿ ಬೇರೂರಿರುವ ಬೃಹತ್ ನೆಟ್‌ವರ್ಕ್ ಇದಾಗಿದೆ ಎಂಬುದು ಸ್ಪಷ್ಟವಾಗುತ್ತದೆ.**

# 21ಕ್ಕೆ ಅರಮನೆ ಮೈದಾನದಲ್ಲಿ ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರ ಪದಗ್ರಹಣ : ಶಾಸಕ ಪ್ರದೀಪ್ ಈಶ್ವರ್

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕೆಪಿಸಿಸಿ ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಬಿ.ಕೆ.ಹರಿಪ್ರಸಾದ್ ಹಿಂದುಳಿದ ವರ್ಗಗಳ ನಾಯಕ.ಅವರ ಪದಗ್ರಹಣ ಕಾರ್ಯಕ್ರಮವು ಜೂ.21ರಂದು ಅರಮನೆ ಮೈದಾನದಲ್ಲಿ ಅದ್ದೂರಿಯಾಗಿ ನಡೆಯಲಿದೆ. ನಮ್ಮ ಕ್ಷೇತ್ರದಿಂದ 2.5 ಸಾವಿರ ಮಂದಿ 50 ಬಸ್ಸುಗಳಲ್ಲಿ ಭಾಗಿಯಾಗಲಿದ್ದೇವೆ ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿ, ಮತ್ತು ಪಕ್ಷದ ನೂತನ ಅಧ್ಯಕ್ಷರು ಕೆಪಿಸಿಸಿಯ ತಳಮಟ್ಟದ ಕಾರ್ಯಕರ್ತರಾಗಿ ದುಡಿದು ವಿವಿಧ ವಿಭಾಗಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ತಮ್ಮ ಸಂಘಟನಾ ಚಾತುರ್ಯ ತೋರಿದವರು. ಇವರಿಬ್ಬರ ಕಾಂಬಿನೇಷನ್


ಉದಯವಾಹಿನಿ ಚಿತ್ರ

ನಲ್ಲಿ 2028ಕ್ಕೆ ಕಾಂಗ್ರೆಸ್ ಮ್ಯಾಜಿಕ್ ಮಾಡಲಿದ್ದು 150ಕ್ಕೂ ಹೆಚ್ಚು ಸ್ಥಾನಗಳಲ್ಲಿ ನಮ್ಮ ಪಕ್ಷ ಗೆಲುವು ಸಾಧಿಸಲಿದೆ. ಒಬಿಸಿ ನಾಯಕನಿಗೆ ಅಧ್ಯಕ್ಷಪಟ್ಟ ಒಲಿದು ಬಂದಿದೆ. ನಾನೂ ಕೂಡ ಒಬಿಸಿ ಹುಡುಗನಾಗಿ ಅದನ್ನು ಸ್ವಾಗತಿಸುತ್ತೇನೆ ಎಂದರು.

2026ರ ನೀಟ್ ಕೋಚಿಂಗ್ ಕ್ಷೇತ್ರದ ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಆತ್ಮ ವಿಶ್ವಾಸ ಮೂಡಿಸುವಲ್ಲಿ ಯಶಸ್ವಿಯಾಗಿದ್ದು ನೀಟ್‌ನಲ್ಲಿ ಒಳ್ಳೆಯ ಸ್ಥಾನ ಪಡೆದಿದ್ದರು. ದುರಾದೃಷ್ಟಕ್ಕೆ ಮರುಪರೀಕ್ಷೆ ಇದೇ ಜೂ.21ಕ್ಕೆ ನಡೆಯಲಿದೆ. ಇದೇ ರೀತಿ, ಇಂದು ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಕಾರ್ಯಕ್ರಮ ಪ್ರಾರಂಭವಾಗಿದೆ. ಶೀಘ್ರವೇ 56 ಸಾವಿರ ಹುದ್ದೆಗಳನ್ನು ನನ್ನ ಸರಕಾರ ತುಂಬುತ್ತಿದೆ. ಇಲ್ಲಿ ತರಬೇತಿ ಪಡೆಯುವ ನೂರಾರು ವಿದ್ಯಾರ್ಥಿಗಳಲ್ಲಿ 30 ರಿಂದ 40 ಮಕ್ಕಳಾದರೂ ಎ.ಸಿ. ತಹಶೀಲ್ದಾರ್, ಪೊಲೀಸ್ ಇನ್ಸ್‌ಪೆಕ್ಟರ್ ಆಗಲಿ ಎನ್ನುವುದು ನನ್ನ ಮಹದಾಸೆ. ಆಗುತ್ತಾರೆ ಎಂಬ ವಿಶ್ವಾಸವಿದೆ. ಅದನ್ನು ಬಳಸಿಕೊಂಡು ನನ್ನ ಕ್ಷೇತ್ರದ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಪ್ರತಿ ಭಾನುವಾರ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗೆ ವ್ಯವಸ್ಥೆ ಮಾಡಲಾಗಿದೆ. ರಾಜ್ಯದ ಹೆಸರಾಂತ ಕೋಚಿಂಗ್ ಸೆಂಟರ್ ಪರಿಣಿತರು ಬಂದು ತರಬೇತಿ ಮಾಡಲಿದ್ದಾರೆ. ಯುವಕ ಯುವತಿಯರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡುತ್ತೇನೆ ಎಂದರು. ನಾನು ಮಾತು ಕೊಟ್ಟಂತೆ ಚುನಾವಣೆಗೂ ಮುನ್ನ ಶಿಕ್ಷಣ ಕ್ಷೇತ್ರದಲ್ಲಿ, ಆರೋಗ್ಯ ಕ್ಷೇತ್ರದಲ್ಲಿ ಮಾಡಿರುವ ಸಾಧನೆಗಳ ಪಟ್ಟಿ ಬಿಡುಗಡೆ ಮಾಡುತ್ತೇನೆ.

## ಮಧುಗಿರಿಯಲ್ಲಿ ಮುಂಗಾರಿನ ವರ್ಷಧಾರೆ: ಶೇಂಗಾ ಕಣಜದಲ್ಲಿ ಮೆಕ್ಕೆಜೋಳದ ಪ್ರಾಬಲ್ಯ

• ಉದಯವಾಹಿನಿ, ಮಧುಗಿರಿ

ಜೂನ್ ಆರಂಭದಿಂದಲೂ ತಾಲ್ಲೂಕಿನ ವ್ಯಾಪ್ತಿಯಲ್ಲಿ ಆಗಾಗ್ಗೆ ಮುಂಗಾರು ಮಳೆ ಸುರಿಯುತ್ತಿದ್ದು, ರೈತರು ಬಿತ್ತನೆಗಾಗಿ ಜಮೀನು ಹಸನುಗೊಳಿಸುವ ಕಾಯಕದಲ್ಲಿ ನಿರತರಾಗಿದ್ದಾರೆ. ಡೀಸೆಲ್ ಬೆಲೆ ಏರಿಕೆ, ರಸಗೊಬ್ಬರದ ಬೆಲೆ ದುಬಾರಿ ಆಗಿದ್ದರೂ, ಹದ ಮಳೆಯಿಂದ ಉತ್ತೇಜಿತರಾಗಿರುವ ಕೃಷಿಕರು ಬೇಸಾಯದತ್ತ ಗಮನ ಹರಿಸಿದ್ದಾರೆ. ಬಿತ್ತನೆ ಬೀಜ ಖರೀದಿ, ರಸಗೊಬ್ಬರ ಸಂಗ್ರಹಕ್ಕೆ ಮುಂದಾಗಿದ್ದಾರೆ. ಹೊಲಗಳಲ್ಲಿ ಟ್ರ್ಯಾಕ್ಟರ್ ಮೂಲಕ ಉಳುಮೆ ನಡೆದಿದೆ. ಶೇಂಗಾ ಕಣಜ ಎಂದೇ ಖ್ಯಾತಿಯಾಗಿದ್ದ ಮಧುಗಿರಿ ತಾಲ್ಲೂಕಿನಲ್ಲಿ ಇದೀಗ ಮೆಕ್ಕೆಜೋಳ ಪ್ರಾಬಲ್ಯ ಮೆರೆದಿದೆ. ಶೇಂಗಾ ಬಿತ್ತನೆ ಪ್ರದೇಶ ವ್ಯಾಪಕ ಪ್ರಮಾಣದಲ್ಲಿ ಕುಸಿತಗೊಂಡಿರುವುದರಿಂದ ಕೃಷಿ ಇಲಾಖೆ ಒಂದು ಸಾವಿರ ಹೆಕ್ಟೇರ್‌ನಲ್ಲಿ 'ವಿಶಿಷ್ಟ' - ಐಸಿವಿಎಸ್ -1694 ಎಂಬ ತಳಿಯ ಪ್ರಾತ್ಯಕ್ಷಿಕೆ ನಡೆಸಲು ಸಿದ್ಧತೆ ನಡೆಸಿದೆ. ರೋಗ ನಿರೋಧಕ ಗುಣ ಮತ್ತು ಬರವನ್ನು ಎದುರಿಸುವ ಸಾಮರ್ಥ್ಯ ಹೊಂದಿರುವ ಈ ಶೇಂಗಾ ತಳಿಯು ಪ್ರತಿ ಹೆಕ್ಟೇರ್‌ಗೆ 28.5 ಕ್ವಿಂಟಲ್ ಇಳುವರಿ ನೀಡಲಿದೆ. 110ರಿಂದ 115 ದಿನಗಳಲ್ಲಿ ಕೊಯ್ಲಿಗೆ ಬರಲಿದೆ. ಮಳೆಗಾಲ, ಬೇಸಿಗೆಗೂ ಸೂಕ್ತವಾಗಿದ್ದು ಎಲೆಚುಕ್ಕಿ ರೋಗ, ತುಕ್ಕುರೋಗದಿಂದ ಮುಕ್ತವಾಗಿದೆ.

ಅಧಿಕ ಎಣ್ಣೆ ಅಂಶ ಹೊಂದಿರುವ ಬೀಜ ಹೊಂದಿರುವ ಈ ತಳಿಯ ಒಂದು ಕೆ.ಜಿ ಕಡಲೆಕಾಯಿ ಸುಲಿದರೆ 730 ಗ್ರಾಂ ಬೀಜ ಲಭಿಸುತ್ತದೆ. ಸಬ್ಸಿಡಿ ದರದಲ್ಲಿ ಬಿತ್ತನೆಬೀಜ ವಿತರಿಸಲಾಗುತ್ತಿದ್ದು, ರೈತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಚೆನ್ನಕೇಶವಮೂರ್ತಿ ಅವರು ಕೃಷಿಕರಲ್ಲಿ ಮನವಿ ಮಾಡಿದ್ದಾರೆ. 30 ಕೆ.ಜಿ ಶೇಂಗಾ ಬಿತ್ತನೆ ಬೀಜದ ಬೆಲೆ ರಿಯಾಯಿತಿ ದರದಲ್ಲಿ ಪರಿಶಿಷ್ಟ ಜಾತಿ, ಪಂಗಡದವರಿಗೆ 2640, ಇತರೆಯವರಿಗೆ 2910 ಇದೆ. ಒಂದು ಕೆ.ಜಿ ಶೇಂಗಾ ಬೀಜದ ದರ 130- 140ಕ್ಕೆ ತಲುಪಿದೆ.

## ಮೈಸೂರು ಮಹಾನಗರ ಪಾಲಿಕೆಯಿಂದ ಗ್ರೀನ್ ಪ್ರಾಪರ್ಟಿಗಳಿಗೆ ಟ್ಯಾಗ್

• ಉದಯವಾಹಿನಿ, ಮೈಸೂರು

ಜಾಗತಿಕವಾಗಿ ಗಮನ ಸೆಳೆದಿರುವ ಮೈಸೂರಿನಲ್ಲಿ ಪರಿಸರ ಸ್ನೇಹಿ ವ್ಯವಸ್ಥೆಗೆ ಉತ್ತೇಜನ ನೀಡುವ ಉದ್ದೇಶದಿಂದ ಮೈಸೂರು ಮಹಾನಗರ ಪಾಲಿಕೆಯು ಗ್ರೀನ್ ಪ್ರಾಪರ್ಟಿ ಟ್ಯಾಗ್ ಯೋಜನೆಯನ್ನು ಜಾರಿಗೊಳಿಸಿದೆ. ಮಳೆ ನೀರು ಸಂಗ್ರಹ, ಸೌರ ವಿದ್ಯುತ್ ಬಳಕೆ, ತ್ಯಾಜ್ಯ ನಿರ್ವಹಣೆ ಹಾಗೂ ಶಕ್ತಿ ಉಳಿತಾಯ ಕ್ರಮಗಳನ್ನು ಅಳವಡಿಸಿರುವ ಮನೆಗಳು, ಕಟ್ಟಡಗಳಿಗೆ ಈ ವಿಶೇಷ ಮಾನ್ಯತೆ ದೊರೆಯಲಿದೆ.

ನಗರ ಪ್ರದೇಶಗಳಲ್ಲಿ ವೇಗವಾಗಿ ಹೆಚ್ಚುತ್ತಿರುವ ಜನಸಂಖ್ಯೆ, ನೀರಿನ ಕೊರತೆ ಹಾಗೂ ವಿದ್ಯುತ್ ಬಳಕೆಯ ಒತ್ತಡವನ್ನು ಕಡಿಮೆ ಮಾಡಲು ಈ ಯೋಜನೆ ಸಹಕಾರಿಯಾಗಲಿದೆ. ನಗರೀಕರಣ ವೇಗ ಪಡೆದುಕೊಂಡಿರುವ ಈ ಸಂದರ್ಭದಲ್ಲಿ ಹಸಿರು ಕಟ್ಟಡಗಳ ಪರಿಕಲ್ಪನೆ ಅತ್ಯಂತ ಮಹತ್ವದ್ದಾಗಿದೆ. ಗ್ರೀನ್ ಪ್ರಾಪರ್ಟಿ ಟ್ಯಾಗ್ ಕೇವಲ ಪರಿಸರ ಸಂರಕ್ಷಣೆಯ ಕ್ರಮವಾಗಿರದೆ, ಆಸ್ತಿಯ ಗುಣಮಟ್ಟ ಮತ್ತು ಮೌಲ್ಯ ನಿರ್ಧರಿಸುವ ಪ್ರಮುಖ ಮಾನದಂಡವಾಗುವ ಸಾಧ್ಯತೆಯೂ ಇದೆ.

ಹವಾಮಾನ ಬದಲಾವಣೆ ಮತ್ತು ಸಂಪನ್ಮೂಲಗಳ ಕೊರತೆಯ ನಡುವೆಯೂ ಸುಸ್ಥಿರ ಅಭಿವೃದ್ಧಿಗೆ ಈ ಯೋಜನೆ ಮಹತ್ವದ ಹೆಜ್ಜೆಯಾಗಲಿದೆ. ಗ್ರೀನ್ ಪ್ರಾಪರ್ಟಿ ಟ್ಯಾಗ್ ಪಡೆಯಬಹುದು. ಪರಿಸರ ಸ್ನೇಹಿ ಸೌಲಭ್ಯಗಳನ್ನು ಅಳವಡಿಸಿಕೊಂಡಿರುವ ವಸತಿ, ವಾಣಿಜ್ಯ, ಶೈಕ್ಷಣಿಕ ಸಂಸ್ಥೆಗಳು, ಅಪಾರ್ಟ್‌ಮೆಂಟ್‌ಗಳು ಹಾಗೂ ಇತರೆ ಕಟ್ಟಡಗಳಿಗೆ ನೀಡುವ ವಿಶೇಷ ಪ್ರಮಾಣಪತ್ರವೇ ಗ್ರೀನ್ ಪ್ರಾಪರ್ಟಿ ಟ್ಯಾಗ್. ಈ ಟ್ಯಾಗ್ ಪಡೆದ ಕಟ್ಟಡಗಳು ಸೌರ ವಿದ್ಯುತ್ ಅಳವಡಿಕೆ, ತ್ಯಾಜ್ಯ ಮರು ಬಳಕೆ, ಉತ್ತಮ ನೀರು ನಿರ್ವಹಣೆ ಸೇರಿದಂತೆ ಕೆಲ ಮಾನದಂಡಗಳನ್ನು ಪೂರೈಸಿರಬೇಕು. ಯೋಜನೆಯಿಂದ ಆಗುವ ಲಾಭವೇನು? ಪರಿಸರ ಸ್ನೇಹಿ ಮನೆ, ಕಟ್ಟಡಗಳ ನಿರ್ಮಾಣದಿಂದ ವಿದ್ಯುತ್ ವೆಚ್ಚ ಕಡಿಮೆಯಾಗುತ್ತದೆ.

ಮಳೆ ನೀರು ಸಂಗ್ರಹ ವ್ಯವಸ್ಥೆಯಿಂದ ಅಂತರ್ಜಲಮಟ್ಟ ಹೆಚ್ಚಳವಾಗುತ್ತದೆ. ಇದರಿಂದ ಮಾಹನಗರ ಪಾಲಿಕೆಗೆ ಕುಡಿಯುವ ನೀರಿನ ಪೂರೈಕೆ ಮೇಲಿನ ಒತ್ತಡ ಕಡಿಮೆಯಾಗುತ್ತದೆ. ಪರಿಸರ ಸ್ನೇಹಿ ಮನೆಗಳು, ಕಟ್ಟಡಗಳಿಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ದೊರೆಯುವ ಸಾಧ್ಯತೆ ಇದೆ. ಸವಾಲುಗಳು ಏನು? ಈ ಯೋಜನೆ ಅನುಷ್ಠಾನಕ್ಕೆ ಸವಾಲುಗಳೂ ಇವೆ. ಈ ಯೋಜನೆಗೆ ನಾಗರಿಕರು ಆಸಕ್ತಿ ತೋರುವ ಅವಶ್ಯಕತೆಯಿದೆ.

ಹೂಡಿಕೆಯ ವೆಚ್ಚ ಇರುವ ಹಿನ್ನೆಲೆಯಲ್ಲಿ ಸಾಕಷ್ಟು ಜನರು ಹಿಂದೇಟು ಹಾಕುವ ಸಾಧ್ಯತೆ ಹೆಚ್ಚಿರುತ್ತದೆ. ಈ ಕುರಿತು ಜನರಲ್ಲಿ ಅರಿವು ಮೂಡಿಸುವ ಕಾರ್ಯವನ್ನು ವ್ಯಾಪಕವಾಗಿ ನಡೆಸಬೇಕಿದೆ. ಹಳೆಯ ಕಟ್ಟಡಗಳಲ್ಲಿ ಅಗತ್ಯ ಬದಲಾವಣೆಗಳನ್ನು ಅಳವಡಿಸುವುದು ಸವಾಲು ಆಗಬಹುದು.



ಉದಯವಾಹಿನಿ ಚಿತ್ರ

### ಕೆಲ ದೇಶಗಳಲ್ಲಿ ಈಗಾಗಲೇ ಜನಪ್ರಿಯ

**ಮಹಾನಗರಪಾಲಿಕೆಯು ಜಾರಿಗೆ ತರಲು ಉದ್ದೇಶಿಸಿರುವ ಗ್ರೀನ್ ಪ್ರಾಪರ್ಟಿ ಟ್ಯಾಗ್ ಪರಿಕಲ್ಪನೆ ದೇಶದ ಕೆಲವು ಭಾಗಗಳಲ್ಲಿ ಹಾಗೂ ವಿವಿಧ ದೇಶಗಳಲ್ಲಿ ಈಗಾಗಲೇ ಅಸ್ತಿತ್ವದಲ್ಲಿದೆ.**

**ಇಂಡಿಯನ್ ಗ್ರೀನ್ ಬಿಲ್ಡಿಂಗ್ ಕೌನ್ಸಿಲ್ (ಐಜಿಬಿಸಿ) ಗ್ರೀನ್ ಹೋಮ್ಸ್, ಗ್ರೀನ್ ಫ್ಯಾಕ್ಟರಿಗಳು, ಗ್ರೀನ್ ಕ್ಯಾಂಪಸ್ ಗಳಂತಹ ಪ್ರಮಾಣೀಕರಣಗಳನ್ನು ನೀಡುತ್ತದೆ.**

**ಮಹಾರಾಷ್ಟ್ರ, ಗುಜರಾತ್, ತೆಲಂಗಾಣ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಗ್ರೀನ್ ಕಟ್ಟಡಗಳಿಗೆ ತೆರಿಗೆ ವಿನಾಯಿತಿ ಸೇರಿದಂತೆ ಮತ್ತಿತರ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಯುಎಸ್ ಗ್ರೀನ್ ಬಿಲ್ಡಿಂಗ್ ಕೌನ್ಸಿಲ್ ಅಭಿವೃದ್ಧಿಪಡಿಸಿರುವ 'ಲೀಡ್' ವಿಶ್ವದ ಅತ್ಯಂತ ಜನಪ್ರಿಯ ಗ್ರೀನ್ ಬಿಲ್ಡಿಂಗ್ ಪ್ರಮಾಣೀಕರಣ ವ್ಯವಸ್ಥೆಗಳಲ್ಲಿ ಒಂದಾಗಿದೆ. ಸಿಂಗಾಪುರದಲ್ಲಿ ಬಿಲ್ಡಿಂಗ್ ಆಂಡ್ ಕನ್‌ಸ್ಟ್ರಕ್ಷನ್ ಅಥಾರಿಟಿ ಜಾರಿಗೊಳಿಸಿರುವ ಗ್ರೀನ್ ಮಾರ್ಕ್ ಯಶಸ್ವಿಯಾಗಿದ್ದು, ಹೊಸ ಕಟ್ಟಡಗಳಲ್ಲಿ ದಕ್ಷತೆ ಮತ್ತು ನೀರಿನ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ.**

### ನಗರಪಾಲಿಕೆ ಅಧಿಕಾರಿ ಹೀಗಂತಾರೆ

**ಪರಿಸರ ಸಂರಕ್ಷಣೆ ಸುಸ್ಥಿರ ನಗರಾಭಿವೃದ್ಧಿ ಹಾಗೂ ಹಸಿರು ಜೀವನಶೈಲಿಯನ್ನು ಉತ್ತೇಜಿಸುವ ಉದ್ದೇಶದಿಂದ ಗ್ರೀನ್ ಪ್ರಾಪರ್ಟಿ ಟ್ಯಾಗ್ ಯೋಜನೆ ಜಾರಿಗೊಳಿಸಲಾಗಿದೆ. ಪರಿಸರ ಸ್ನೇಹಿ ಕ್ರಮಗಳನ್ನು ಅಳವಡಿಸಿಕೊಂಡಿರುವ ವಸತಿ, ವಾಣಿಜ್ಯ, ಶೈಕ್ಷಣಿಕ ಸಂಸ್ಥೆಗಳು, ಅಪಾರ್ಟ್‌ಮೆಂಟ್‌ಗಳು ಹಾಗೂ ಇತರೆ ಕಟ್ಟಡಗಳಿಗೆ ಗ್ರೀನ್ ಪ್ರಾಪರ್ಟಿ ಟ್ಯಾಗ್ ನೀಡಿ ಗೌರವಿಸಲಾಗುವುದು.**

**ಆಸಕ್ತರು ನೋಂದಾಯಿಸಿಕೊಳ್ಳಬಹುದು ಎಂದು ಸ್ವಚ್ಛ ಸರ್ವೇಕ್ಷಣ್ ಮೈಸೂರು ಪಾಲಿಕೆಯ ನೋಡಲ್ ಅಧಿಕಾರಿ ಕೆ.ಎಸ್. ಮೃತ್ಯುಂಜಯ ಅವರು ತಿಳಿಸಿದ್ದಾರೆ.**

## ಗ್ರಾಮೀಣ ಮಕ್ಕಳ ಭವಿಷ್ಯಕ್ಕೆ ಅವಶ್ಯ ಸಲಕರಣೆ ವಿತರಣೆ

• ಉದಯವಾಹಿನಿ, ಗುಬ್ಬಿ

ಪೀಠೋಪಕರಣ, ಆಧುನಿಕತೆಗೆ ತಕ್ಕಂತೆ ಸಲಕರಣೆ ಜೊತೆಗೆ ಸಮವಸ್ತ್ರ ವಿತರಣೆ ಮಾಡಿ ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುವ ಕೆಲಸ ತಾಲ್ಲೂಕಿನ ಬಿದರೆ ಗ್ರಾಮಸ್ಥರಿಂದ ನಡೆಯಿತು.

ಚೇಳೂರು ಹೋಬಳಿ ಬಿದರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿ, ರೈತಸಂಘ ಗ್ರಾಮ ಘಟಕ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂವಾದನಾತ್ಮಕ ದೂರದರ್ಶನ, ಸಿಸಿ ಕ್ಯಾಮರಾ ಹಾಗೂ ಎಲ್ ಕೆಜಿ ಯುಕೆಜಿ ಮಕ್ಕಳಿಗೆ ಟ್ರ್ಯಾಕ್ ಸೂಟ್ ವಿತರಣೆ ಮಾಡಲಾಯಿತು. ಸಮೂಹ ಸಂಪನ್ಮೂಲ ವ್ಯಕ್ತಿ ಚನ್ನಬಸವೇಶ್ವರ ಮಾತನಾಡಿ, ಸರ್ಕಾರ ಗ್ರಾಮೀಣ ಶಾಲೆಗಳ ಉಳಿಸುವ ಕೆಲಸಕ್ಕೆ ಪೂರಕವಾಗಿ ಎಲ್ಲಾ ಸವಲತ್ತು ಒದಗಿಸಿದೆ. ಬಿಸಿಯೂಟ, ಪಠ್ಯಪುಸ್ತಕ, ಸಮ ವಸ್ತ್ರ ಜೊತೆಗೆ ಪೌಷ್ಟಿಕ ಆಹಾರ, ರಾಗಿ ಅಂಬಲಿ ಹೀಗೆ ಅನೇಕ ರೀತಿ ಮಕ್ಕಳಿಗೆ ಯಾವ ಕೊರತೆ ಬಾರದಂತೆ ಕ್ರಮ ಕೈಗೊಂಡಿದೆ. ಆದರೆ ದಾಖಲಾತಿ ಪ್ರಕ್ರಿಯೆ ಇಳಿಮುಖ ಆಗದಂತೆ ಶಿಕ್ಷಣ ಇಲಾಖೆ ಮಾಡುವ ಎಲ್ಲಾ ಕಾರ್ಯಕ್ಕೆ ಸ್ಥಳೀಯ ಸಮುದಾಯ ಸಹಕಾರ ಅತ್ಯಗತ್ಯ. ಇಂತಹ ಸತ್ಕಾರ್ಯಕ್ಕೆ ಬಿದರೆ ಗ್ರಾಮಸ್ಥರು ಸರ್ಕಾರಿ ಶಾಲೆ ಬೆಳೆಸಲು ಒಗ್ಗೂಡಿ ಸಹಕಾರ ನೀಡಿದ್ದಾರೆ ಎಂದರು. ಶಿಕ್ಷಣ ಸಂಯೋಜಕ ದೀಪಕ್ ಕುಮಾರ್ ಮಾತನಾಡಿ ಖಾಸಗಿ ಶಾಲೆಗಳ ವ್ಯಾಮೋಹದಿಂದ ಪೋಷಕರು ಹೊರಬರಬೇಕು.

ಸರ್ಕಾರಿ ಶಾಲೆಯಲ್ಲಿ ಎಲ್ಲಾ ಅನುಕೂಲದ ಜೊತೆ ಗುಣಮಟ್ಟದ ಶಿಕ್ಷಣ ನೀಡುವ ಅರ್ಹ ಶಿಕ್ಷಕ ವೃಂದವಿದೆ. ಗ್ರಾಮೀಣ ಭಾಗದಲ್ಲಿ ಸರ್ಕಾರಿ ಶಾಲೆಗೆ ತನ್ನದೇ ವಿಶೇಷ ಸ್ಥಾನಮಾನವಿದೆ. ಇದನ್ನು ಉಳಿಸಿ ಬೆಳೆಸಲು ಗ್ರಾಮಸ್ಥರ ಕಾಳಜಿ ಅಗತ್ಯ ಎಂದರು.

ಮಾಜಿ ಸೈನಿಕರ ಸಂಘದ ತಾಲ್ಲೂಕು ಅಧ್ಯಕ್ಷ ಲೋಕೇಶ್ ಮಾತನಾಡಿ ಗ್ರಾಮದ ಈ ಶಾಲೆಯಲ್ಲಿ ವಿದ್ಯಾರ್ಜನೆ ಪಡೆದ ಅನೇಕ ವಿದ್ಯಾರ್ಥಿಗಳು ಉತ್ತಮ ಭವಿಷ್ಯ ಕಟ್ಟಿಕೊಂಡಿದ್ದಾರೆ. ಸರ್ಕಾರಿ ಶಾಲೆ ಮುಚ್ಚುವ ಆತಂಕ ಮನೆ ಮಾಡಿದೆ. ಈ ನಿಟ್ಟಿನಲ್ಲಿ ನಮ್ಮೂರ ಶಾಲೆಗೆ ವಿಶೇಷ ಗಮನಹರಿಸಿ ಮತ್ತಷ್ಟು ಸಾಕಾರ ಗೊಳಿಸಲು ಯುವಕರ ತಂಡ ಸಜ್ಜಾಗಿದೆ. ಹಳೇ ವಿದ್ಯಾರ್ಥಿಗಳ ಸಂಘ ಕಟ್ಟಿ ಶಾಲೆಯ ಅಭಿವೃದ್ಧಿಗೆ ಪಣ ತೊಡುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಎಲ್ ಕೆಜಿ ಹಾಗೂ ಯುಕೆಜಿ ಮಕ್ಕಳಿಗೆ ಟ್ರ್ಯಾಕ್ ಸೂಟ್ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಎಸ್ ಡಿಎಂಸಿ ಅಧ್ಯಕ್ಷ ಬಿ.ಎಂ. ಗಿರಿಯಪ್ಪ, ಮುಖ್ಯ ಶಿಕ್ಷಕ ಡಿ.ರಾಜಶೇಖರಯ್ಯ ಸೇರಿದಂತೆ ಎಸ್ ಡಿಎಂಸಿ ಸದಸ್ಯರು, ಸ್ಥಳೀಯ ಮುಖಂಡರು, ರೈತಸಂಘದ ಸದಸ್ಯರು ಇದ್ದರು.

## ಕೆಜಿಎಫ್‌ನಲ್ಲಿ ಸರಗಳ್ಳತನ ಮಾಡಿದ್ದ ಇಬ್ಬರು ಆರೋಪಿಗಳ ಸೆರೆ

• ಉದಯವಾಹಿನಿ , ಕೆಜಿಎಫ್

ಸರಗಳ್ಳತನ ಮಾಡಿದ್ದ ಇಬ್ಬರು ಆರೋಪಿಗಳನ್ನು ಅಂಡರಸನ್‌ಪೇಟೆ ಪೊಲೀಸರು ಬಂಧಿಸಿದ್ದಾರೆ. ಅಂಡರಸನ್‌ಪೇಟೆಯ ಲೂರ್ದ್ ನಗರದ ನಿವಾಸಿಗಳಾಗಿದ ಸ್ಟೀಫನ್ ರಾಜ್ (21) ಮತ್ತು ರೆಸ್ಟೂನ್ (20) ಬಂಧಿತ ಆರೋಪಿಗಳು. ಇವರನ್ನು ವಿಚಾರಣೆಗೊಳಪಡಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ. ಜೂನ್ 12 ರಂದು ನಗರಸಭೆಯ ಮಾಜಿ ಸದಸ್ಯ ವೇಣುಗೋಪಾಲ್ ಅವರು ಮೋಹನ್ ಸೇರ್ ನಿವಾಸದ ಮುಂದೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಬೈಕ್‌ನಲ್ಲಿ ಬಂದ ಆರೋಪಿಗಳು ಅವರನ್ನು ಬೆದರಿಸಿ, ಕತ್ತಿನಲ್ಲಿದ್ದ ಸುಮಾರು 52 ಗ್ರಾಂ ಚಿನ್ನದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದರು. ಈ ಕುರಿತು ವೇಣುಗೋಪಾಲ್ ಅವರು ದೂರು ದಾಖಲಿಸಿದ್ದರು. ಈ ಬಗ್ಗೆ ಕಾರ್ಯಾಚರಣೆ ನಡೆಸಿದ ಪೊಲೀಸರು ಆರೋಪಿಗಳನ್ನು ಮಾಲು ಸಮೇತ ಬಂಧಿಸಿದ್ದಾರೆ.

## ಮೋದಿಯಿಂದ ಅಭಿವೃದ್ಧಿ ಕ್ರಾಂತಿ: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಕಳೆದ 12 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತಾವಧಿಯಲ್ಲಿ ಪ್ರತಿಯೊಬ್ಬ ಪ್ರಜೆಯ ಮನೆ ಬಾಗಿಲಿಗೆ ಕೇಂದ್ರ ಸರ್ಕಾರದ ಯೋಜನೆಗಳು ತಲುಪಿವೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಪ್ರತಿಪಾದಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಚುನಾಯಿತ ಪ್ರಧಾನಿಯಾಗಿ 12 ವರ್ಷ ಪೂರೈಸಿದ ಅಂಗವಾಗಿ ನಗರದ ಕಲಾಮಂದಿರದಲ್ಲಿ ಏರ್ಪಡಿಸಿದ್ದ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಸರ್ಕಾರದ ಸಬ್ಸಿಡಿಗಳು ಮತ್ತು ಕಲ್ಯಾಣ ಯೋಜನೆಗಳ ಹಣವು ಯಾವುದೇ ಮಧ್ಯವರ್ತಿಗಳಿಲ್ಲದೆ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗುತ್ತಿದೆ. ಇದು ಭಾರತದಲ್ಲಿ ಪರಿವರ್ತನಾತ್ಮಕ ಕ್ರಾಂತಿಕಾರಿ ಹೆಜ್ಜೆಯಾಗಿದೆ ಎಂದು ಬಣ್ಣಿಸಿದರು. ನೇರ ನಗದು ವರ್ಗಾವಣೆ, ಯುಪಿಐ ಹಣ ವಹಿವಾಟು ಸೇರಿದಂತೆ ಅನೇಕ ಪರಿವರ್ತನಾತ್ಮಕ ಯೋಜನೆಗಳು ಜಾರಿಗೆ ಬಂದಿವೆ. ಅಲ್ಲದೆ ಕೇಂದ್ರ ಸರ್ಕಾರದಿಂದ ಜನರಿಗೆ ತಲುಪಬೇಕಾದ ಪ್ರತಿ ಪೈಸೆಯು ನೇರವಾಗಿ ಆಯಾ ಫಲಾನುಭವಿಯ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾವಣೆ ಆಗುತ್ತಿದೆ. ಇದು ಡಿಜಿಟಲ್ ಇಂಡಿಯಾದ ಶಕ್ತಿಯಾಗಿದೆ ಎಂದು ಹೇಳಿದರು. ಸ್ವತಂತ್ರ ಭಾರತದ ಇತಿಹಾಸದಲ್ಲೇ ಸುದೀರ್ಘ ಕಾಲ ದೇಶ ಮುನ್ನಡೆಸಿದ ಪ್ರಮುಖ ಚುನಾಯಿತ ಪ್ರಧಾನಿಗಳಲ್ಲಿ ಒಬ್ಬರಾಗಿ ಅವರು ಹೊಸ ಮೈಲಿಗಲ್ಲು ಸ್ಥಾಪಿಸಿದ್ದಾರೆ.


ಆಯುಷ್ಮಾನ್ ಭಾರತ್ ಜಗತ್ತಿನ ಅತಿ ದೊಡ್ಡ ಆರೋಗ್ಯ ವಿಮಾ ಯೋಜನೆ. ಇದರಡಿಯಲ್ಲಿ ದೇಶದ ಕೋಟ್ಯಂತರ ಜನರಿಗೆ ಉಚಿತ ವೈದ್ಯಕೀಯ ಚಿಕಿತ್ಸೆಯ ಸೌಲಭ್ಯ ಒದಗಿಸಲಾಗಿದೆ. ಬಡವರು ಬಹು ದೊಡ್ಡ ಪ್ರಮಾಣದಲ್ಲಿ ಈ ವಿಮಾ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಕುಮಾರಸ್ವಾಮಿಯವರು ಹೇಳಿದರು. ಕಾರ್ಯಕ್ರಮದಲ್ಲಿ ಶಾಸಕರಾದ ಎಚ್.ಟಿ. ಮಂಜು, ಕೆ.ವಿವೇಕಾನಂದ, ಮಾಜಿ ಸಚಿವರಾದ ಡಿ.ಸಿ. ತಮ್ಮಣ್ಣ, ಸಿ.ಎಸ್. ಪುಟ್ಟರಾಜು, ಕೆ.ಸಿ. ನಾರಾಯಣಗೌಡ, ಮಾಜಿ ಶಾಸಕರಾದ ಕೆ.ಅನ್ನದಾನಿ, ರವೀಂದ್ರ ಶ್ರೀಕಂಠಯ್ಯ, ಕೆ.ಸುರೇಶಗೌಡ, ಕೆ.ಟಿ. ಶ್ರೀಕಂಠೇಗೌಡ, ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಡಿ.ರಮೇಶ್, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಇಂದ್ರೇಶ್, ಬಿ.ಆರ್. ರಾಮಚಂದ್ರ ಮತ್ತು ಜೆಡಿಎಸ್, ಬಿಜೆಪಿ ಮುಖಂಡರು ಇದ್ದರು.

## ನೂರಾರು ವರ್ಷಗಳ ಹಳೆಯ ಕಲ್ಯಾಣಿಗೆ ಮರಳಿದ ಗತ ವೈಭವ

• ಉದಯವಾಹಿನಿ, ಕನಕಪುರ

ಪಟ್ಟಣದ ಬಸ್ ನಿಲ್ದಾಣದ ಬಳಿ ಕಾಳಿಕಾಂಬ (ಕಾಳಮ್ಮ) ದೇವಸ್ಥಾನದ ಮುಂಭಾಗದ ಈ ಪ್ರಾಚೀನ ಕಲ್ಯಾಣಿಯು ನೂರಾರು ವರ್ಷಗಳ ಹಿಂದೆ ಪಟ್ಟಣದ ಸೌಂದರ್ಯ ಹಾಗೂ ದೇಗುಲಗಳ ಪೂಜೆ ನೀರಿಗಾಗಿ ನಿರ್ಮಿಸಲಾಗಿತ್ತು. 1956ರಲ್ಲಿ ಕನಕಪುರದ ಕೆ.ಆರ್.ಶ್ರೀನಿವಾಸ್ ಎಂಬುವವರು ಹೆಲಿಕಾಪ್ಟರ್‌ನಲ್ಲಿ ಕನಕಪುರಕ್ಕೆ ಬಂದಿದ್ದ ವೇಳೆ ತಾಂತ್ರಿಕ ದೋಷದಿಂದ ತಕ್ಷಣ ಭೂಮಿಗೆ ಇಳಿಸಬೇಕಾದ ಸಂದರ್ಭದಲ್ಲಿ ಬಳಕೆಯಾಗದೇ ಇದ್ದ ಈ ಕಲ್ಯಾಣಿಗೆ ಹೆಲಿಕಾಪ್ಟರ್ ಇಳಿಸಲಾಗಿತ್ತು. ಆದರೆ, ಹೆಲಿಕಾಪ್ಟರ್ ಪತನಗೊಂಡು ಅವರು ಮೃತಪಟ್ಟಿದ್ದರು.

ನಂತರ ಕಲ್ಯಾಣಿ ಬಳಕೆಯನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಲಾಗಿತ್ತು. ಆ ಜಾಗಕ್ಕೆ ಪಟ್ಟಣದ ತ್ಯಾಜ್ಯ, ಕಸ ತುಂಬಲಾಗುತ್ತಿತ್ತು. ಅಂದು ಪುರಸಭೆ ಅಧ್ಯಕ್ಷರಾಗಿದ್ದ ಚಿಕ್ಕಮುದ್ದು ಅವರು ಕಲ್ಯಾಣಿ ಜಾಗವನ್ನು ಖಾಲಿ ಬಿಡುವ ಬದಲು ಮಣ್ಣಿನಿಂದ ಮುಚ್ಚಿ ಅಲ್ಲಿ ಹೂವಿನ ಮಾರುಕಟ್ಟೆ


ಉದಯವಾಹಿನಿ ಚಿತ್ರ

ಮಾಡಲು ಚಿಂತನೆ ನಡೆಸಿದ್ದರು. ಕಾಳಿಕಾಂಬ ದೇವಾಲಯ ಸಮಿತಿ ಅವರು ಮಾಜಿ ಸಚಿವ ಪಿಜಿಆರ್ ಸಿಂಧ್ಯ ಅವರನ್ನು ಭೇಟಿಯಾಗಿ ಕಲ್ಯಾಣಿ ಮುಚ್ಚದಂತೆ ಮತ್ತು ಅದನ್ನು ಸ್ವಚ್ಛಗೊಳಿಸಿ ಅಭಿವೃದ್ಧಿಪಡಿಸಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದರು. ಸಿಂಧ್ಯ ಅವರು ಪುರಸಭೆಗೆ ಕಲ್ಯಾಣಿ ಮುಚ್ಚದಂತೆ ಸೂಚನೆ ನೀಡಿ, ಅಭಿವೃದ್ಧಿ ಜವಾಬ್ದಾರಿಯನ್ನು ದೇವಾಲಯ ಸಮಿತಿಗೆ ವಹಿಸಿಕೊಟ್ಟರು.

ತಾಲ್ಲೂಕು ವಿಶ್ವಕರ್ಮ ಸಮಾಜ ಕಲ್ಯಾಣಿ ಪುನರ್ ನಿರ್ಮಾಣದ ಜವಾಬ್ದಾರಿ ಹೊತ್ತುಕೊಂಡು ತುಂಬಿದ್ದ ಮಣ್ಣು, ಬೆಳೆದಿದ್ದ ಮರಗಿಡಗಳನ್ನು ತೆರವುಗೊಳಿಸಿ, ಕಲ್ಲುಗಳನ್ನು ಸರಿಪಡಿಸಿ ಮೊದಲಿನ ಸ್ಥಿತಿಗೆ ತಂದಿತು. ಬಳಿಕ ಕಲ್ಯಾಣಿಗೆ ನೀರು ತುಂಬಿಸಿ ಪ್ರತಿವರ್ಷ ತೆಪ್ಪೋತ್ಸವ ಆಚರಿಸುತ್ತಿದೆ. ಕಳೆದ ಐದು ವರ್ಷಗಳ ಹಿಂದೆ ಕಲ್ಯಾಣಿ ಪೂರ್ವ ಭಾಗದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ ವೇದಿಕೆ ನಿರ್ಮಿಸಲಾಗಿದೆ. ಕಲ್ಯಾಣಿ ಮಧ್ಯಭಾಗದಲ್ಲಿ ದೇವರನ್ನಿಡಲು ಮತ್ತು ಪೂಜೆಗಾಗಿ ಕಂಬವನ್ನು ನಿಲ್ಲಿಸಿ ಅದರ ಮೇಲೆ ಸಣ್ಣ ಪ್ಲಾಟ್‌ಫಾರಂ ಮಾಡಲಾಗಿದೆ.

ಮೂರು ತಿಂಗಳ ಹಿಂದೆ ರೋಟರಿ ಸಂಸ್ಥೆ ಸಹಯೋಗದೊಂದಿಗೆ ದೇವಾಲಯ ಸಮಿತಿ ಕಲ್ಯಾಣಿ ಕಲ್ಲುಗಳಿಗೆ ಸುಣ್ಣಬಣ್ಣ ಹಚ್ಚಿಸಿ ಮತ್ತಷ್ಟು ಅಭಿವೃದ್ಧಿಪಡಿಸಿದೆ. ಪ್ರಸ್ತುತ ದೇವಾಲಯ ಸಮಿತಿಯಿಂದ ತೆಪ್ಪೋತ್ಸವ, ಸಂಗೀತ, ನೃತ್ಯೋತ್ಸವ, ರಸಸಂಜೆ, ಸಾಂಸ್ಕೃತಿಕ ಕಾರ್ಯಕ್ರಮ ಇಲ್ಲಿ ಆಯೋಜಿಸಲಾಗುತ್ತಿದೆ. ಕಲ್ಯಾಣಿಯಲ್ಲಿ ನೀರು ತುಂಬಿದಾಗ ಇದು ಅತ್ಯಂತ ಸುಂದರವಾಗಿ ಕಾಣುತ್ತದೆ. ವೇದಿಕೆ ಮೇಲೆ ಕಾರ್ಯಕ್ರಮ ನಡೆದರೆ ಸಾವಿರಾರು ಜನರು ಕಲ್ಯಾಣಿ ಸುತ್ತಲೂ ಕುಳಿತು ವೀಕ್ಷಿಸಬಹುದಾಗಿದೆ. ನಗರದ ಮಧ್ಯಭಾಗದಲ್ಲಿರುವ ಈ ಸ್ಥಳವನ್ನು ಜನರು ಹೆಚ್ಚಾಗಿ ಬಳಸಿಕೊಳ್ಳಬೇಕು ದೇವಾಲಯ ಸಮಿತಿ ಸಿಂಧ್ಯ ಅವರಲ್ಲಿ ಮನವಿ ಮಾಡಿದ್ದರು. ನಂತರ ಜೀರ್ಣೋದ್ಧಾರಗೊಂಡು ಕಲ್ಯಾಣಿ ಮೊದಲಿನ ಸ್ಥಿತಿಗೆ ಬಂದಿದೆ.

### ಸಾಂಸ್ಕೃತಿಕ ಕಾರ್ಯಕ್ರಮ

**ಕನಕಪುರ ನಗರದ ಹೃದಯ ಭಾಗದಲ್ಲಿರುವ ಕಾಳಿಕಾಂಬ ದೇವಾಲಯದ ಕಲ್ಯಾಣಿ ನವೀಕರಣ ತಾಲ್ಲೂಕಿನ ಧಾರ್ಮಿಕ ಇತಿಹಾಸವನ್ನು ಮುಂದಿನ ಪೀಳಿಗೆಗೆ ಉಳಿಸುವ ಉತ್ತಮ ಪ್ರಯತ್ನವಾಗಿದೆ. ಪುನರುಜ್ಜೀವನಗೊಂಡ ಈ ಪಾರಂಪರಿಕ ತಾಣದಲ್ಲಿ ಹೆಚ್ಚಿನ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ನಡೆಯಬೇಕು. ನವೀಕರಣಗೊಂಡ ಕಲ್ಯಾಣಿಯನ್ನು ಸುಂದರವಾಗಿರಿಸುವ ಹೊಣೆ ಸಾರ್ವಜನಿಕರದ್ದಾಗಿದೆ.**

## ಬಿಡದಿಯಲ್ಲಿ ನೀರು, ಶೌಚಾಲಯ, ಸ್ವಚ್ಛತೆ ಮರೀಚಿಕೆ

• ಉದಯವಾಹಿನಿ, ಬಿಡದಿ

ಬೆಂಗಳೂರು ದಕ್ಷಿಣ ಜಿಲ್ಲೆ ಬಿಡದಿ ಹೋಬಳಿ ಮಂಚನಾಯಕನಹಳ್ಳಿ ಗ್ರಾಮ ಪಂಚಾಯಿತಿಯು ತೆರಿಗೆ ಸಂಗ್ರಹದಲ್ಲಿ ಜಿಲ್ಲೆಯ ಅಗ್ರ ಪಂಚಾಯಿತಿಗಳಲ್ಲಿ ಒಂದಾಗಿದೆ. ಆದರೆ, ಈ ಪಂಚಾಯಿತಿ ವ್ಯಾಪ್ತಿಯ ಪ್ರಸಿದ್ಧ ಕೋತಿ ಆಂಜನೇಯಸ್ವಾಮಿ ದೇವಾಲಯ ಸೇರಿದಂತೆ ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ, ವೈದ್ಯಕೀಯ ಸೌಲಭ್ಯ ಸಂಪೂರ್ಣವಾಗಿ ಇಲ್ಲದೆ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ರಾಷ್ಟ್ರೀಯ ಹೆದ್ದಾರಿಯಲ್ಲಿ ಹೊಂದಿಕೊಂಡಿರುವ ಕೋತಿ ಆಂಜನೇಯ ಸ್ವಾಮಿ ದೇವಾಲಯವು ಪುರಾತನ ಹಾಗೂ ಹೆಸರಾಂತ ಕ್ಷೇತ್ರ. ದಿನನಿತ್ಯ ನೂರಾರು ಹೊಸ ವಾಹನಗಳು ಹಾಗೂ ಸಾವಿರಾರು ಭಕ್ತರು ಪೂಜೆ ಕಾರ್ಯಕ್ರಮಗಳಿಗೆ ಆಗಮಿಸುತ್ತಾರೆ. ಆದರೆ, ಇಲ್ಲಿ ಯಾವುದೇ ರೀತಿಯ ಶೌಚಾಲಯ ಅಥವಾ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಅಲ್ಲದೆ, ಇಲ್ಲಿ ನಡೆಯುವ ಹೆಸರಾಂತ ಕೋತಿ ಆಂಜನೇಯ ದನಗಳ ಜಾತ್ರೆಯಲ್ಲಿ ಜಾನುವಾರುಗಳಿಗೂ ನೀರು ಅಥವಾ ಶೌಚಾಲಯದ ಯಾವುದೇ ಸೌಲಭ್ಯ ಕಲ್ಪಿಸಿಲ್ಲ.


ಉದಯವಾಹಿನಿ ಚಿತ್ರ

ಸುಮಾರು ವರ್ಷಗಳಿಂದ ಈ ಪ್ರದೇಶದಲ್ಲಿ ಸ್ವಚ್ಛತಾ ವ್ಯವಸ್ಥೆಯಾಗಲಿ, ಅಭಿವೃದ್ಧಿ ಕಾರ್ಯಗಳಾಗಲಿ ಕಂಡು ಬಂದಿಲ್ಲ. ಗ್ರಾಮ ಪಂಚಾಯಿತಿ ಕಾಂಪೌಂಡಿನ ಗೋಡೆಗೆ ಹೊಂದಿಕೊಂಡಿರುವ ಬಸ್ ತಂಗುದಾಣದ ಸ್ವಚ್ಛತೆಗೂ ಪಂಚಾಯಿತಿ ಕಣ್ಣೆತ್ತಿಯೂ ನೋಡುವುದಿಲ್ಲ. ಹೆಜ್ಜಾಲದಿಂದ ಹಿಡಿದು ಬಿಡದಿ ಕೈಗಾರಿಕಾ ಪ್ರದೇಶದವರೆಗಿನ ರಾಷ್ಟ್ರೀಯ ಹೆದ್ದಾರಿ ಎಡ ಮತ್ತು ಬಲಭಾಗದಲ್ಲಿ ತ್ಯಾಜ್ಯ, ಪ್ಲಾಸ್ಟಿಕ್ ವಸ್ತುಗಳ ರಾಶಿಯೇ ಕಾಣಸಿಗುತ್ತದೆ. ಪ್ರಮುಖವಾಗಿ ಈ ಪಂಚಾಯಿತಿ ವ್ಯಾಪ್ತಿಯಲ್ಲಿ ದೇಶ-ವಿದೇಶಗಳಿಂದ ಸಾವಿರಾರು ಪ್ರವಾಸಿಗರು ಕೈಗಾರಿಕಾ ಪ್ರದೇಶಕ್ಕೆ ಆಗಮಿಸುತ್ತಾರೆ.

ಶೌಚಾಲಯದ ಯಾವುದೇ ಸೌಲಭ್ಯ ಇಲ್ಲ

ಆದರೆ, ಯಾವುದೇ ಅನಾಹುತ ಸಂಭವಿಸಿದರೆ ತುರ್ತು ಚಿಕಿತ್ಸಾ ಕೇಂದ್ರ ಅಥವಾ ಉಪಆರೋಗ್ಯ ಕೇಂದ್ರ ಇಲ್ಲ. ಸುಮಾರು ಕೋಟಿ ರೂಪಾಯಿ ತೆರಿಗೆ ಸಂಗ್ರಹಿಸಿದರೂ ಒಂದು ಸಿಸಿಟಿವಿ ಕ್ಯಾಮೆರಾ ವ್ಯವಸ್ಥೆಯನ್ನು ಪಂಚಾಯಿತಿಯಲ್ಲಿ ಅಳವಡಿಸಿಲ್ಲ. ಹೆಸರಿಗೆ ಮಾತ್ರ ಈ ಗ್ರಾಮ ಪಂಚಾಯಿತಿ ಶ್ರೀಮಂತ ಗ್ರಾಮ ಪಂಚಾಯಿತಿ' ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

### ಕಸದ ರಾಶಿ ಇದ್ದರೂ ಅಧಿಕಾರಿಗಳು ಕಂಡುಕಾಣದಂತೆ ಕಾಲಹರಣ

**ನಿಕಟಪೂರ್ವ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಂದಪ್ರಭ, ರಸ್ತೆ ಎರಡು ಕಡೆ ಕಸದ ರಾಶಿ ಇದ್ದರೂ ಅಧಿಕಾರಿಗಳು ಕಂಡುಕಾಣದಂತೆ ಕಾಲಹರಣ ಮಾಡುತ್ತಿದ್ದಾರೆ. ಕರೆ ಮಾಡಿ ಹೇಳಿದರೂ ಕರೆಯನ್ನೇ ಸ್ವೀಕರಿಸುವುದಿಲ್ಲ ಎಂದು ದೂರಿದರು. ಹಿಂದೆ ಪಂಚಾಯಿತಿ ವ್ಯಾಪ್ತಿಯಲ್ಲಿ ಕೈಗಾರಿಕಾ ತೆರಿಗೆ ಬರುತ್ತಿತ್ತು. ಈಗ ಅದು ಸ್ಥಗಿತಗೊಂಡಿರುವುದರಿಂದ ಹಲವು ಅಭಿವೃದ್ಧಿ ಕಾರ್ಯಗಳಿಗೆ ಹಣದ ಕೊರತೆ ಕಾಣುತ್ತಿದೆ ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೇಳಿದರು.**

ಉದಯವಾಹಿನಿ
ಪ್ರಾದೇಶಿಕ
ಮಂಗಳವಾರ 16 ಜೂನ್ 2026 | 03

# ಮಿನಿ ನ್ಯೂಸ್

## ಮಗುವಿನಹಳ್ಳಿ ಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆ



• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಕಾಡಂಚಿನ ಗ್ರಾಮ ಮಗುವಿನಹಳ್ಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮಾನವ ಅಭಿವೃದ್ಧಿ ಮತ್ತು ಏಳ್ಗೆ ಸಂಸ್ಥೆಯ ವತಿಯಿಂದ ಗಿಡ ನೆಡುವ ಮೂಲಕ ವಿಶ್ವ ಪರಿಸರ ದಿನವನ್ನ ಅರ್ಥಪೂರ್ಣವಾಗಿ ಆಚರಿಸಲಾಯಿತು. ಗ್ರಾಮಸ್ಥರು ಶಿಕ್ಷಕರ ಜತೆಯಾಗಿ ಕೈ ತೋಟದ ಬೀಜ ವಿತರಣೆ ಮಾಡುವ ಮುಖೇನ ಪರಿಸರ ಸಂರಕ್ಷಣೆ ಮತ್ತು ಪೋಷಣೆಗೆ ಎಲ್ಲರೂ ಕಟಿಬದ್ಧರಾಗಿರಬೇಕು ಎಂಬ ಸಂದೇಶ ನೀಡಲಾಯಿತು. ಗ್ರಾಮಾಂತರ ಪ್ರದೇಶದ ಅಭಿವೃದ್ಧಿಗೆ ಅವಿರತವಾಗಿ ಶ್ರಮಿಸುತ್ತಿರುವ ಅಜಯ್ ಕುಮಾರ್ ಅವರು ಮಹಿಳೆಯರು ಸ್ವ ಉದ್ಯೋಗ ಕಂಡುಕೊಳ್ಳುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ ಹಾಗಾಗಿ ಹಳ್ಳಿಗಳ ಅಭಿವೃದ್ಧಿಗಾಗಿ ಸಂಸ್ಥೆಯ ಜೊತೆಗೆ ಕೈ ಜೋಡಿಸಿ ಸಹಕಾರ ನೀಡಬೇಕು ಎಂದು ಕಲಾವತಿ ಮನವಿ ಮಾಡಿದರು. ಮಾದರಿ ಗ್ರಾಮ ಸಂಯೋಜಕ ಪ್ರದೀಪ್, ಮುಖ್ಯ ಶಿಕ್ಷಕ ಮಂಜುನಾಥ್, ಚಿನ್ನಸ್ವಾಮಿ, ಗ್ರಾಮಸ್ಥರಾದ ಮಹೇಶ್, ಮಹಿಳಾ ಸ್ವಸಹಾಯ ಸಂಘ ಸದಸ್ಯೆಯರು, ಸಂಸ್ಥೆಯ ಸಿಬ್ಬಂದಿ ಪುನೀತ್ ಕುಮಾರ್, ಮಹಾಲಕ್ಷ್ಮಿ, ಭವಾನಿ , ಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

## ತುಮಕೂರು ನಗರ ಉದ್ಯೋಗ ಖಾತ್ರಿ ಭರವಸೆ ಈಡೇರಿಲ್ಲ: ಸ್ಲಂ ಜನಾಂದೋಲನ ಆರೋಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಸ್ಲಮ್ ಮತ್ತು ನಗರ ಪ್ರದೇಶದ ಬಡ ಜನರಿಗೆ ನೀಡಿದ್ದ ಭರವಸೆಗಳು ಇದುವರೆಗೂ ಈಡೇರಿಲ್ಲ ಎಂದು ಸ್ಲಂ ಜನಾಂದೋಲನ ಕರ್ನಾಟಕದ ರಾಜ್ಯ ಸಂಚಾಲಕ ಎ.ನರಸಿಂಹಮೂರ್ತಿ ಹೇಳಿದರು. ನಗರದಲ್ಲಿ ನಡೆದಜೂನ್ 20ರಂದು ಗದಗದಲ್ಲಿ ಹಮ್ಮಿಕೊಂಡಿರುವ ಸ್ಲಂ ಜನಾಂದೋಲನ ಕರ್ನಾಟಕದ ರಾಜ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ನಗರ ಉದ್ಯೋಗ ಖಾತ್ರಿ, ವಸತಿ ಹಕ್ಕು ಮತ್ತು ಭೂ ಬ್ಯಾಂಕ್, ಸ್ಲಂ ಜನರ ಪ್ರತ್ಯೇಕ ಸಚಿವಾಲಯ, ಸ್ಲಂ ಪ್ರದೇಶಗಳ ಹೆಸರು ಬದಲಾವಣೆ ಸೇರಿ ಇತರೆ ಭರವಸೆ ನೀಡಲಾಗಿತ್ತು.

ಕಾಂಗ್ರೆಸ್ ಅಧಿಕಾರಕ್ಕೆ ಬಂದು ಮೂರು ವರ್ಷ ಕಳೆದರೂ ಭರವಸೆ ಈಡೇರಿಸಿಲ್ಲ. ಸ್ಲಂ ಜನರ ವಿರೋಧಿ ನೀತಿಗಳನ್ನು ಜಾರಿಗೊಳಿಸಲಾಗಿದೆ ಎಂದರು. ರಾಜ್ಯ ಸರ್ಕಾರ ಎಸ್‌ಐಆರ್ ಪ್ರಕ್ರಿಯೆಯನ್ನು ಒಪ್ಪಿಕೊಂಡಿದೆ. ಇದು ಅತೀ ಸೂಕ್ಷ್ಮ, ವಂಚಿತ ಸಮುದಾಯದ ಜನರ ಮತದಾನ ಹಕ್ಕಿನ ಮೇಲೆ ಗಂಭೀರ ಪರಿಣಾಮ ಬೀರಲಿದೆ. ಗದಗದಲ್ಲಿ ನಡೆಯುವ ಸಮಾವೇಶದಲ್ಲಿ ವಿಚಾರಗಳ ಕುರಿತ್ತು ಚರ್ಚಿಸಲಾಗುತ್ತದೆ ಎಂದು ತಿಳಿಸಿದರು. ಅರುಣ್ ಅವರನ್ನು ಸ್ಲಂ ಜನಾಂದೋಲನ ಕರ್ನಾಟಕದ ರಾಜ್ಯ ಸಮಿತಿಯ ಪ್ರತಿನಿಧಿಗಳನ್ನಾಗಿ ಆಯ್ಕೆ ಮಾಡಲಾಯಿತು.

ಮುಖಂಡರಾದ ಕಣ್ಣನ್, ಕೃಷ್ಣ, ಶಾರದಮ್ಮ, ಜಾಬೀರ್ ಖಾನ್, ಮಂಗಳಮ್ಮ, ಕೆಂಪಣ್ಣ, ಶಾಬುದ್ದೀನ್, ಮುಬಾರಕ್, ಪೂರ್ಣಿಮಾ, ಗುಲ್ನಾಜ್, ಹನುಮಕ್ಕ, ಸಲ್ಮಾಬಾನು, ನರಸಿಂಹಮೂರ್ತಿ, ಮಂಜುನಾಥ್ ಇತರರು ಪಾಲ್ಗೊಂಡಿದ್ದರು.

## ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಬೆಂಕಿ ಅವಘಡ: ಇಬ್ಬರು ಸಾವು, 7 ಮಂದಿಗೆ ಗಾಯ

• ಉದಯವಾಹಿನಿ, ಮೈಸೂರು

ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಶಾರ್ಟ್ ಸರ್ಕೂಟ್‌ನಿಂದಬೆಂಕಿ ಹೊತ್ತಿಕೊಂಡು, ಅಡುಗೆ ಕೋಣೆಯಲ್ಲಿದ್ದ ಇಬ್ಬರು ಸಾವನ್ನಪ್ಪಿ 7 ಜನರಿಗೆ ಗಂಭೀರ ಗಾಯವಾದ ಘಟನೆ ನಗರದ ಆರ್.ಟಿ. ನಗರದ ದಟ್ಟಗಳ್ಳಿಯಲ್ಲಿ ಸೋಮವಾರ ಸಂಭವಿಸಿದೆ. ದಟ್ಟಗಳ್ಳಿಯ ರಿಂಗ್ ರಸ್ತೆ ಬಳಿಯಿರುವ ಫಾಕ್ಸ್ ಡೆನ್ ಲಿಕ್ಕರ್ ಗ್ಯಾರೇಜ್ ಬಾರ್ ಅಂಡ್ ರೆಸ್ಟೋರೆಂಟ್ ಇದಾಗಿದೆ. ಘಟನೆಯಲ್ಲಿ ಸಾಹಿಲ್ ಮತ್ತು ಪ್ರಕಾಶ್ ಎಂಬುವವರು ಸಾವನ್ನಪ್ಪಿದ್ದಾರೆ. ಅಲ್ಲದೆ, 7 ಜನರು ಗಾಯಗೊಂಡಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿ ಅವರನ್ನು ರಕ್ಷಣೆ ಮಾಡಿದ್ದಾರೆ. ಅವಘಡದ ಸಂದರ್ಭದಲ್ಲಿ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ 25ಕ್ಕೂ ಹೆಚ್ಚು ಜನರಿದ್ದರು ಎಂದು ತಿಳಿದುಬಂದಿದೆ.

ಗಾಯಾಳುಗಳನ್ನು ಚಿಕಿತ್ಸೆಗಾಗಿ ಸುಯೋಗ ಹಾಗೂ ಅಪೋಲೋ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಬೆಂಕಿ ಅವಘಡ ಬಳಿಕ ಕಟ್ಟಡದಲ್ಲಿ ದಟ್ಟ ಹೊಗೆ ಆವರಿಸಿದ್ದರಿಂದ ಆತಂಕಗೊಂಡ ಕೆಲವರು ಮೇಲಂತಸ್ತಿನಿಂದ ಜಿಗಿದು ಪಾರಾಗಲು ಯತ್ನಿಸಿದರು. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

## ಎಲ್ಲೆಲ್ಲೂ ನೇರಳೆ ಖರೀದಿ ಬಿರುಸು

• ಉದಯವಾಹಿನಿ, ಹುಳಿಯಾರು

ಪಟ್ಟಣವೂ ಸೇರಿದಂತೆ ಜನನಿಬಿಡ ಸ್ಥಳಗಳಲ್ಲಿ ಇದೀಗ ಎಲ್ಲಿ ನೋಡಿದರೂ ನೇರಳೆ ಹಣ್ಣಿನ ರಾಶಿ. ಜೂನ್, ಜುಲೈನಲ್ಲಿ ಮಾತ್ರ ಸಿಗುವುದರಿಂದ ಮಾರಾಟವೂ ಬಿರುಸಾಗಿದೆ. ಮರಗಳು ಹಣ್ಣು ತುಂಬಿಕೊಂಡಿವೆ. ಆದರೆ ಸೂಕ್ತ ಧಾರಣೆ ಸಿಗದಾಗಿದೆ. ಹಿಂದಿನ ವರ್ಷಗಳಲ್ಲಿ ಒಂದು ಕೆ.ಜಿ ನೇರಳೆ ಹಣ್ಣಿಗೆ ಮಾರುಕಟ್ಟೆಯಲ್ಲಿ 240ರಿಂದ 280, 320ರಂತೆ ಮಾರಾಟವಾಗಿತ್ತು. ಆದರೆ ಈ ವರ್ಷ 100, 120ಕ್ಕೆ ಮಾರಾಟವಾಗುತ್ತಿದೆ. ಇದು ಗ್ರಾಹಕರಲ್ಲಿ ಖುಷಿ ಮೂಡಿಸಿದ್ದರೆ, ಬೆಳೆಗಾರರಿಗೆ ಬೇಸರ ಮೂಡಿಸಿದೆ. ರೈತರ ಜಮೀನಿನ ಬದುವಿನಲ್ಲಿ ಬೆಳೆಯುತ್ತಿದ್ದ ನೇರಳೆ ಇದೀಗ ವಾಣಿಜ್ಯ ಬೆಳೆಯಾಗಿ ಮಾರ್ಪಡುತ್ತಿದೆ.

ಈ ಹಂತದಲ್ಲೇ ಬೆಲೆ ಕುಸಿದಿರುವುದು ಬೆಳೆಗಾರರನ್ನು ಕಂಗಾಲಾಗಿಸಿದೆ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ನೇರಳೆ ಕೃಷಿ ಅಷ್ಟಿಲ್ಲ. ಹೊರಗಿನಿಂದ ತಂದು ಮಾರಾಟ ಮಾಡುತ್ತಿದ್ದಾರೆ. ಉತ್ತಮ ತಳಿಯ ಸಸಿಗಳನ್ನು ಆಯ್ಕೆ ಮಾಡಿ ನೆಟ್ಟರೆ ನಾಲ್ಕೈದು ವರ್ಷಗಳಲ್ಲಿ ಫಲ ಸಿಗಲಿದೆ.

ನೇರಳೆ ಗಿಡ ಮರವಾಗಿ ಬೆಳೆದ ಬಳಿಕ ನಿರ್ವಹಣೆಗೆ ಹೆಚ್ಚು ವೆಚ್ಚ ಮಾಡಬೇಕಿಲ್ಲ. ಕೊಯ್ದು ಹೊರತುಪಡಿಸಿ ಬೇರೆ ಯಾವ ಕೆಲಸವೂ ಇರುವುದಿಲ್ಲ ಎನ್ನುತ್ತಾರೆ ನೇರಳೆ ಹಣ್ಣಿನ ವ್ಯಾಪಾರಿ ಕೆಂಕೆರೆ ಗ್ರಾಮದ ಅಡಾಣಿಕಲ್ಲು ವಾಸಿ ಪರಮೇಶ್ ನಮ್ಮ ಭಾಗದಲ್ಲಿ ನೇರಳೆ ಹಣ್ಣು ಸಿಗುವುದು ಕಡಿಮೆ. ಈ ಹಂತದಲ್ಲೇ ಬೆಲೆ ಕುಸಿದಿರುವುದು ಬೆಳೆಗಾರರನ್ನು ಕಂಗಾಲಾಗಿಸಿದೆ.

ನೆರೆಯ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಪಂಚನಹಳ್ಳಿ ಭಾಗದಲ್ಲಿ ತೋಟಗಳಿದ್ದು, ಅಲ್ಲಿಂದ ತಂದು ಮಾರಾಟ ಮಾಡುತ್ತಿದ್ದೇವೆ ಎಂದು ನೇರಳೆ ವ್ಯಾಪಾರಿಗಳು ಹೇಳುತ್ತಾರೆ. ನೇರಳೆ ಹಣ್ಣಿನಲ್ಲಿ ಔಷಧಿಯ ಗುಣವಿರುವುದರಿಂದ ಮಿತವಾಗಿ ಸೇವಿಸುವುದರಿಂದ ಆರೋಗ್ಯ ವೃದ್ಧಿಗೆ ಪೂರಕವಾಗಿದೆ.

# ಅಂಬಲಪಾಡಿ ಮೇಲ್ಸೇತುವೆ ಮಂಗಳೂರು-ಕುಂದಾಪುರ ಏಕಮುಖ ಸಂಚಾರಕ್ಕೆ ಮುಕ್ತ; ಪ್ರಯಾಣಿಕರಿಗೆ ನಿರಾಳ

• ಉದಯವಾಹಿನಿ, ಉಡುಪಿ

ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಸುಧಾರಿಸುವ ನಿಟ್ಟಿನಲ್ಲಿ, ಅಂಬಲಪಾಡಿ ಮೇಲ್ಸೇತುವೆಯನ್ನು ಮಂಗಳೂರಿನಿಂದ ಕುಂದಾಪುರದ ಕಡೆಗೆ ಹೋಗುವ ಏಕಮುಖ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ.

ಮೇಲ್ಸೇತುವೆಯ ಕೆಳಗಿನ ಸರ್ವಿಸ್ ರಸ್ತೆಯಲ್ಲಿ ದೊಡ್ಡ ಗುಂಡಿಗಳು ಬಿದ್ದಿದ್ದು, ಮಳೆಗಾಲದ ಕಾರಣ ನೀರು ನಿಂತು ವಾಹನ ಸವಾರರಿಗೆ ಸಂಚಾರ ಕಷ್ಟಕರ ಮತ್ತು ಅಪಾಯಕಾರಿಯಾಗಿ ಪರಿಣಮಿಸಿತ್ತು. ಸಾರ್ವಜನಿಕರು ಪಡುತ್ತಿದ್ದ ತೊಂದರೆಯನ್ನು ಗಮನದಲ್ಲಿಟ್ಟುಕೊಂಡು, ವಾಹನ ಸಂಚಾರ ಸುಗಮವಾಗುವಂತೆ ಮೇಲ್ಸೇತುವೆಯನ್ನು ತಾತ್ಕಾಲಿಕವಾಗಿ ಏಕಮುಖ ಸಂಚಾರಕ್ಕೆ ತೆರೆಯಲಾಗಿದೆ.



ಉದಯವಾಹಿನಿ ಚಿತ್ರ

ಮೇಲ್ಸೇತುವೆಯ ಮತ್ತೊಂದು ಬದಿಯನ್ನು ಸೋಮವಾರ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರಿಂದ ಎರಡೂ ದಿಕ್ಕುಗಳಲ್ಲಿ ವಾಹನಗಳು ಸಂಚರಿಸಲು ಅನುಕೂಲವಾಗಲಿದೆ.

ಪ್ರಸ್ತುತ ಈ ಪ್ರದೇಶದಲ್ಲಿನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ತುರ್ತು ಕ್ರಮವಾಗಿ ಈ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.

ಸಂಚಾರ ದಟ್ಟಣೆ ಕಡಿಮೆಯಾದ ನಂತರ ಸರ್ವಿಸ್ ರಸ್ತೆಯ ದುರಸ್ತಿ ಕಾರ್ಯವನ್ನು ಆದ್ಯತೆಯ ಮೇರೆಗೆ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದ್ದಾರೆ.

ಈ ಮೇಲ್ಸೇತುವೆ ಪರಿಶೀಲನೆ ಮತ್ತು ಸಂಚಾರಕ್ಕೆ ಮುಕ್ತಗೊಳಿಸುವ ಸಂದರ್ಭದಲ್ಲಿ ಉಡುಪಿ- ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ, ಉಡುಪಿ ಶಾಸಕ ಯಶ್‌ಪಾಲ್ ಸುವರ್ಣ, ಮಾಜಿ ನಗರಸಭಾ ಸದಸ್ಯ ಹರೀಶ್ ಶೆಟ್ಟಿ, ಬಿಜೆಪಿ ಯುವಮೋರ್ಚಾ ಅಧ್ಯಕ್ಷ ಪೃಥ್ವಿರಾಜ್ ಶೆಟ್ಟಿ, ಉಪಾಧ್ಯಕ್ಷ ಗಜೇಂದ್ರ ಎಸ್. ಪೆಲೆಮನೆ, ಪ್ರಧಾನ ಕಾರ್ಯದರ್ಶಿಗಳಾದ ಅಭಿರಾಜ್ ಸುವರ್ಣ ಮತ್ತು ಪ್ರದೀಪ್ ಕುಂದರ್ ಸೇರಿದಂತೆ ಹಲವು ಪಕ್ಷದ ಮುಖಂಡರು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

**ಪ್ರಯಾಣಿಕರಿಗೆ ತಕ್ಷಣದ ಪರಿಹಾರ**

**ಈ ಮೇಲ್ಸೇತುವೆಯ ತಾತ್ಕಾಲಿಕ ಆರಂಭದಿಂದಾಗಿ ಈ ಭಾಗದಲ್ಲಿ ಸಂಚರಿಸುವ ಪ್ರಯಾಣಿಕರಿಗೆ ತಕ್ಷಣದ ಪರಿಹಾರ ಸಿಕ್ಕಂತಾಗಿದ್ದು, ಅಧಿಕಾರಿಗಳು ಸರ್ವಿಸ್ ರಸ್ತೆಯನ್ನು ಶೀಘ್ರವೇ ದುರಸ್ತಿಗೊಳಿಸಿ ಸಂಚಾರ ವ್ಯವಸ್ಥೆಯನ್ನು ಸುಧಾರಿಸುವ ಭರವಸೆ ನೀಡಿದ್ದಾರೆ.**

# ಮಳೆಗಾಲದ ಬೆನ್ನಲ್ಲೇ ಕರಾವಳಿಯಲ್ಲಿ ಹೆಚ್ಚಾಯ್ತು ಭೂಕುಸಿತ ಭೀತಿ

## ಮಂಗಳೂರು-ಬೆಂಗಳೂರು ಹೆದ್ದಾರಿಯಲ್ಲಿ ನೆಲ್ಯಾಡಿ ಸಮೀಪದ ಮಣ್ಣಗುಂಡಿಯಲ್ಲಿ ಪದೇ ಪದೇ ಸಂಭವಿಸುತ್ತಿರುವ

• ಉದಯವಾಹಿನಿ, ಮಂಗಳೂರು :

ಕಳೆದ ಐದಾರು ವರ್ಷಗಳಿಂದ ಜಿಲ್ಲೆಯಲ್ಲಿ ಭೂಕುಸಿತ ಪ್ರಕರಣಗಳು ಹೆಚ್ಚುತ್ತಲೇ ಇವೆ. ಮಳೆಗಾಲ ಬಂತೆಂದರೆ ಜೀವ ಕೈಯಲ್ಲಿ ಹಿಡಿದೇ ಬದುಕುವ ಪರಿಸ್ಥಿತಿ ಇದೆ.

1 : ಸಂಭವಿಸುತ್ತಿರುವ ಭೂಕುಸಿತ
2 : ಸರಣಿ ದುರಂತಗಳ ನೆರಳು
3 : ಪಂಚಾಯಿತಿಗಳಿಗೆ ಹೊಣೆ

ಈ ರೀತಿಯ ಅಪಾಯಕಾರಿ ಸ್ಥಳಗಳನ್ನು ಪಟ್ಟಿ ಮಾಡಿ ಮುನ್ನೆಚ್ಚರಿಕೆ ವಹಿಸುವ ಕೆಲಸಗಳು ನಡೆಯುತ್ತಿದ್ದು, ಜನರು ಸಂಭಾವ್ಯ ಭೂಕುಸಿತ ಪ್ರದೇಶಗಳ ಬಗ್ಗೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಲಾಗಿದೆ. 2018ರ ಮಳೆಗಾಲದಲ್ಲಿ ಕೊಡಗು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಗಡಿಭಾಗದಲ್ಲಿ ಸಂಭವಿಸಿದ ಭೂಕುಸಿತಗಳು, ಜೋಡುಪಾಲ ದುರ್ಘಟನೆ ನಾಡನ್ನೇ ಬೆಚ್ಚಿ ಬೀಳಿಸಿದ್ದರೆ, 2019ರಲ್ಲಿ ಉಂಟಾದ ಮೇಘ ಸ್ಫೋಟ ಮಾದರಿಯ ದುರಂತದಲ್ಲಿ ಬೆಳ್ತಂಗಡಿ ತಾಲ್ಲೂಕಿನ ನೂರಾರು ಕಡೆ ಉಂಟಾದ ಪ್ರವಾಹ ಮತ್ತು ಭೂಕುಸಿತಗಳು ಅದೆಷ್ಟೋ ಕುಟುಂಬಗಳನ್ನು ಕಣ್ಣೀರಿನಲ್ಲಿ ಕೈತೊಳೆಯುವಂತೆ ಮಾಡಿತ್ತು. ನಂತರದ ವರ್ಷಗಳಲ್ಲಿ ಕುಕ್ಕೆ ಸುಬ್ರಹ್ಮಣ್ಯದ ಪರ್ವತಮುಖಿ ಪ್ರದೇಶದಲ್ಲಿ ಪ್ರಾಣಹಾನಿ ಉಂಟುಮಾಡಿದ ಭೂಕುಸಿತ, ಮಂಗಳೂರು-ಬೆಂಗಳೂರು ಹೆದ್ದಾರಿಯಲ್ಲಿ ನೆಲ್ಯಾಡಿ ಸಮೀಪದ ಮಣ್ಣಗುಂಡಿಯಲ್ಲಿ ಪದೇ ಪದೇ ಸಂಭವಿಸುತ್ತಿರುವ ಭೂಕುಸಿತ, ಮಾಣಿ-ಮೈಸೂರು ಹೆದ್ದಾರಿಯಲ್ಲಿ ಪುತ್ತೂರು ಹೊರವಲಯದ ಕುಂಬ್ರ ಸಮೀಪ ಸಂಭವಿಸಿದ ಸರಣಿ ಭೂ ಕುಸಿತಗಳು, ಪುತ್ತೂರು ಬೈಪಾಸ್ ಹೆದ್ದಾರಿಯಲ್ಲಿ ಉಂಟಾದ ಭೂಕುಸಿತ, ಪುತ್ತೂರಿನ ತೆಂಕಿಲ ಬೆಟ್ಟದಲ್ಲಿ ಉಂಟಾದ ಬಿರುಕು, ಉಪ್ಪಿನಂಗಡಿ ಸಮೀಪದ ಬೆಳ್ಳಿಪ್ಪಾಡಿ, ಕೋಡಿಂಬಾಡಿ ಗ್ರಾಮಗಳಲ್ಲಿ ಕಳೆದ ವರ್ಷ ಸಂಭವಿಸಿದ ಸರಣಿ ಭೂಕುಸಿತ ಪ್ರಕರಣ ಹೀಗೆ ನೂರಾರು ಕಡೆ ಸರಣಿ ದುರಂತಗಳು ಜನಜೀವನವನ್ನೇ ಆತಂಕದ ಮಡುವಿಗೆ ತಳ್ಳಿವೆ. ಪ್ರತಿ ಗ್ರಾಪಂ ಮಟ್ಟದಲ್ಲಿ ವಿಕೋಪ ನಿರ್ವಹಣಾ ಸಮಿತಿ ರಚಿಸಿ ಅಭಿವೃದ್ಧಿ ಅಧಿಕಾರಿಯನ್ನು ಇನ್ಸಿಡೆಂಟ್ ಕಮಾಂಡರ್ ಮಾಡಲಾಗಿದೆ. ಗ್ರಾಪಂ ವ್ಯಾಪ್ತಿಯಲ್ಲಿರುವ ಎಲ್ಲಾ ಸಂಭವನೀಯ ಅಪಾಯಕಾರಿ ಸ್ಥಳಗಳನ್ನು ಪಟ್ಟಿ ಮಾಡಿ ಅಲ್ಲಿ ಮುನ್ನೆಚ್ಚರಿಕೆ ಫಲಕ ಅಳವಡಿಕೆ ಆರಂಭಿಸಲಾಗಿದೆ. ಹಿಂದಿನ ವರ್ಷಗಳಲ್ಲಿ ಭೂಕುಸಿತ ಸಂಭವಿಸಿದ ಪ್ರದೇಶಗಳನ್ನು ಪಟ್ಟಿ ಮಾಡಿ ಅಲ್ಲಿನ ಪ್ರಸ್ತುತ ಪರಿಸ್ಥಿತಿಯ ವರದಿ ಸಲ್ಲಿಸಲಾಗಿದೆ.

ಪ್ರತಿ ತಾಲ್ಲೂಕಿನಲ್ಲೂ 4ರಿಂದ 6ರಷ್ಟು ಕಾಳಜಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಂಗಳೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 75ರ ನೆಲ್ಯಾಡಿ ಸಮೀಪದ ಮಣ್ಣಗುಂಡಿ ಪ್ರದೇಶದ ಗುಡ್ಡ ಕುಸಿತದ ಭೀತಿ ಇನ್ನೂ ನಿವಾರಣೆಯಾಗಿಲ್ಲ. ಕಳೆದ ಮಳೆಗಾಲದಲ್ಲಿ ನಾಲ್ಕೈದು ಬಾರಿ ಗುಡ್ಡ ಕುಸಿದು ಗಂಟೆಗಟ್ಟಲೆ ವಾಹನ ಸಂಚಾರ ಸ್ಥಗಿತಗೊಂಡಿತ್ತು. ಅವೈಜ್ಞಾನಿಕವಾಗಿ ಗುಡ್ಡಗಳನ್ನು ಕತ್ತರಿಸಿರುವುದೇ ಈ ಸಮಸ್ಯೆಗೆ ಪ್ರಮುಖ ಕಾರಣ ಎನ್ನಲಾಗುತ್ತಿದೆ. ಇದೀಗ ಮಣ್ಣು ತೆರವುಗೊಳಿಸಿ ಕೆಲವೆಡೆ ಪ್ಲಾಸ್ಟಿಕ್ ಹೊದಿಕೆ ಅಳವಡಿಸಿರುವುದಷ್ಟೇ ಕಂಡುಬರುತ್ತಿದೆ.



ಉದಯವಾಹಿನಿ ಚಿತ್ರ

**ಪ್ರಾಕೃತಿಕ ದುರಂತದ ಘಟನೆಗಳನ್ನು ಏಕಕಾಲದಲ್ಲಿ ಗಮನಿಸುವ ಉದ್ದೇಶದಿಂದ ಸಂಬಂಧಪಟ್ಟ ಅಧಿಕಾರಿಗಳು ಇರುವ ವಾಟ್ಸ್ಯಾಪ್ ಗ್ರೂಪ್ ರಚಿಸಲಾಗಿದೆ. ಇಲ್ಲಿ ಪ್ರತಿದಿನದ ಘಟನೆಗಳನ್ನು ಅಪ್‌ಡೇಟ್ ಮಾಡಲಾಗುತ್ತದೆ. ಅಪಾಯಕಾರಿ ಸ್ಥಳಗಳು, ಹಿಂದೆ ದುರಂತ ಸಂಭವಿಸಿದ ಸ್ಥಳಗಳಲ್ಲಿ ಎಚ್ಚರಿಕೆ ಫಲಕ ಅಳವಡಿಸಲಾಗುತ್ತಿದೆ. ಅಲ್ಲಿನ ನಿವಾಸಿಗಳಿಗೆ ನೋಟಿಸ್ ನೀಡಲಾಗುತ್ತದೆ.**
**-ಸ್ಟೆಲ್ಲಾ ವರ್ಗೀಸ್, ಸಹಾಯಕ ಆಯುಕ್ತರು, ಪುತ್ತೂರು ಉಪವಿಭಾಗ**

**ಪ್ರಕೃತಿ ವಿಕೋಪ ಸಭೆ ನಡೆಸಿ ಎಲ್ಲಾ ಅಧಿಕಾರಿಗಳು ಕೇಂದ್ರಸ್ಥಾನ ಬಿಟ್ಟು ಹೋಗದಂತೆ ತಿಳಿಸಲಾಗಿದೆ. ಕುಸಿಯುವ ಸಾಧ್ಯತೆ ಇರುವ ಬೆಟ್ಟಗಳ ತಪ್ಪಲಿನ ಜನ ಜಾಗ್ರತೆ ವಹಿಸಬೇಕು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾರದು. ಅಂತಹ ಸ್ಥಳಗಳನ್ನು ಪಟ್ಟಿ ಮಾಡುವ ಕಾರ್ಯ ನಡೆದಿದೆ.**
**-ಅಶೋಕ್ ರೈ, ಶಾಸಕರು, ಪುತ್ತೂರು**

**ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನ ಸಮೀಪದ ಬೆಟ್ಟದ ತಪ್ಪಲಿನಲ್ಲಿ ಏಳೆಂಟು ಕುಟುಂಬಗಳು ವಾಸಿಸುತ್ತಿದ್ದು, ಅಪಾಯಕಾರಿ ಸ್ಥಳವೆಂದು ಗುರುತಿಸಲಾಗಿದೆ. ಪ್ರತಿವರ್ಷದಂತೆ ಈ ವರ್ಷವೂ ಈ ಮನೆಗಳಿಗೆ ಎಚ್ಚರಿಕೆ ನೋಟಿಸ್ ಜಾರಿ ಮಾಡಲಾಗಿದೆ. ಅಗತ್ಯ ಬಿದ್ದಲ್ಲಿ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದ ಅನಂತ ಮತ್ತು ಅಭಯ ವಸತಿಗೃಹಗಳಲ್ಲಿ ಇವರಿಗೆ ಆಶ್ರಯ ನೀಡಲಾಗುತ್ತದೆ.**
**-ಮಲ್ಲೇಶ್ ಗೌಡ, ಅಭಿವೃದ್ಧಿ ಅಧಿಕಾರಿ, ಸುಬ್ರಹ್ಮಣ್ಯ ಗ್ರಾಪಂ**

# ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸಲು ವಕೀಲರು ಮುಂದಾಗಬೇಕು

• ಉದಯವಾಹಿನಿ ಧಾರವಾಡ

ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಾಮಾಜಿಕ ನ್ಯಾಯ ದೊರಕಿಸುವಲ್ಲಿ ಕಾನೂನು ಸೇವೆಯ ಪಾತ್ರ ಮಹತ್ವದ್ದಾಗಿದೆ. ನ್ಯಾಯಾಂಗ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸವನ್ನು ಉಳಿಸುವ ಜವಾಬ್ದಾರಿ ವಕೀಲರ ಮೇಲಿದೆ. ಕಕ್ಷಿದಾರರು ನ್ಯಾಯದ ಮೇಲೆ ವಿಶ್ವಾಸ ಇಟ್ಟು ನ್ಯಾಯಾಲಯಕ್ಕೆ ಬಂದಾಗ ಅವರಿಗೆ ನ್ಯಾಯ ಒದಗಿಸುವುದು ವಕೀಲರ ಕರ್ತವ್ಯವಾಗಿದೆ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಆಡಳಿತ ನ್ಯಾಯಾಧೀಶ ಎಚ್.ಪಿ. ಸಂದೇಶ ಅವರು ಹೇಳಿದರು. ಅವರು ಕೃಷಿ ನಗರ ಕೃಷಿ ವಿಶ್ವವಿದ್ಯಾಲಯದ ರೈತ ಜ್ಞಾನ ಕೇಂದ್ರ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಹುಬ್ಬಳ್ಳಿ ಕಾನೂನು ಕಾಲೇಜು ಧಾರವಾಡ ವಲಯದ ಅಡಿಯಲ್ಲಿ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಧಾರವಾಡ ತರಗತಿಯಿಂದ ನ್ಯಾಯಾಲಯದ ಕೋಣೆಗೆ 4 ನೇ ವಲಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ಭವಿಷ್ಯದಲ್ಲಿ ವಕೀಲರಾಗುವ ಕಾನೂನು ವಿದ್ಯಾರ್ಥಿಗಳು ಅನ್ಯಾಯಕ್ಕೆ ಒಳಗಾದವರ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು.

ಇಲ್ಲವಾದರೆ ಕಪ್ಪು ಕೋಟ್ ಧರಿಸುವುದಕ್ಕೆ ಅರ್ಥವಿಲ್ಲ. ಎಲ್‌ಎಲ್‌ಬಿ ವಿದ್ಯಾರ್ಥಿಗಳು ಶಿಸ್ತು, ಶ್ರಮ, ಸಮಯಪ್ರಜ್ಞೆ, ಆತ್ಮವಿಶ್ವಾಸ ಹಾಗೂ ನಿರ್ಭೀತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ನೊಂದವರು, ವಿಧವೆಯರು ಹಾಗೂ ಅನ್ಯಾಯಕ್ಕೆ ಒಳಗಾದವರ ಪರವಾಗಿ ನಿಂತು ಅವರ ಹಕ್ಕುಗಳ ರಕ್ಷಣೆಗೆ ಮುಂದಾಗಬೇಕು ಎಂದು ಅವರು ಹೇಳಿದರು.



ಉದಯವಾಹಿನಿ ಚಿತ್ರ

**ಕಾನೂನುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು**

**ದೇಶದ ವಿವಿಧ ಕಾನೂನುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ವಿದ್ಯಾರ್ಥಿಗಳು ಕಾನೂನು ಶಿಕ್ಷಣ ಪಡೆಯುವುದರ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಅರಿತುಕೊಂಡು ನೊಂದ ಮತ್ತು ಶೋಷಿತ ಜನರಿಗೆ ನ್ಯಾಯ ದೊರೆಯುವಂತೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.**

# ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳ ಪರಿಹಾರಕ್ಕೆ ಬೃಹತ್ ಹೋರಾಟ

• ಉದಯವಾಹಿನಿ ವಿಜಯಪುರ

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಇಂದು ದ್ರಾವಿಡ ವಿದ್ಯಾರ್ಥಿ ಪರಿಷತ್ ವತಿಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳ ಪರಿಹಾರಕ್ಕಾಗಿ ಹಮ್ಮಿಕೊಳ್ಳಲಿರುವ ಬೃಹತ್ ಹೋರಾಟದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿ, ದ್ರಾವಿಡ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಹಾಗೂ ವಿದ್ಯಾರ್ಥಿ ನಾಯಕ ಅಕ್ಷಯ್ ಕುಮಾರ್ ಅಜಮನಿ, ರಾಜ್ಯದಾದ್ಯಂತ ವಿದ್ಯಾರ್ಥಿಗಳು ಎದುರಿಸುತ್ತಿರುವ ವಿವಿಧ ಶೈಕ್ಷಣಿಕ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಲು ಹಾಗೂ ಹೋರಾಟವನ್ನು ಸಂಘಟಿಸಲು ಈ ಅಭಿಯಾನವನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಶೈಕ್ಷಣಿಕ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಪ್ರಾಯೋಗಿಕ ತರಬೇತಿಗಳು ಸಮರ್ಪಕವಾಗಿ ದೊರೆಯುತ್ತಿಲ್ಲ. ಅಲ್ಲದೆ, ಕೆಲವು ಶೈಕ್ಷಣಿಕ ಸಂಸ್ಥೆಗಳಲ್ಲಿ ನಿಯಮಬಾಹಿರವಾಗಿ ಹೆಚ್ಚಿನ ಶುಲ್ಕ ವಸೂಲಿ ಮಾಡಲಾಗುತ್ತಿದ್ದು, ವಿದ್ಯಾರ್ಥಿಗಳು ಮತ್ತು ಪೋಷಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಇಂದಿನ ಅಗತ್ಯಗಳಿಗೆ ಅನುಗುಣವಾಗಿ ರಾಷ್ಟ್ರೀಯ ಶಿಕ್ಷಣ ನೀತಿ ಯನ್ನು ಸಮರ್ಪಕವಾಗಿ ಜಾರಿಗೊಳಿಸಿಲ್ಲ. ಅನೇಕ ತರಬೇತಿ ಸಂಸ್ಥೆಗಳಲ್ಲಿ ಕಂಪ್ಯೂಟರ್ ಲ್ಯಾಬ್, ಸ್ಮಾರ್ಟ್ ಬೋರ್ಡ್, ಸುಸಜ್ಜಿತ ಗ್ರಂಥಾಲಯ ಸೇರಿದಂತೆ ಮೂಲಭೂತ ಶೈಕ್ಷಣಿಕ ಸೌಲಭ್ಯಗಳ ಕೊರತೆ ಇದ್ದರೂ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಗಮನ ಹರಿಸುತ್ತಿಲ್ಲ ಎಂದು ಅವರು ತಿಳಿಸಿದರು.

ಕೆಲವು ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳೊಂದಿಗೆ, ವಿಶೇಷವಾಗಿ ಮಹಿಳಾ ವಿದ್ಯಾರ್ಥಿನಿಯರೊಂದಿಗೆ ಅವಹೇಳನಕಾರಿ ಹಾಗೂ ಅಸಭ್ಯ ರೀತಿಯಲ್ಲಿ ವರ್ತಿಸಲಾಗುತ್ತಿರುವುದು ಖಂಡನೀಯವಾಗಿದೆ. ಪರೀಕ್ಷೆಗಳು ಸಕಾಲಕ್ಕೆ ನಡೆಯದೇ ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಯಲ್ಲಿ ಸಿಲುಕಿದ್ದು, ವ್ಯವಸ್ಥಿತ ಮಾರ್ಗದರ್ಶನದ ಕೊರತೆಯಿಂದ ವಿದ್ಯಾರ್ಥಿಗಳು ಸೂಕ್ತ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಹೇಳಿದರು. ಇದರ ಜೊತೆಗೆ ಆಂತರಿಕ ಅಂಕಗಳು ಹಾಗೂ ಪ್ರಾಯೋಗಿಕ ಪರೀಕ್ಷೆಗಳ ಮೌಲ್ಯಮಾಪನದಲ್ಲಿ ಪಕ್ಷಪಾತ ನಡೆಯುತ್ತಿದ್ದು, ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

# ಪಿಡಿಓಗೆ ಜೀವ ಬೇದರಿಕೆ;ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿದ ಕೀಡಿ ಗೇಡಿಗಳ ಮೇಲೆ ಪ್ರಕರಣ ದಾಖಲಿಸಿ ಬಂಧಿಸಲು ಒತ್ತಾಯ


• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಚಿಮ್ಮಾಯಿದ್ಲಾಯಿ ಗ್ರಾಪಂ.ಪ್ರಭಾರಿ ಪಿಡಿಒ ಅಧಿಕಾರಿ ವಿಜಯಲಕ್ಷ್ಮಿ ಮೇತ್ರಿ ಅವರಿಗೆ ಕೆಲ ಕೀಡಿಗೇಡಿಗಳು ಪಿಡಿಒ ಅಧಿಕಾರಿಗೆ ಬ್ಲಾಕ್ಮೇಲ್ ಮಾಡಿ ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿ ಮಾನಸಿಕ ಕಿರುಕುಳ ನೀಡುತ್ತಿರುವ ಕೆಲ ಕೀಡಿಗೇಡಿಗಳಿಗೆ ಪ್ರಕರಣ ದಾಖಲಿಸಿ ಬಂಧಿಸಬೇಕು ಮತ್ತು ಪಿಡಿಒ ಅಧಿಕಾರಿ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ್ದು ರದ್ದುಪಡಿಸಬೇಕು ಎಂದು ಒತ್ತಾಯಿಸಿ ಪಂಚಾಯತ್ ಅಭಿವೃದ್ಧಿಕ್ಷೇಮಾಭಿವೃದ್ಧಿ ಸಂಘ ಮತ್ತು ಸರ್ಕಾರಿ ನೌಕರರ ಸಂಘ ಹಾಗೂ ಆರ್‌ಡಿಪಿಆರ್ ಇಲಾಖೆಯ ಅಧಿಕಾರಿಗಳು ಸಿಬ್ಬಂದಿಗಳು ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ,ಪೋಲಿಸ್ ವರಿಷ್ಠಾಧಿಕಾರಿಗಳಿಗೆ,ಜಿಪಂ. ಸಿಇಒ ಅವರಿಗೆ ಮನವಿಪತ್ರ ಸಲ್ಲಿಸಿದರು.

ಚಿಮ್ಮಾಯಿದ್ಲಾಯಿ ಗ್ರಾಮದ ನಾಲ್ಕು ಜನ ಪಿಡಿಒ ಅಧಿಕಾರಿಗೆ ಹಣಕ್ಕಾಗಿ ಬೇಡಿಕೆವಿಟ್ಟು ಹಣ ಕೊಡದಿದ್ದಲ್ಲಿ ಅಧಿಕಾರಿ ಮೇಲೆ ಚಿಂಚೋಳಿ ಪೋಲಿಸ್ ಠಾಣೆಯಲ್ಲಿ ಸುಳ್ಳು ಪ್ರಕರಣ ದಾಖಲಿಸಿದ್ದಾರೆ,ಹಾಗಾಗಿ ಪಿಡಿಒ ಮಾನಸಿಕವಾಗಿ ತುಂಬಾ ನೋಂದಿದ್ದಾರೆ,ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿದ ದುಶ್ಕರ್ಮಿಗಳಿಗೆ ಬಂಧಿಸಿ ಪಿಡಿಒ ಮೇಲೆ ಹಾಕಿದ ಸುಳ್ಳು ಪ್ರಕರಣ ರದ್ದುಪಡಿಸಬೇಕು ಎಂದು.

**ನಾಲ್ಕು ಜನ ಪಿಡಿಒ ಅಧಿಕಾರಿಗೆ ಹಣಕ್ಕಾಗಿ ಬೇಡಿಕೆ**

ಪಂಚಾಯತ್ ಅಭಿವೃದ್ಧಿ ಸಂಘದ ತಾಲ್ಲೂಕಾಧ್ಯಕ್ಷ ಪವನಕುಮಾರ ಮೆತ್ರಿ,ಸರ್ಕಾರಿ ನೌಕರರ ಸಂಘದ ಸಹ ಕಾರ್ಯದರ್ಶಿ ಜಗನ್ನಾಥ ಚಟ್ನಳ್ಳಿ ಒತ್ತಾಯಿಸಿದರು.ರಾಜ್ಯ ಪರಿಷತ್ ಸದಸ್ಯ ಮಲ್ಲಿಕಾರ್ಜುನ್ ಪಾಲಾಮೂರ್,ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ದೇವಿಂದ್ರಪ್ಪ ಹೋಳ್ಕರ್,ಕಾರ್ಯದರ್ಶಿ ಮಕ್ಸೂದ ಸಂಗಮೇಶ,ರಾಮಕೃಷ್ಣ,ವಿನೋಧ ಚವ್ಹಾಣ,ಜೋತಿ ಮರಜಾಪುರ,ವಿಜಯಲಕ್ಷ್ಮಿ,ಸುನೀಲ್,ಮತ್ತು ರೇವಣಸಿದ್ದಯ್ಯ,ನಾಗೇಂದ್ರಪ್ಪ,ಮಡಿವಾಳಯ್ಯ, ರವೀಂದ್ರಕುಮಾರ,ಬಕ್ಕಮ್ಮ,ಜಗದೇವಿ,ರೇವಣ ಸಿದ್ದಪ್ಪ,ರಾಜೇಂದ್ರ, ಸಂಜುಕುಮಾರ,ವಿಶಾಲ್,ಶರಣು ಸೇರಿದಂತೆ ಅನೇಕರಿದ್ದರು.





# ಶಸ್ತ್ರಚಿಕಿತ್ಸೆಯುವಕನಿಗೆ ಹೊಸ ಜೀವನ ನೀಡಿದ ಆದಿತ್ಯ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ

• ಉದಯವಾಹಿನಿ ಕಲಬುರಗಿ,

ಲಕ್ಷಾಂತರ ಜನರಲ್ಲಿ ಒಬ್ಬರಿಗೆ ಮಾತ್ರ ಕಾಣಿಸಿಕೊಳ್ಳುವ ಅಪರೂಪದ ಸ್ಪಾಂಡಿಲೋ ಎಪಿಫೈಸಿಯಲ್ ಡಿಸ್ಪ್ಲಾಸಿಯಾ ಎಂಬ ಹಿಪ್ ಜಾಯಿಂಟ್ ಕಾಯಿಲೆಯಿಂದ ಬಳಲುತ್ತಿದ್ದ ಯುವಕನಿಗೆ ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸುವ ಮೂಲಕ ನಗರದ ಆದಿತ್ಯ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯರ ತಂಡ ಹೊಸ ಜೀವನ ನೀಡಿದೆ.

ನಗರದ ಆದಿತ್ಯ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಆಸ್ಪತ್ರೆಯ ನಿರ್ದೇಶಕ, ಆರ್ಥೋಪೆಡಿಕ್ ತಜ್ಞರಾದ ಡಾ.ಆದಿತ್ಯ ಕಾಜಾ ಮಾತನಾಡಿ, ಹಿಪ್ ಜಾಯಿಂಟ್‌ಜಾಯಿಂಟ್‌ನ ದ್ವಿಪಾರ್ಶ್ವೀಯ ಸ್ಪಾಂಡಿಲೋ ಎಪಿಫೈಸಿಯಲ್ ಡಿಸ್ಪ್ಲಾಸಿಯಾ ಸಮಸ್ಯೆಯಿಂದ ಬಳಲುತ್ತಿದ್ದ ಯುವಕ ಹಲವು ವರ್ಷಗಳಿಂದ ತೀವ್ರ ನೋವು, ನಡೆಯಲು ತೊಂದರೆ ಹಾಗೂ ದೈನಂದಿನ ಚಟುವಟಿಕೆಗಳಲ್ಲಿ ಸಂಕಷ್ಟ ಅನುಭವಿಸುತ್ತಿದ್ದನು.

ಈ ಅಪರೂಪದ ಕಾಯಿಲೆ ಸುಮಾರು ಒಂದು ಲಕ್ಷದಿಂದ ಎರಡು ಲಕ್ಷ ಜನರಲ್ಲಿ ಒಬ್ಬರಿಗೆ ಮಾತ್ರ ಕಂಡುಬರುತ್ತದೆ ಎಂದು ತಿಳಿಸಿದರು. ಚಿಕಿತ್ಸೆಗಾಗಿ ರೋಗಿಯು ಕಲಬುರಗಿ, ಸೊಲ್ಲಾಪುರ ಸೇರಿದಂತೆ ಹಲವು ಆಸ್ಪತ್ರೆಗಳಿಗೆ ಭೇಟಿ ನೀಡಿದ್ದರೂ, ಸ್ಥಳೀಯವಾಗಿ ಇಂತಹ ಶಸ್ತ್ರಚಿಕಿತ್ಸೆ ಸಾಧ್ಯವಿಲ್ಲ ಎಂದು ವೈದ್ಯರು ತಿಳಿಸಿದ್ದರು.

ಕೆಲವರು ಮುಂಬೈನಿಂದ ತಜ್ಞ ವೈದ್ಯರನ್ನು ಕರೆಸಿ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದ್ದರು. ಬಳಿಕ ಸ್ನೇಹಿತರ ಸಲಹೆಯ ಮೇರೆಗೆ ಆದಿತ್ಯ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಗೆ ಭೇಟಿ ನೀಡಿದ ರೋಗಿಯನ್ನು ಆಸ್ಪತ್ರೆಯ ತಜ್ಞರ ತಂಡ ಸಮಗ್ರವಾಗಿ ಪರೀಕ್ಷಿಸಿ, ರೋಗವನ್ನು ನಿಖರವಾಗಿ ಪತ್ತೆಹಚ್ಚಿ ಚಿಕಿತ್ಸಾ ಯೋಜನೆ ರೂಪಿಸಿತು. ರೋಗಿಯ ಎರಡೂ ಹಿಪ್ ಜಾಯಿಂಟ್‌ಗಳು ಹಾನಿಗೊಳಗಾಗಿದ್ದರಿಂದ ಮೊದಲು ಹೆಚ್ಚು ಸಮಸ್ಯೆ ಉಂಟುಮಾಡುತ್ತಿದ್ದ ಎಡಭಾಗದ ಹಿಪ್‌ಗೆ ಕಳೆದ ಅಕ್ಟೋಬರ್ ತಿಂಗಳಲ್ಲಿ ಶಸ್ತ್ರಚಿಕಿತ್ಸೆ ನಡೆಸಲಾಯಿತು.





ಉದಯವಾಹಿನಿ ಚಿತ್ರ

**ಶಸ್ತ್ರಚಿಕಿತ್ಸೆಯ ಬಳಿಕ ಉತ್ತಮ ಚೇತರಿಕೆ ಕಂಡುಬಂದ ಹಿನ್ನೆಲೆಯಲ್ಲಿ ಮಾರ್ಚ್ ತಿಂಗಳಲ್ಲಿ ಬಲಭಾಗದ ಹಿಪ್ ಜಾಯಿಂಟ್‌ನ ಶಸ್ತ್ರಚಿಕಿತ್ಸೆಯನ್ನೂ ಯಶಸ್ವಿಯಾಗಿ ನೆರವೇರಿಸಲಾಯಿತು. ಎರಡೂ ಹಿಪ್ ಜಾಯಿಂಟ್‌ಗಳಿಗೆ ಟೋಟಲ್ ಹಿಪ್ ರಿಪ್ಲೇಸ್ಮೆಂಟ್ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನಡೆಸಲಾಗಿದ್ದು, ಪ್ರಸ್ತುತ ರೋಗಿಯು ನೋವಿನಿಂದ ಸಂಪೂರ್ಣ ಮುಕ್ತನಾಗಿ ಸಾಮಾನ್ಯ ಜೀವನ ನಡೆಸುತ್ತಿರುವುದಾಗಿ ತಿಳಿಸಿದರು.**
**ಡಾ.ಆದಿತ್ಯ ಕಾಜಾ**

# ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ - ಸಾರ್ವಜನಿಕರ ಅಹವಾಲುಗಳಿಗೆ ಸಕಾಲಕ್ಕೆ ಸ್ಪಂದಿಸಿ

## ಮಾನ್ಯ ಮುಖ್ಯಮಂತ್ರಿಗಳ ಸಭೆ ಮೂಲಕ ಸೂಚನೆ ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ

• ಉದಯವಾಹಿನಿ ಯಾದಗಿರಿ:

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ, ಇಲಾಖಾ ವ್ಯಾಪ್ತಿಯಲ್ಲಿ ಸಮಗ್ರ ಕ್ರಿಯಾಯೋಜನೆ, ಕರ್ತವ್ಯ ಆ್ಯಪ್‌ನಲ್ಲಿ ಕಡ್ಡಾಯ ನೋಂದಣಿ, ಸಾರ್ವಜನಿಕ ಕುಂದುಕೊರತೆಗಳ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬೆಂಗಳೂರಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು,ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು ಹಾಗೂ ಉಪಸಂರಕ್ಷಣಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಮೇಲೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಭಾರತ್ ಜೋಡೋ ಯುವಕ್ಲಬ್ಬಗಳ ರಚನೆಗೆ ಸೂಚಿಸಲಾಗಿದ್ದು, ಸರ್ಕಾರದಿಂದ ಸೂಕ್ತ ಮಾರ್ಗಸೂಚಿಗಳು ಬರಲಿವೆ. ಜಾತ್ಯಾತೀತ ಭಾವನೆ, ನಾಯಕತ್ವ,ಉದ್ಯೋಗ,ಕ್ರೀಡೆ, ಫಿಟ್ನೆಸ್ ಹಾಗೂ ಸಮುದಾಯ ಸೇವೆ ಆಲೋಚನೆ ಈ ಅಭಿಯಾನದಡಿ ಅಡಗಿದ್ದು, ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮಕ್ಕೆ ಸಜ್ಜುಗೊಳ್ಳುವಂತೆ ಅವರು ಸೂಚಿಸಿದರು.

ಸಾರ್ವಜನಿಕ ಕುಂದುಕೊರತೆ ವಿಲೇವಾರಿ ಹಾಗೂ ಸರ್ಕಾರ ನಿರ್ಧರಿಸಿದ ಪ್ರತಿ ಅಭಿಯಾನಗಳ ನಿರ್ವಹಣೆಗೆ ಸಮಿತಿಗಳನ್ನು ರಚಿಸಲಾಗುವುದು. ಕಾಲ ಕಾಲಕ್ಕೆ ಈ ಕುರಿತು ಪರಿಶೀಲಿಸಲಾಗುವುದು ಎಂದ ಅವರು, ಪ್ರತಿ ಇಲಾಖಾ ವ್ಯಾಪ್ತಿಯಲ್ಲಿ ತಮ್ಮ ಕೆಲಸಗಳು,ಯೋಜನೆಗಳ ಕುರಿತು ಸಿಟಿಜನ್ಸ್ ಚಾರ್ಟರ್ ನ್ನು ಮುಂದಿನ ಹತ್ತು ದಿನಗಳಲ್ಲಿ ಅಳವಡಿಸಬೇಕು. ಕಚೇರಿಗಳ ಸ್ವಚ್ಛತೆ , ವಿದ್ಯುತ್ ಸೌಕರ್ಯ, ವಿದ್ಯುತ್ ಬ್ಯಾಕ್‌ಅಪ್ ಸೌಲಭ್ಯ,ಶಾಲಾ,ಕಾಲೇಜು, ಆಸ್ಪತ್ರೆಗಳು,ವಸತಿ ನಿಲಯಗಳು,ಬಸ್ ನಿಲ್ದಾಣಗಳ ಹಾಗೂ ಕಚೇರಿಗಳ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಸಸಿಗಳನ್ನು ನೆಟ್ಟು ಹಸರೀಕರಣಗೊಳಿಸುವ ಕುರಿತು ಕ್ರಮ ಕೈಗೊಳ್ಳಲು ಅವರು ಸೂಚನೆ ನೀಡಿದರು. ಇಲಾಖಾವಾರು ಸಮಗ್ರ ಕ್ರಿಯಾಯೋಜನೆ ರೂಪಿಸಬೇಕು. ಮುಂಗಾರು ಹಂಗಾಮಿನಲ್ಲಿ ಮಳೆ ಕಡಿಮೆ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಕಂಟಿನ್ಜನ್ಸಿ ಪ್ಲ್ಯಾನ್ ಮುಂಬರುವ ಹದಿನೈದು ದಿನಗಳಲ್ಲಿ ಸಲ್ಲಿಸಬೇಕು ಎಂದು ಸೂಚಿಸಿದರು. ಮುಂಬರುವ ದಿನಗಳಲ್ಲಿ ಯುವ ಉದ್ಯೋಗ ಸೇತು ಮಿಷನ್, ಯಾದಗಿರಿ ಜಿಲ್ಲೆಯಿಂದ ಗರಿಷ್ಠ ಉದ್ಯೋಗ ನೋಂದಣಿ,ಒಂದು ಬಾರಿ ವಿದ್ಯುತ್ ಸಂಪರ್ಕ ಪರಿಹಾರ, ಲಕ್ಷಾಂತರ ಮನೆಗಳನ್ನು ಔಪಚಾರಿಕ ವಿದ್ಯುತ್ ಜಾಲಕ್ಕೆ ತರುವುದು,ಎಐ ಆಧಾರಿತ ಏಕೀಕೃತ ಹಾಗೂ ಸಮಗ್ರ ದೂರು ಪರಿಹಾರ ವ್ಯವಸ್ಥೆಗಳ ಕುರಿತು ಮಾರ್ಗಸೂಚಿ ಅನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು. ಕರ್ತವ್ಯ ಆ್ಯಪ್‌ನಲ್ಲಿ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನೋಂದಣಿ ಮಾಡುವಂತೆ ನೋಡಿಕೊಳ್ಳಲು ಸೂಚನೆ ನೀಡಿದ ಅವರು, 371 (ಜೆ ) ರಡಿ ಇಲಾಖಾವಾರು ಖಾಲಿಯಿರುವ ಗ್ರೂಪ್ ಸಿ ಹಾಗೂ ಡಿ ಹುದ್ದೆಗಳ ಬಗ್ಗೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



**ಸಾರ್ವಜನಿಕ ಅಹವಾಲುಗಳನ್ನು ನಿಗಧಿತ ಅವಧಿಯೊಳಗೆ ಶೀಘ್ರ ವಿಲೇವಾರಿಗೆ ಗಮನ ನೀಡಬೇಕು.ಐಪಿಜಿಆರ್ ಎಸ್,ಸಕಾಲ,ಇತರೆ ಕುಂದುಕೊರತೆ ಅರ್ಜಿಗಳನ್ನು ತಕ್ಷಣ ವಿಲೇವಾರಿ ಮಾಡಬೇಕು. ಜನಸ್ಪಂದನ ಮೂಲಕ ಪರಿಹರಿಸುವ ಉದ್ದೇಶ ಸಹ ಹೊಂದಲಾಗಿದೆ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು .**
**-ಜಿಲ್ಲಾಧಿಕಾರಿ ಶ್ರೀ ರಾಹುಲ್ ತುಕಾರಾಮ ಪಾಂಡ್ವೆ**

**ಭೂ- ಗ್ಯಾರಂಟಿ ಅಭಿಯಾನದಡಿ ಬಿ-ಖಾತಾದಿಂದ ಎ ಖಾತಾ**

**ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿದಂತೆ ಭೂ-ಗ್ಯಾರಂಟಿ ಅಭಿಯಾನದಡಿ ಬಿ-ಖಾತಾದಿಂದ ಎ ಖಾತಾಗೆ ಸಮಗ್ರ ಪರಿವರ್ತನೆಗೆ ಕ್ರಮ ಆಗಬೇಕು. ಸರ್ಕಾರಿ ಜಮೀನು ಒತ್ತುವರಿತೆರವುಗೊಳಿಸಬೇಕು ಜಮೀನುಗಳ ಆರ್. ಟಿ. ಸಿ ಅನುಷ್ಠಾನ,ಬಾಕಿ ಇರುವ ಕುರಿತು ಮುಂದಿನ ಹತ್ತು ದಿನಗಳಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.**

# ಮಿನಿ ನ್ಯೂಸ್

## ಪ್ರತಿಭಟನಾ ಮೆರವಣಿಗೆ

• ಉದಯವಾಹಿನಿ ಕುಂದಗೋಳ

ಸಂತೋಷ ಲಾಡ್ ಹಾಗೂ ಸಲಿಂ ಅಹ್ಮದ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕುಂದಗೋಳ ಗಾಳಿ ಮರೆಮ್ಮ ದೇಗುಲದಿಂದ ಅಂಬೇಡ್ಕರ್ ವೃತ್ತದ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮನವಿ ಸ್ವೀಕರಿಸಿದ ರಾಜ್ಯ ಕೆಪಿಸಿಸಿ ಸದಸ್ಯ ಅರವಿಂದ ಕಟಗಿ ಮಾತನಾಡಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಚಂದ್ರಶೇಖರ ಜುಟ್ಟಲ, ಪ.ಪಂ. ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಿರೇಸೂರ ಗ್ಯಾರಂಟಿ ಸಮಿತಿ ಅಧ್ಯಕ್ಷ ನೆಹರು ಪಾಟೀಲ, ಮುಖಂಡರಾದ ಶಿವಾನಂದ ಮುತ್ತಣ್ಣವರ, ಸಲೀಂ ಕ್ಯಾಲಕೊಂಡ, ಯಲ್ಲಪ್ಪಗೌಡ ಪಾಟೀಲ, ಸಿದ್ದಲಿಂಗಪ್ಪ ಕರೆಮ್ಮನವರ, ಖಯಿಂ ನಾಲಬಂದ, ರಾಯೇಸಾಬ ಕಳ್ಳಿಮನಿ, ಬಸವರಾಜ ಶಿರಸಂಗಿ, ಬಾಬಾಜಾನ್ ಮಿಶ್ರಿಕೋಟಿ, ಕಾಂತೇಶ ದೊಡ್ಡಮನಿ, ಶಂಭಯ್ಯ ನಿರಲಗಿ, ರಾಜು ದೊಡ್ಡಶಂಕರ, ಅಬ್ದುಲ್ ಖಾದರ ಜಿಲಾನಿ, ಅಡಿವೇಪ್ಪ ಹೆಬಸೂರ, ಕಾಂತು ದೊಡಮನಿ ಹಾಗೂ ಇತರರಿದ್ದರು.

## ಖೇತ ಬಚಾವ್ರೋ ತರಬೇತಿ ಶಿಬಿರ

• ಉದಯವಾಹಿನಿ ಮುನವಳ್ಳಿ,

ಜಿಲ್ಲಾ ಪಂಚಾಯತ ಬೆಳಗಾವಿ, ಕೃಷಿ ಇಲಾಖೆ ಸವದತ್ತಿ, ಆಯ್ .ಸಿ.ಎ.ಆರ್ ಕೆವಿಲ್.ಇ ಕೆವಿಕೆ ಮತ್ತಿಕೊಪ್ಪ ಇವರುಗಳ ಸಂಯೋಗದಲ್ಲಿ 2026-27 ನೇ ಸಾಲಿನ ಅತ್ಮಾ ಯೋಜನೆಯಡಿ ರೈತರ ತರಬೇತಿ ಗೊಂದಿ ಗ್ರಾಮದ ಜಗದೀಶ ಹಿರೇಮಠ ಇವರ ಸಾವಯವ ಕೃಷಿ ತೋಟದಲ್ಲಿ ಖೇತ ಬಚಾವ್ರೋ ಆಂದೋಲನ ತರಬೇತಿ ಶಿಬಿರ ಜರುಗಿತು. ತರಬೇತಿ ಶಿಬಿರ ಉದ್ಘಾಟಿಸಿದ ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು ಮಾತನಾಡಿ ಮಣ್ಣು ಫಲವತ್ತತೆಯಿಂದ ಇರಲು ಸಾವಯವ ಕೃಷಿಗೆ ರೈತರು ಮುಂದಾಗಬೇಕು ನಾವೆಲ್ಲರೂ ಆರೋಗ್ಯದಿಂದ ಇರಲು ಮಣ್ಣಿನ ಆರೋಗ್ಯ ಬಹಳ ಮುಖ್ಯ ಆದಕಾರಣ ಸಾವಯವ ಕೃಷಿಗೆ ರೈತರು ಹೆಚ್ಚಿನ ಆದ್ಯತೆ ನೀಡಿ ಉತ್ತಮ ಬೆಳೆ ಬೆಳೆದು ರೈತರು ಇದರ ಲಾಭ ಪಡೆಯಬೇಕೆಂದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ತ ಮಂಜುನಾಥ ಚೌರಡ್ಡಿ ಗೋ ಆಧಾರಿತ ಕೃಷಿಯಿಂದ ಮಣ್ಣಿನ ಫಲವತ್ತತೆ ಉತ್ತಮವಾಗಲು ಸಾಧ್ಯ ಎಂದರು.

## ಮುಖ್ಯಮಂತ್ರಿಗಳ ವಿರುದ್ಧ ಅವಹೇಳನಕಾರಿ ಪೋಸ್ಟ್

• ಉದಯವಾಹಿನಿ ಜಮಖಂಡಿ,

ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹಾಗೂ ಮಾನಹಾನಿಕರ ವಿಷಯಗಳನ್ನು ಪ್ರಸಾರ ಮಾಡಲಾಗುತ್ತಿದೆ ಎಂದು ಆರೋಪಿಸಿ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಿವಕುಮಾರ ದಾನಕನ್ನವರ ಅವರು ಜಮಖಂಡಿ ನಗರ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

ದೂರಿನಲ್ಲಿ, ಎಂಬ ಇನ್‌ಸ್ಟಾಗ್ರಾಂ ಖಾತೆಯ ಮೂಲಕ ಡಿ.ಕೆ. ಶಿವಕುಮಾರ ಅವರ ಬಗ್ಗೆ ಸುಳ್ಳು, ಆಧಾರರಹಿತ, ಅವಹೇಳನಕಾರಿ ಹಾಗೂ ಮಾನಹಾನಿಕರ ಪೋಸ್ಟ್‌ಗಳು, ವಿಡಿಯೋಗಳು, ರೀಲ್ಸ್ ಹಾಗೂ ಇತರೆ ವಿಷಯಗಳನ್ನು ಪ್ರಕಟಿಸಿ ವ್ಯಾಪಕವಾಗಿ ಪ್ರಸಾರ ಮಾಡಲಾಗುತ್ತಿದೆ ಎಂದು ಆರೋಪಿಸಲಾಗಿದೆ.

ಈ ರೀತಿಯ ವಿಷಯಗಳು ಸಾರ್ವಜನಿಕರಲ್ಲಿ ತಪ್ಪು ಕಲ್ಪನೆ ಮೂಡಿಸುವುದರ ಜೊತೆಗೆ ದ್ವೇಷ ಹಾಗೂ ಅಸಮಾಧಾನಕ್ಕೆ ಕಾರಣವಾಗುವ ಸಾಧ್ಯತೆ ಇದ್ದು, ಜನಪ್ರತಿನಿಧಿಯ ಗೌರವ ಮತ್ತು ಸಾರ್ವಜನಿಕ ಚಿತ್ರಣಕ್ಕೆ ಧಕ್ಕೆ ತರುವ ಉದ್ದೇಶ ಹೊಂದಿರುವಂತೆ ಕಂಡುಬರುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಇನ್‌ಸ್ಟಾಗ್ರಾಂ ಖಾತೆಯ ವಿರುದ್ಧ ಪ್ರಕರಣ ದಾಖಲಿಸಿ, ಸಂಬಂಧಪಟ್ಟವರನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವಂತೆ ಜಮಖಂಡಿ ಶಹರ ಪೊಲೀಸ್ ಠಾಣೆಯ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

## ಸಕಾಲಿಕ ಮಧ್ಯಪ್ರವೇಶದಿಂದ ವ್ಯಕ್ತಿಯ ಜೀವ ಉಳಿಸಿದ ನೈಟ್ ಬೀಟ್ ಸಿಬ್ಬಂದಿ

• ಉದಯವಾಹಿನಿ ಬಂಟ್ವಾಳ

ಬಿ.ಸಿ.ರೋಡ್ ಬಳಿಯ ಗೂಡಿನಬೈಲ್‌ನಲ್ಲಿರುವ ತನ್ನ ಮನೆಯಲ್ಲಿ ಹಠಾತ್ತನೆ ಅಸ್ವಸ್ಥಗೊಂಡ ವ್ಯಕ್ತಿಯ ಜೀವವನ್ನು ಗಸ್ತಿನಲ್ಲಿದ್ದ ಇಬ್ಬರು ರಾತ್ರಿ ಬೀಟ್ ಸಿಬ್ಬಂದಿ ಉಳಿಸಿದ್ದಾರೆ.

ತಡರಾತ್ರಿ ಅಶ್ರಫ್‌ಗೆ ತೀವ್ರ ಎದೆ ನೋವು ಮತ್ತು ಹೊಟ್ಟೆ ನೋವು ಕಾಣಿಸಿಕೊಂಡಿತು. ಪರಿಸ್ಥಿತಿ ಗಂಭೀರವಾಗುತ್ತಿದ್ದಂತೆ, ಕುಟುಂಬ ಸದಸ್ಯರು ಸಹಾಯಕ್ಕಾಗಿ ಕೂಗಿದರು. ಸಹಾಯಕ್ಕಾಗಿ ಕೂಗುತ್ತಿದ್ದ ಶಬ್ದ ರಾತ್ರಿ ಗಸ್ತು ತಂಡದ ಗಮನ ಸೆಳೆಯಿತು, ಅವರು ತಕ್ಷಣ ಸ್ಥಳಕ್ಕೆ ಧಾವಿಸಿದರು. ಅಶ್ರಫ್ ಅವರಿಗೆ ಸಣ್ಣ ಹೃದಯಾಘಾತವಾಗಿತ್ತು. ಬೀಟ್ ಸಿಬ್ಬಂದಿ ಪ್ರಥಮ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಸಾಗಿಸಲು ಸಹಾಯ ಮಾಡಿದರು.

ಬಂಟ್ವಾಳ ಪಟ್ಟಣ ಪೊಲೀಸ್ ಠಾಣೆಯ ಕಾನ್‌ಸ್ಟೆಬಲ್ ವಿನೋದ್ ಮತ್ತು ಗೃಹರಕ್ಷಕ ದಳದ ಸಿಬ್ಬಂದಿ ಜಯಗಣೇಶ್ ಅವರ ಸಮಯೋಚಿತ ಮನಸ್ಸು ಮತ್ತು ತ್ವರಿತ ಪ್ರತಿಕ್ರಿಯೆ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿದೆ.

## ಅನಂತ ಅಂಬಾನಿ ಕೊಲ್ಲೂರು ದೇವಳ ಭೇಟಿ, ವಿಶೇಷ ಪೂಜೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಕುಂದಾಪುರ:

ರಿಲಯನ್ಸ್ ಗ್ರೂಪ್‌ನ ಮುಕೇಶ್ ಅಂಬಾನಿ ಅವರ ಪುತ್ರ ಅನಂತ ಅಂಬಾನಿ ಅವರು ಭಾನುವಾರ ರಾತ್ರಿ ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ, ಶ್ರೀದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಮಂಗಳೂರು ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು, ವಿಶೇಷ ಭದ್ರತೆಯೊಂದಿಗೆ ರಸ್ತೆ ಮಾರ್ಗವಾಗಿ ಕೊಲ್ಲೂರಿಗೆ ತಲುಪಿದರು. ದೇವಸ್ಥಾನಕ್ಕೆ ಆಗಮಿಸಿದ ಅನಂತ ಅಂಬಾನಿ ಅವರಿಗೆ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಹಾಗೂ ಅರ್ಚಕರು ಆತ್ಮೀಯ ಸ್ವಾಗತ ಕೋರಿದರು. ತಂತ್ರಿಗಳಾದ ರಾಮಚಂದ್ರ ಅಡಿಗ ಮತ್ತು ನಿತ್ಯಾನಂದ ಅಡಿಗ ಅವರ ಮಾರ್ಗದರ್ಶನದಲ್ಲಿ ಅರ್ಚಕರಾದ ವಿಘ್ನೇಶ್ ಅಡಿಗ ಹಾಗೂ ಸುರೇಶ್ ಭಟ್ ನೇತೃತ್ವದಲ್ಲಿ ಸಂಕಲ್ಪ, ವಿಶೇಷ ಪ್ರಾರ್ಥನೆ ನೆರವೇರಿಸಲಾಯಿತು. ಬಳಿಕ ಅವರು ಮಂಗಳಾರತಿ ಸ್ವೀಕರಿಸಿ ದೇವಿಯ ಪ್ರಸಾದ ಪಡೆದರು. ಶ್ರೀಕ್ಷೇತ್ರದ ವತಿಯಿಂದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಕೆ. ಬಾಬು ಶೆಟ್ಟಿ ತಗ್ಗರ್ಸೆ ಹಾಗೂ ಕಾರ್ಯನಿರ್ವಹಣಾಧಿಕಾರಿ ಪ್ರಶಾಂತ ಕುಮಾರ್ ಶೆಟ್ಟಿ ಅವರು ಅನಂತ ಅಂಬಾನಿ ಅವರನ್ನು ಸನ್ಮಾನಿಸಿ ದೇವರ ಪ್ರಸಾದ ನೀಡಿ ಗೌರವಿಸಿದರು.

